VOLUME: 16 | 18 MARCH 2026 | ಬುಧವಾರ | RS: 2 | PAGE: 06 ISSUE: 52 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ರಶ್ಮಿಕಾ ಮಂದಣ್ಣ ತಮ್ಮ ಇನ್‌ಸ್ಟಾಗ್ರಾಮ್ ಸ್ಟೋರಿಯಲ್ಲಿ ಹೊಸ ಅಪ್‌ಡೇಟ್ ಒಂದನ್ನು ಹಂಚಿಕೊಂಡಿದ್ದಾರೆ. ರವೀಂದ್ರ ಪುಲ್ಲೆ ನಿರ್ದೇಶನದ 'ಮೈಸಾ' ಚಿತ್ರದ ಚಿತ್ರೀಕರಣಕ್ಕೆ ಅವರು ಮರಳಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಕೋಟಿ ಕೋಟಿ ಆದಾಯವಿದ್ದರೂ ಅಭಿವೃದ್ಧಿ ಶೂನ್ಯ

ಮಂಗಳೂರು: ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನ ರಾಜ್ಯದ ಶ್ರೀಮಂತ ದೇಗುಲಗಳಲ್ಲಿ ಒಂದು. ಕೋಟ್ಯಂತರ ರೂ ಆದಾಯ ತಂದು ಕೊಡುವ ಈ ದೇವಸ್ಥಾನಕ್ಕೆ ಬರುವ ಭಕ್ತರಿಗೆ ಮಾತ್ರ ಸೂಕ್ತ ಮೂಲಭೂತ ಸೌಲಭ್ಯಗಳಿಲ್ಲ ಎಂಬುದು ದಶಕಗಳ ಆರೋಪ. ಸಂಪತ್ತು ಇದ್ದರೂ ಇಚ್ಛಾಶಕ್ತಿ, ಕ್ರಿಯಾಶಕ್ತಿ ಇಲ್ಲದ ಪರಿಣಾಮ ಇಲ್ಲಿ ಸರಿಯಾದ ವ್ಯವಸ್ಥೆ ಇಲ್ಲದೆ ಭಕ್ತರು ಪರದಾಡುವಂತಾಗಿದೆ.

ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನ ಯಾರಿಗೆ ತಾನೆ ಗೊತ್ತಿಲ್ಲ ಹೇಳಿ. ಪ್ರಸಿದ್ಧ ನಾಗ ಕ್ಷೇತ್ರ ಅಂತಾನೆ ಕರೆಸಿಕೊಂಡಿರುವ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ತಾಲೂಕಿನ ಸುಬ್ರಹ್ಮಣ್ಯದಲ್ಲಿರುವ ಈ ದೇವಸ್ಥಾನಕ್ಕೆ ಜಿಲ್ಲೆ, ಹೊರ ಜಿಲ್ಲೆ, ಹೊರ ರಾಜ್ಯಗಳಿಂದಲೂ ಸಾಕಷ್ಟು ಸಂಖ್ಯೆಯಲ್ಲಿ ಭಕ್ತರು ಬರ್ತಾರೆ. ಆದರೆ ಇತಿಹಾಸ ಪ್ರಸಿದ್ಧವಾಗಿರುವ ಈ ದೇವಸ್ಥಾನದಲ್ಲಿ ವ್ಯವಸ್ಥೆಗಳು ಮಾತ್ರ ಇನ್ನು ಇತಿಹಾಸ ಕಾಲದ್ದೆ ಇದೆ ಎಂಬುದು ಭಕ್ತರ ಆರೋಪ.

ದೇವಳದ ಸಮಗ್ರ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲ್ಯಾನ್ ಯೋಜನೆ ಜಾರಿಗೊಳಿಸಿ 17 ವರ್ಷವಾದರೂ ಇನ್ನು ಕೂಡ ಪೂರ್ಣವಾಗಿಲ್ಲ ಎಂಬದು ಇಲ್ಲಿನ ವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ. ಒಟ್ಟು 604 ಕೋಟಿ ರೂ ಕಾಮಗಾರಿಯಲ್ಲಿ ಈಗಾಗಲೇ ಎರಡು ಹಂತವನ್ನೂ ಪೂರ್ಣಗೊಳಿಸಿದ್ದು, ಈಗ ಮೂರನೇ ಹಂತದ ಕಾಮಗಾರಿಗಳ ಯೋಜನೆ, ಅಂದಾಜುಪಟ್ಟಿ ಸಿದ್ದಗೊಳಿಸಿ ಪಿಡಬ್ಲ್ಯುಡಿ ಇಲಾಖೆಯಿಂದ ಅನುಮೋದನೆ ಪಡೆದು ಸರ್ಕಾರಕ್ಕೆ ಸಲ್ಲಿಸಲಾಗಿದ್ದರು ಸಹ ಇನ್ನು ಸಹ ಗ್ರೀನ್ ಸಿಗ್ನಲ್ ಸಿಕ್ಕಿಲ್ಲ.

ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ಸಂಬಂಧಿಸಿದಂತೆ 600 ಕೋಟಿ ರೂ ಎಫ್



ಡಿ ಇದ್ದರೂ, ವಾರ್ಷಿಕ 150 ಕೋಟಿಗೂ ಹೆಚ್ಚು ಆದಾಯವಿದ್ದರು ಸಹ ಈ ಹಣವನ್ನು ದೇವಳದ ಅಭಿವೃದ್ಧಿ ಕಾರ್ಯಗಳಿಗೆ ಬಳಸಬೇಕೆಂದರೆ ಸರ್ಕಾರದ, ಹಣಕಾಸು ಇಲಾಖೆಯ ಅನುಮೋದನೆ ಕಡ್ಡಾಯವಾಗಿದೆ.

ಹೀಗಾಗಿ ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ಇಚ್ಛಾಶಕ್ತಿ, ಕ್ರಿಯಾಶಕ್ತಿ ಇಲ್ಲದೆ, ಅವೈಜ್ಞಾನಿಕ ತೀರ್ಮಾನಗಳಿಂದ ಅಭಿವೃದ್ಧಿಗೆ ಹಿನ್ನಡೆಯಾಗುತ್ತಿದೆ ಎಂಬ ಆರೋಪವಿದೆ.

ದೇವಳದಲ್ಲಿ ಸರ್ಪ ಸಂಸ್ಕಾರ ಸೇವೆ ಬಹಳಷ್ಟು ಪ್ರಸಿದ್ಧಿ ಪಡೆದಿದ್ದು ಪ್ರಸ್ತುತ ದಿನವೊಂದಕ್ಕೆ 175 ಭಕ್ತರಿಗೆ ಮಾತ್ರ ಸೇವೆ ನಡೆಸಲು ಅವಕಾಶವಿದ್ದು, ಎರಡು ತಿಂಗಳ ಕಾಲ ಬುಕ್ಕಿಂಗ್‌ಗೆ ಕಾಯಬೇಕಾದ ಪರಿಸ್ಥಿತಿಯಿದೆ. ಹೀಗಾಗಿ ಸರ್ಪ ಸಂಸ್ಕಾರ ಯಾಗಶಾಲೆಯ ನಿರ್ಮಾಣವಾಗಬೇಕಿದೆ. ಒಂದು ಸಾವಿರ ಮಂದಿ ಆಶ್ಲೇಷ ಬಲಿ ಪೂಜೆ ಸಲ್ಲಿಸಲು ಪೂಜಾ ಮಂದಿರವೂ ನಿರ್ಮಾಣವಾಗಬೇಕಿದೆ.

ಸದ್ಯ 25 ವರ್ಷ ಹಿಂದಿನ ಭೋಜನಶಾಲೆಯಿದ್ದು ಇನ್ನು ಮುಂದೆ ಏಕಕಾಲದಲ್ಲಿ ಐದು ಸಾವಿರ ಮಂದಿ ಕೂತು ಊಟ ಮಾಡುವ ಭೋಜನ ಶಾಲೆ ನಿರ್ಮಾಣವಾಗಬೇಕಿದೆ.

ಸದ್ಯ ದೇವಳದಲ್ಲಿ ವಸತಿ ವ್ಯವಸ್ಥೆ ಸರಿಯಾಗಿ ಇಲ್ಲದ ಕಾರಣ ಸೀಸನ್ ಸಮಯದಲ್ಲಿ ಭಕ್ತರು ರಥಬೀದಿಯಲ್ಲೆ ಮಲಗಬೇಕಾದ ಪರಿಸ್ಥಿತಿಯಿದೆ. ಹೀಗಾಗಿ 604 ಕೋಟಿ ರೂ ಗಳ ಮಾಸ್ಟರ್ ಪ್ಲ್ಯಾನ್ ನಲ್ಲಿ ಪಾರಂಪರಿಕ ರಥಬೀದಿ, 800 ಕೊಠಡಿಗಳ ವಸತಿಗೃಹ, ಶೌಚಾಲಯ, ಗೆಸ್ಟ್ ಹೌಸ್, ಸುತ್ತು ಪೌಳಿ ದುರಸ್ತಿ ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳು ಆಗಬೇಕಾಗಿದೆ.

ಸದ್ಯ ಈ ಬಾರಿಯ ಬಜೆಟ್‌ನಲ್ಲಿ ಕುಕ್ಕೆ ಸುಬ್ರಹ್ಮಣ್ಯಕ್ಕೆ ಪ್ರಾಧಿಕಾರ ರಚಿಸುವ ಬಗ್ಗೆ ಸರ್ಕಾರ ಘೋಷಣೆ ಮಾಡಿದ್ದು, ಇನ್ನಾದರೂ ಸಮರ್ಪಕವಾಗಿ ಅಭಿವೃದ್ಧಿ ಕಾರ್ಯಗಳು ಆಗುತ್ತಾ ಅಂತಾ ಕಾದು ನೋಡಬೇಕಾಗಿದೆ.

## ತಂದೆಯಿಂದಲೇ ಮಗುವಿನ ಹತ್ಯೆ...?

ಬೆಳಗಾವಿ: 15 ದಿನಗಳ ಹಿಂದೆಯಷ್ಟೇ ಜನಿಸಿದ್ದ ಮಗು ಏಕಾಏಕಿ ಸಾವನ್ನಪ್ಪಿದ್ದು, ತಂದೆ ಮೇಲೆ ಅನುಮಾನ ವ್ಯಕ್ತವಾಗಿದೆ. ಉಕ್ಕಡ ಗ್ರಾಮದಲ್ಲಿ 15 ದಿನಗಳ ಹಿಂದೆಯಷ್ಟೇ ಜನಿಸಿದ್ದ ಮಗು ಪ್ರಿಯಾಂಕಾ ಇಂದು (ಮಾರ್ಚ್ 17) ಏಕಾಏಕಿ ಸಾವನ್ನಪ್ಪಿದ್ದು, ತಂದೆಯೇ ಮಗುವಿಗೆ ವಿಷ ಪ್ರಾಶನ ಮಾಡಿರುವ ಆರೋಪ ಕೇಳಿಬಂದಿದೆ. ಬಿಮ್ಸ್ ಆಸ್ಪತ್ರೆ ಮುಂದೆ ಮಗುವಿನ ಶವವಿಟ್ಟುಕೊಂಡು ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದು, ಮತ್ತೊಂದೆಡೆ ಮಗುವಿನ ತಂದೆ ಭೀಮರಾಯ ತಲೆಮರೆಸಿಕೊಂಡಿದ್ದಾನೆ. ಬಿಮ್ಸ್ ಆಸ್ಪತ್ರೆಗೆ ಡಿಸಿಪಿ ನಾರಾಯಣ್ ಬರಮನಿ ದೌಡಾಯಿಸಿ ಪರಿಶೀಲನೆ ನಡೆಸಿದ್ದು, ಮರಣೋತ್ತರ ಪರೀಕ್ಷೆ ವರದಿ ಬಳಿಕ ಮುಂದಿನ ಕ್ರಮದ ಭರವಸೆ ನೀಡಿದ್ದಾರೆ.

ಹೆರಿಗೆ ಹಿನ್ನೆಲೆ ಶೀಲಾ ತವರುಮನೆ ಉಕ್ಕಡ ಗ್ರಾಮದಲ್ಲಿ ಇದ್ದಳು. ಹೀಗಾಗಿ ಭೀಮರಾಯ ಮಧ್ಯಾಹ್ನ ಉಕ್ಕಡ ಗ್ರಾಮ ಆಗಮಿಸಿ ಪತ್ನಿ ಹಾಗೂ ಮಗು ಪ್ರಿಯಾಂಕಾಳನ್ನ ನೋಡಿಕೊಂಡು ವಾಪಸ್ ತಮ್ಮೂರು ಕಡೆ ಹೋಗಿದ್ದಾನೆ. ಆದ್ರೆ, ಏಕಾಏಕಿ ಮಗು ಸಾವನ್ನಪ್ಪಿದೆ. ಇದರಿಂದ ಪೋಷಕರು ಕಂಗಾಲಾಗಿದ್ದು, ಮಗು ಚೆನ್ನಾಗಿತ್ತು ದಿಢೀರ್ ಏನಾಯ್ತು ಎಂದು ಯೋಚಿಸುವಾಗ ಮೃತ ಮಗುವಿನ ತಂದೆ ಭೀಮರಾಯನ ಮೇಲೆ ಅನುಮಾನ ಬಂದಿದೆ.

ಸಣ್ಣದೊಂದು ಟ್ಯೂಬ್ ಹಿಡಿದುಕೊಂಡು ಬಂದಿದ್ದ. ಅದೇ ಟ್ಯೂಬ್‌ನಿಂದ ಮಗುವಿಗೆ ಕುಡಿಸಿದ್ದಾನೆ ಎಂದು ಪತ್ನಿ ಶೀಲಾ ಹಾಗೂ ಆಕೆಯ ಪೋಷಕರಿಂದ ಗಂಭೀರ ಆರೋಪ ಮಾಡಿದ್ದಾರೆ. ಇನ್ನೊಂದೆಡೆ ಭೀಮರಾಯ ಸಹ ನಾಪತ್ತೆಯಾಗಿದ್ದು, ಮತ್ತಷ್ಟು ಅನುಮಾನಕ್ಕೆ ಕಾರಣವಾಗಿದೆ. ಸದ್ಯ ಬಿಮ್ಸ್ ಆಸ್ಪತ್ರೆ ಮುಂದೆ ಮಗುವಿನ ಶವವಿಟ್ಟುಕೊಂಡು ಆಕ್ರೋಶ ಹೊರಹಾಕಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಡಿಸಿಪಿ ನಾರಾಯಣ್ ಬರಮನಿ ಆಗಮಿಸಿ ಪರಿಶೀಲನೆ ಮಾಡಿದ್ದು, ಮೃತ ಮಗುವಿನ ಮರಣೋತ್ತರ ಪರೀಕ್ಷೆ ಬಳಿಕ ಸತ್ಯ ಆಚೆ ಬರಲಿದೆ.

## ಶರಣಾಗಲ್ಲ: ಇಸ್ರೇಲ್

ಟೆಹ್ರಾನ್: ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷದ ನಡುವೆಯೇ ಅಮೆರಿಕ, ಇಸ್ರೇಲ್ ಶರಣಾಗದ ಹೊರತು ಮಾತುಕತೆಯ ಪ್ರಶ್ನೆಯೇ ಇಲ್ಲ ಎಂದು ಇರಾನ್ ಸರ್ವೋಚ್ಚ ನಾಯಕ ಮೊಜ್ತಾಬಾ ಖಮೇನಿ ಕಡ್ಡಿ ಮುರಿದಂತೆ ಹೇಳಿದ್ದಾರೆ.



ಇರಾನ್ ಸರ್ವೋಚ್ಚ ನಾಯಕರಾಗಿ ಆಯ್ಕೆಯಾದ ಬಳಿಕ ತಮ್ಮ ಮೊದಲ ವಿದೇಶಾಂಗ ನೀತಿ ಅಧಿವೇಶನದಲ್ಲಿ ಶಪಥ ಮಾಡಿರುವ ಮೊಜ್ತಾಬಾ ಖಮೇನಿ, ಅಮೆರಿಕದೊಂದಿಗಿನ ಶಾಂತಿ ಮಾತುಕತೆಯನ್ನು ಕಡಿಮೆ ಮಾಡುವ ಪ್ರಸ್ತಾಪಗಳನ್ನು ತಿರಸ್ಕರಿಸಿದ್ದಾರೆ. ಅಲ್ಲದೆ ಇದೀಗ ನಡೆಯುತ್ತಿರುವ ಯುದ್ಧದಲ್ಲಿ ಅಮೆರಿಕ ಮತ್ತು ಇಸ್ರೇಲ್ ನಮ್ಮೆದುರು ಮಂಡಿಯೂರಬೇಕು ಎಂದು ಪ್ರತಿಪಾದಿಸಿದ್ದಾರೆ.

'ಆ ಎರಡೂ ದೇಶಗಳು ಸೋಲನ್ನು ಒಪ್ಪಿಕೊಳ್ಳಬೇಕು. ಶಾಂತಿ ಮಾತುಕತೆಯ ಸಮಯ ಮುಗಿದುಹೋಗಿದೆ. ಇರಾನ್ ಅನುಭವಿಸಿದ ಹಾನಿಗಳಿಗೆ ಪ್ರತಿಯಾಗಿ ಇಸ್ರೇಲ್ ಮತ್ತು ಅಮೆರಿಕ ಬೆಲೆ ತೆರಬೇಕಾಗುತ್ತದೆ ಎಂದು ಅವರು ಘೋಷಿಸಿದ್ದಾರೆ.

ಇರಾನಿನ ಅಧಿಕಾರಿಯೊಬ್ಬರ ಪ್ರಕಾರ, ಸುಪ್ರೀಂ ನಾಯಕ ಮೊಜ್ತಬಾ ಖಮೇನಿ ಅಮೆರಿಕ ಮತ್ತು ಇಸ್ರೇಲ್ ವಿರುದ್ಧ ಟೆಹ್ರಾನ್‌ನ ಸೇಡು ಬಹಳ ಗಂಭೀರವಾದುದು ಎಂದು ಕಠಿಣ ಎಚ್ಚರಿಕೆ ನೀಡಿದ್ದಾರೆ.

ಹಾಗೇ, ಮೊಜ್ತಬಾ ಅವರು "ಶಾಂತಿಗೆ ಇದು ಸರಿಯಾದ ಸಮಯವಲ್ಲ" ಎಂದೂ ಹೇಳಿದ್ದಾರೆ.

ಅಮೆರಿಕ ಮತ್ತು ಇಸ್ರೇಲ್ ನಡೆಸಿದ ಜಂಟಿ ದಾಳಿಯಲ್ಲಿ ಮೊಜ್ತಬಾ ಖಮೇನಿ ಗಂಭೀರವಾಗಿ ಗಾಯಗೊಂಡಿದ್ದಾರೆ ಮತ್ತು ವಿರೂಪಗೊಂಡಿದ್ದಾರೆ ಎಂದು ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಹೇಳಿದ ಬೆನ್ನಲ್ಲೇ ಅವರು ಈ ಪ್ರತಿಕ್ರಿಯೆ ನೀಡಿದ್ದಾರೆ.

## ಸಿಎಂ ಡಿನ್ನರ್‌ಗೆ ಬಾರದ ಡಿಕೆಶಿ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ತಮ್ಮ ಅಧಿಕೃತ ನಿವಾಸ ಕಾವೇರಿಯಲ್ಲಿ 15–16 ಸಚಿವರಿಗಾಗಿ ಭೋಜನ ಕೂಟ ಆಯೋಜಿಸಿದ್ದರು.

ಆದರೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಹಾಜರಾಗಿರಲಿಲ್ಲ. ಆದರೆ ಸಿದ್ದರಾಮಯ್ಯ ಅವರು ಡಿ.ಕೆ.ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿರುವ ತಮ್ಮ ಕಚೇರಿಗೆ ಕರೆಸಿ ಮಾತನಾಡಿದರು. ಜೊತೆಗೆ ನಮ್ಮ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ಎಂದು ಸಂದೇಶ ರವಾನಿಸಿದ್ದಾರೆ.

ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ, ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್, ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಮತ್ತು ಅರಣ್ಯ ಸಚಿವ ಈಶ್ವರ್ ಖಂಡ್ರೆ ಭೋಜನ ಕೂಟದಲ್ಲಿ ಭಾಗವಹಿಸಿದ್ದವರು ಎಂದು ಮೂಲಗಳು ತಿಳಿಸಿವೆ.

ಭೋಜನ ಕೂಟದಲ್ಲಿ ಐದು ರಾಜ್ಯಗಳ ಚುನಾವಣೆ, ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಉಪಚುನಾವಣೆ ಮತ್ತು ಸಚಿವ ಸಂಪುಟ ಪುನರ್ರಚನೆಯ ಬಗ್ಗೆ ಚರ್ಚಿಸಲಾಯಿತು. ಪುನರ್ರಚನೆಗೆ ಕಾಂಗ್ರೆಸ್ ಹೈಕಮಾಂಡ್ ಅನುಮೋದನೆ ಪಡೆಯಲು ಸಿದ್ದರಾಮಯ್ಯ ಶೀಘ್ರದಲ್ಲೇ ದೆಹಲಿಗೆ ಭೇಟಿ ನೀಡುವ ಸಾಧ್ಯತೆಯಿದೆ.

ಎಸ್‌ಸಿ ಬಲಪಂಥೀಯರು, ಭೋವಿಗಳು ಮತ್ತು ಲಂಬಾಣಿಗಳನ್ನು ಪ್ರತಿನಿಧಿಸುವ ಸಚಿವರು ಸೇರಿದಂತೆ ಶಾಸಕರ ನಿಯೋಗ ಸೋಮವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿತು.

ಪರಿಶಿಷ್ಟ ಜಾತಿಗಳಿಗೆ (ಎಸ್‌ಸಿ) 15% ಆಂತರಿಕ ಕೋಟಾವನ್ನು 50% ಮಿತಿಯೊಂದಿಗೆ ಜಾರಿಗೆ ತರದಂತೆ ಮನವಿ ಮಾಡಿದೆ, ಏಕೆಂದರೆ ಇದು ಕಾನೂನು ತೊಡಕುಗಳು ಮತ್ತು ಹೆಚ್ಚಿನ ಸಮುದಾಯಗಳಿಗೆ ಅನ್ಯಾಯವಾಗುತ್ತದೆ. ಮಾರ್ಚ್ 27 ರಂದು ಆಂತರಿಕ ಕೋಟಾವನ್ನು ನಿರ್ಧರಿಸಲು ಕರೆಯಲಾದ ವಿಶೇಷ ಸಚಿವ ಸಂಪುಟ ಸಭೆಗೆ ಮುಂಚಿತವಾಗಿ ಇದು ಬಂದಿದೆ.

## ಆರೋಗ್ಯ ಇಲಾಖೆಯ ಅಕ್ರಮಗಳ ಬಿಚ್ಚಿಟ್ಟ ಅಶೋಕ್

ಬೆಂಗಳೂರು: ಹಿರಿಯ ಅಧಿಕಾರಿಗಳ ನಡುವಿನ ಸಂಘರ್ಷದಿಂದ ಆರೋಗ್ಯ ಇಲಾಖೆ ಅನಾರೋಗ್ಯಕ್ಕೆ ಈಡಾಗಿದೆ. ಇದರಿಂದಲೇ ಇಲಾಖೆಯಲ್ಲಿ ಯಾವುದೇ ಕೆಲಸ ನಡೆಯುತ್ತಿಲ್ಲ. ಮೊದಲು ಅಧಿಕಾರಿಗಳ ಒಳಜಗಳವನ್ನು ಸರಿ ಮಾಡಿ ಆರೋಗ್ಯ ಇಲಾಖೆಯನ್ನು ಸುಧಾರಣೆ ಮಾಡಬೇಕು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದರು.

ಆರೋಗ್ಯ ಇಲಾಖೆಯ ಸಮಸ್ಯೆ ಕುರಿತು ವಿಧಾನಸಭೆಯಲ್ಲಿ ಮಾತನಾಡಿದ ಅವರು, ಗೃಹ, ಕಂದಾಯ ಹಾಗೂ ಆರೋಗ್ಯ ಇಲಾಖೆಯನ್ನು ಜನರು ಹೆಚ್ಚು ಅವಲಂಬಿಸಿದ್ದಾರೆ. ಈ ಪೈಕಿ ಆರೋಗ್ಯ ಇಲಾಖೆ ಅನಾರೋಗ್ಯಕ್ಕೀಡಾಗಿದೆ. ಔಷಧಿಗಳ ಕೊರತೆ ಬಗ್ಗೆ ಹಿಂದಿನ ಬೆಳಗಾವಿ ಅಧಿವೇಶನದಲ್ಲಿ ಮಾತಾಡಿದಾಗ, ಸಚಿವ ದಿನೇಶ್ ಗುಂಡೂರಾವ್ ಉತ್ತರ ನೀಡಿ, ಔಷಧಿ ಖರೀದಿಗೆ ಕೂಡಲೇ ಟೆಂಡರ್ ಕರೆಯುತ್ತೇವೆ ಎಂದು ತಿಳಿಸಿದ್ದರು.

ಇತ್ತೀಚೆಗೆ ವೈದ್ಯಾಧಿಕಾರಿಗಳ ಸಂಘ ಸರ್ಕಾರಕ್ಕೆ ಪತ್ರ ಬರೆದಿದೆ. ಔಷಧಿ ಕೊರತೆಯನ್ನು ಅನೇಕ ಬಾರಿ ಸರ್ಕಾರದ ಗಮನಕ್ಕೆ ತಂದಿದ್ದು, ಇದರಿಂದಲೇ ರೋಗಿಗಳು ಹಾಗೂ ವೈದ್ಯರ ನಡುವೆ ಸಂಘರ್ಷ ಹೆಚ್ಚಿದೆ ಎಂದು ಸಂಘ ಹೇಳಿದೆ. ಇದೇ ಸಂಘ ಪ್ರತಿಭಟನೆ ಕೂಡ ಮಾಡಿದೆ ಎಂದರು.

ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತ ಸುಮಾರು 8 ತಿಂಗಳಿಂದ ಕಚೇರಿಗೆ ಬಂದಿಲ್ಲ. ಅವರು ವರ್ಕ್ ಫ್ರಂ ಹೋಮ್ ಮಾಡುತ್ತಾರೆಯೇ? ಹರ್ಷ ಗುಪ್ತ ಅವರೇ ಕಡತ ಸಿದ್ಧ ಮಾಡಿಕೊಂಡು ಅದಕ್ಕೆ ಸಹಿ ಹಾಕಿ ಕಳಿಸುತ್ತಾರೆ. ಅಂದರೆ ಇಲ್ಲಿ ಏಕ ಕಡತದ ಪ್ರಕ್ರಿಯೆ ನಡೆಯುತ್ತಿದೆ.

ಅವರು ಅಡಳಿತ ಮತ್ತು ಸಿಬ್ಬಂದಿ ಸುಧಾರಣಾ ಇಲಾಖೆಗೆ ಪತ್ರ ಬರೆದಿದ್ದಾರೆ. ಈ ಪತ್ರದಲ್ಲಿ, ಆರೋಗ್ಯ ಇಲಾಖೆಯ ಕೆಳ ಹಂತದ ಅಧಿಕಾರಿಗಳು ಪರಿಶೀಲನೆ ನಡೆಸದೆ ಕಡತಗಳನ್ನು ಕಳುಹಿಸುತ್ತಿದ್ದಾರೆ, ಉಪ ಕಾರ್ಯದರ್ಶಿ–1 ಮೇಲ್ವಿಚಾರಣೆ ಮಾಡುತ್ತಿಲ್ಲ, ಸಮಗ್ರ ಪುನರ್‌ರಚನೆಯ ಅಗತ್ಯವಿದೆ, ಉನ್ನತ ಸ್ಥಾನದ ಅಧಿಕಾರಿಗಳ ಹುದ್ದೆಗೆ ನೇರ ನೇಮಕ ಮಾಡಿ ಎಂದು ಕೋರಿದ್ದಾರೆ.

ನಂತರ ಹರ್ಷ ಗುಪ್ತ ವಿರುದ್ಧ ಸಚಿವಾಲಯ ನೌಕರರ ಸಂಘದಿಂದ ಪತ್ರ ಬರೆದಿದ್ದಾರೆ. ಈ ಪತ್ರದಲ್ಲಿ, ಹರ್ಷ ಗುಪ್ತ ತಮ್ಮ ವ್ಯಾಪ್ತಿ ಮೀರಿ ಉದ್ಧಟತನದಿಂದ ಪತ್ರ ಬರೆದಿದ್ದಾರೆ, ಈ ಪತ್ರವನ್ನು ಹಿಂಪಡೆಯಬೇಕು, ಈ ರೀತಿ ಅಪಮಾನ ಹಾಗೂ ನಿಂದನೆಯ ಪದ ಬಳಸಿ ನೌಕರರ ಮನೋಸ್ಥೈರ್ಯ ಕುಗ್ಗಿಸುವ ಪ್ರಯತ್ನವು ಅವರ ವಿಚಿತ್ರ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ, ಇದು ಸಮರ್ಥ ಅಧಿಕಾರಿಯ ಲಕ್ಷಣವಲ್ಲ ಎಂದು ಬರೆದಿದ್ದಾರೆ.



ಯುಕೆಪಿ, ಮಹದಾಯಿ, ತುಂಗಭದ್ರಾ, ಮೇಕೆದಾಟು ಮತ್ತಿತರ ಯೋಜನೆಗಳ ಬಗ್ಗೆ ಅಡೆತಡೆಗಳ ನಿವಾರಣೆಗೆ ಕೈಗೊಳ್ಳಬೇಕಾದ ಕಾನೂನು ಕ್ರಮಗಳ ಬಗ್ಗೆ ದೆಹಲಿಯ ಕರ್ನಾಟಕ ಭವನದಲ್ಲಿ ಮಂಗಳವಾರ ಕರ್ನಾಟಕ ಪರ ವಕೀಲರೊಂದಿಗೆ ಚರ್ಚಿಸಲಾಯಿತು. ಈ ಸಂದರ್ಭದಲ್ಲಿ ಸಚಿವರಾದ ಎಚ್ ಕೆ ಪಾಟೀಲ, ಎಂ ಬಿ ಪಾಟೀಲ, ಬೋಸರಾಜು, ದೆಹಲಿಯಲ್ಲಿ ಕರ್ನಾಟಕದ ವಿಶೇಷ ಪ್ರತಿನಿಧಿ ಟಿ ಬಿ ಜಯಚಂದ್ರ, ರಾಜ್ಯ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ನಿವೃತ್ತ ನ್ಯಾಯಮೂರ್ತಿ ನಾಗಮೋಹನ ದಾಸ್, ಸುಪ್ರೀಂ ಕೋರ್ಟ್ ವಕೀಲರಾದ ಮೋಹನ್ ಕಾತರಕಿ, ನಿಶಾಂತ್ ಪಾಟೀಲ್, ಮಯಾಂಕ್ ಜೈನ್, ಅಪರ ಮುಖ್ಯ ಕಾರ್ಯದರ್ಶಿಗಳಾದ ಗೌರವ್ ಗುಪ್ತಾ, ತುಷಾರ್ ಗಿರಿನಾಥ್ ಮತ್ತಿತರ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.

## ಅಫ್ಘಾನ್ ಆಸ್ಪತ್ರೆ ಮೇಲೆ ಭೀಕರ ದಾಳಿ

ಕಾಬೂಲ್: ಇಲ್ಲಿನ ಆಸ್ಪತ್ರೆ ಮೇಲೆ ಪಾಕಿಸ್ತಾನ ನಡೆಸಿದ ಬಾಂಬ್ ದಾಳಿಯಲ್ಲಿ 400ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಅಫ್ಘಾನಿಸ್ತಾನ ಇತಿಹಾಸದಲ್ಲೇ ಇದು ಅತ್ಯಂತ ಭೀಕರ ದಾಳಿಯಾಗಿದೆ.

ಸ್ಥಳೀಯ ಸಮಯ ರಾತ್ರಿ 9 ಗಂಟೆ ಸುಮಾರಿಗೆ 2,000 ಹಾಸಿಗೆ ಸೌಲಭ್ಯವಿರುವ ದೊಡ್ಡ ಆಸ್ಪತ್ರೆಯ ಮೇಲೆ ವೈಮಾನಿಕ ದಾಳಿ ನಡೆದಿದೆ. 400 ಮಂದಿ ಸಾವಿಗೀಡಾಗಿದ್ದು, 250 ಜನರು ಗಾಯಗೊಂಡಿದ್ದಾರೆ ಎಂದು ಅಫ್ಘಾನಿಸ್ತಾನದ ಉಪ ಸರ್ಕಾರಿ ವಕ್ತಾರ ಹಮ್ದುಲ್ಲಾ ಫಿತ್ರಾತ್ ಹೇಳಿದ್ದಾರೆ.

ಅಫ್ಘಾನ್ ಸರ್ಕಾರದ ಆರೋಪಗಳನ್ನು ಪಾಕಿಸ್ತಾನ ನಿರಾಕರಿಸಿದೆ. ಇದು ಆಧಾರರಹಿತ ಆರೋಪ ಎಂದಿದೆ.

ಕಾಬೂಲ್‌ನಲ್ಲಿ ಯಾವುದೇ ಆಸ್ಪತ್ರೆಯನ್ನು ಗುರಿಯಾಗಿಸಿಕೊಂಡಿಲ್ಲ ಎಂದು ಪಾಕ್ ಸ್ಪಷ್ಟಪಡಿಸಿದೆ. ಅಫ್ಘಾನ್ ಸರ್ಕಾರದ ವಕ್ತಾರ ಜಬಿಹುಲ್ಲಾ ಮುಜಾಹಿದ್ ಈ ದಾಳಿಯನ್ನು ಖಂಡಿಸಿದ್ದಾರೆ. ಪಾಕಿಸ್ತಾನವು ಆಸ್ಪತ್ರೆಗಳು ಮತ್ತು ನಾಗರಿಕ ಸ್ಥಳಗಳನ್ನು ಗುರಿಯಾಗಿಸಿಕೊಂಡು ಭಯಾನಕ ಕೃತ್ಯಗಳನ್ನು ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ.

ಪಾಕಿಸ್ತಾನದ ಮಾಹಿತಿ ಸಚಿವ ಅತೌಲ್ಲಾ ತರಾರ್ ಅವರು, ಕಾಬೂಲ್ ಮತ್ತು ಪೂರ್ವ ಪ್ರಾಂತ್ಯದ ನಂಗರ್‌ಹಾರ್‌ನಲ್ಲಿರುವ ಮಿಲಿಟರಿ ಸ್ಥಾಪನೆಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ಸೇನೆಯು ನಿಖರವಾದ ವೈಮಾನಿಕ ದಾಳಿಗಳನ್ನು ನಡೆಸಿದೆ ಎಂದು ತಿಳಿಸಿದ್ದಾರೆ.

## ಅನಿಲ ಕೊರತೆ: ವಿನೂತನ ಪ್ರತಿಭಟನೆ





ಬೆಂಗಳೂರು: ಆಟೋಗಳಿಗೆ ಅನಿಲ ಕೊರತೆ ಎದುರಿಸುತ್ತಿರುವ ಸಮಸ್ಯೆಯನ್ನು ವಿರೋಧಿಸಿ ನಗರದ ಫ್ರೀಡಂ ಪಾರ್ಕ್ನಲ್ಲಿ ವಿವಿಧ ಚಾಲಕರ ಸಂಘಟನೆಗಳು ಭಾರಿ ಪ್ರತಿಭಟನೆ ನಡೆಸಿದವು.

ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್, ಸ್ನೇಹಜೀವಿ ಚಾಲಕರ ಟ್ರೇಡ್ ಯೂನಿಯನ್ ಹಾಗೂ ಸಂಚಾರಿ ಚಾಲಕರ ಸೇವಾ ಟ್ರಸ್ಟ್ ವತಿಯಿಂದ ನಡೆದ ಈ ಪ್ರತಿಭಟನೆಯಲ್ಲಿ, ಆಟೋಗಳಿಗೆ ಹಗ್ಗ ಕಟ್ಟಿ ಎಳೆಯುವ ಮೂಲಕ ಮತ್ತು ಖಾಲಿ ಅಡುಗೆ ಸಿಲಿಂಡರ್‌ಗಳನ್ನು ಪ್ರದರ್ಶಿಸುವ ಮೂಲಕ ಸರ್ಕಾರದ ಗಮನ ಸೆಳೆಯಲಾಯಿತು. ಪ್ರತಿಭಟನಾಕಾರರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, ಆಟೋ ಚಾಲಕರು ಅನಿಲ ಕೊರತೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದರು. ಬಂಕ್‌ಗಳಲ್ಲಿ ಆಟೋಗಳಿಗೆ ಅಗತ್ಯವಾದ ಅನಿಲ ದೊರೆಯುತ್ತಿಲ್ಲ ಹಾಗೂ ಮನೆಗಳಲ್ಲಿ ಅಡುಗೆ ಸಿಲಿಂಡರ್‌ಗಳ ಕೊರತೆಯೂ ಉಂಟಾಗಿದೆ ಎಂದು ಅವರು ಹೇಳಿದರು.

ಪ್ರತಿಯೊಬ್ಬ ಆಟೋ ಚಾಲಕರ ಕುಟುಂಬಕ್ಕೆ ರೂ.10,000 ಪರಿಹಾರ ನೀಡುವಂತೆ ಅವರು ಸರ್ಕಾರವನ್ನು ಆಗ್ರಹಿಸಿದರು.

ಸ್ನೇಹಜೀವಿ ಚಾಲಕರ ಸಂಘದ ಅಧ್ಯಕ್ಷ ಸಂತೋಷ್ ಕುಮಾರ್, ಪ್ರಧಾನ ಕಾರ್ಯದರ್ಶಿ ರಾಜು ಕನ್ನಡಿಗ ಹಾಗೂ ಸಂಚಾರಿ ಸತೀಶ್ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿ ಚಾಲಕರ ಸಮಸ್ಯೆಗಳ ಕುರಿತು ಗಮನ ಸೆಳೆಯಿದರು.

ಪ್ರತಿಭಟನೆ ಶಾಂತಿಯುತವಾಗಿ ನಡೆಯಿತು ಮತ್ತು ಚಾಲಕರ ಸಂಕಷ್ಟಗಳಿಗೆ ಶೀಘ್ರ ಪರಿಹಾರ ಒದಗಿಸಬೇಕೆಂದು ಸಂಘಟನೆಗಳು ಸರ್ಕಾರವನ್ನು ಮನವಿ ಮಾಡಿವೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
18/03/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಆಕ್ಸಿಸ್ ಮ್ಯಾಕ್ಸ್ ಲೈಫ್‌ನಿಂದ 50 ಹೊಸ ಏಜೆನ್ಸಿ ಕಚೇರಿಗಳ ಉದ್ಘಾಟನೆ

ಬೆಂಗಳೂರು

ವಿಮಾ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಆಕ್ಸಿಸ್ ಮ್ಯಾಕ್ಸ್ ಲೈಫ್ ಇನ್ಶೂರೆನ್ಸ್ ಲಿಮಿಟೆಡ್ (ಹಿಂದಿನ ಮ್ಯಾಕ್ಸ್ ಲೈಫ್ ಇನ್ಶೂರೆನ್ಸ್) ಸಂಸ್ಥೆಯು ದೇಶದಾದ್ಯಂತ ತನ್ನ ವಿತರಣಾ ಜಾಲವನ್ನು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇರಿಸಿದೆ. 'ಭರೋಸೆ ಕಾ ಅಡ್ರೆಸ್' (ನಂಬಿಕೆಯ ವಿಳಾಸ) ಎಂಬ ಯೋಜನೆಯಡಿಯಲ್ಲಿ ಎರಡನೇ ಹಂತದ ಮತ್ತು ಮೂರನೇ ಹಂತದ ನಗರಗಳತ್ತ ಗಮನಹರಿಸಿರುವ ಕಂಪನಿಯು ಒಟ್ಟು 50 ಹೊಸ ಏಜೆನ್ಸಿ ಕಚೇರಿಗಳನ್ನು ಶುಕ್ರವಾರ ಉದ್ಘಾಟಿಸಿದೆ. ಪ್ರಮುಖವಾಗಿ ಕಂಪನಿಯು ಬೆಂಗಳೂರು, ನವದೆಹಲಿ ಎನ್‌ಸಿಆರ್, ಉತ್ತರ ಪ್ರದೇಶ, ಒಡಿಶಾ, ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ತನ್ನ ಉಪಸ್ಥಿತಿಯನ್ನು ಹೆಚ್ಚಿಸಿಕೊಂಡಿದೆ. ಈ ಯೋಜನೆಯು ಐ ಆರ್ ಡಿ ಎ ಐನ '2047ರ ವೇಳೆಗೆ ಎಲ್ಲರಿಗೂ ವಿಮೆ' ಎಂಬ ಗುರಿಯನ್ನು ಸಾಧಿಸಲು ವೇಗವರ್ಧಕವಾಗಿ ಕಾರ್ಯನಿರ್ವಹಿಸಲಿದೆ. ಜೀವನ ವಿಮೆಯನ್ನು ಕೇವಲ ಮಾರಾಟದ ಉತ್ಪನ್ನವನ್ನಾಗಿಸದೆ, ತಳಮಟ್ಟದ ಅವಶ್ಯಕತೆಯನ್ನಾಗಿ ಪರಿವರ್ತಿಸುವುದು ಇದರ ಉದ್ದೇಶವಾಗಿದೆ. ಭಾರತದ ಬೆಳವಣಿಗೆ ಹೊಂದುತ್ತಿರುವ ಪ್ರದೇಶಗಳಲ್ಲಿ ತನ್ನ ಏಜೆನ್ಸಿ ಕಚೇರಿಗಳನ್ನು ಆರಂಭಿಸುವ ಮೂಲಕ, ಆಕ್ಸಿಸ್ ಮ್ಯಾಕ್ಸ್ ಲೈಫ್ ಗ್ರಾಹಕರಿಗೆ ಆರ್ಥಿಕ ಭದ್ರತೆ ಒದಗಿಸುವ ಮಹತ್ವದ ಕಾರ್ಯ ಮಾಡಲಿದೆ. ಈ ಕುರಿತು ಆಕ್ಸಿಸ್ ಮ್ಯಾಕ್ಸ್ ಲೈಫ್ ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುಮಿತ್ ಮದನ್ ಮಾತನಾಡಿ, "ಭಾರತದ ಪ್ರತಿಯೊಂದು ಮೂಲೆಗೂ ಆರ್ಥಿಕ ಭದ್ರತೆ ಹೊಂದುವ ವ್ಯವಸ್ಥೆ ಒದಗುವಂತೆ ಮಾಡುವುದು ನಮ್ಮ ಉದ್ದೇಶವಾಗಿದೆ. ವಿಶೇಷವಾಗಿ ವಿಮಾ ಸೌಲಭ್ಯಗಳಿಂದ ವಂಚಿತವಾಗಿರುವ ಪ್ರದೇಶಗಳಲ್ಲಿ ನಮ್ಮ ಉಪಸ್ಥಿತಿಯನ್ನು ನಾವು ಭದ್ರಪಡಿಸುತ್ತಿದ್ದೇವೆ. ಕೇವಲ ವಿಮೆ ಮಾರಾಟ ಮಾಡುವುದಲ್ಲದೆ, ಸ್ಥಳೀಯ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ತರಬೇತಿ ನೀಡುವ ಮೂಲಕ ಆ ಸಮುದಾಯಗಳನ್ನು ಸಬಲೀಕರಣಗೊಳಿಸುತ್ತಿದ್ದೇವೆ. ಈ 50 ಹೊಸ ಕಚೇರಿಗಳು ಭಾರತದ ಆರ್ಥಿಕ ಭದ್ರತೆ ಅಗತ್ಯತೆಗಳಿಗೆ ನೇರವಾಗಿ ಸ್ಪಂದಿಸಲಿವೆ. ಸ್ಥಳೀಯ ಸಲಹೆಗಾರರ ಸಮೂಹವನ್ನು ಬೆಳೆಸುವ ಮೂಲಕ ನಾವು 'ಭರೋಸೆ ಕಾ ಅಡ್ರೆಸ್' (ನಂಬಿಕೆಯ ವಿಳಾಸ) ಯೋಜನೆಯಲ್ಲಿ ಸಮುದಾಯಗಳನ್ನು ಸಬಲೀಕರಣಗೊಳಿಸುವುದರ ಜೊತೆಗೆ 2047ರ ಎಲ್ಲರಿಗೂ ವಿಮೆ ಉದ್ದೇಶ ಸಾಕಾರಕ್ಕೆ ಅರ್ಥಪೂರ್ಣ ಕೊಡುಗೆ ನೀಡುತ್ತೇವೆ," ಎಂದರು.

# ಗ್ರಾಹಕ ಸಂವಾದ ಸಭೆ

ಬೆಂಗಳೂರು

ಬೆಸ್ಕಾಂನ ಎಲ್ಲಾ ಕಾರ್ಯ ಮತ್ತು ಪಾಲನಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 5.30ರವರೆಗೆ ವಿದ್ಯುತ್ ಸಂಬಂಧಿತ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಗ್ರಾಹಕ ಸಂವಾದ ಸಭೆ ನಡೆಯಲಿದೆ.

ಗ್ರಾಹಕ ಸಂವಾದ ಸಭೆಯಲ್ಲಿ ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಬೆಸ್ಕಾಂನ ಪ್ರಧಾನ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಎಂ.ಎಫ್. ಮಿಡ್-ಕ್ಯಾಪ್ ಫಂಡ್ ಬಿಡುಗಡೆ

ಬೆಂಗಳೂರು

ಟ್ರಸ್ಟ್ ಮ್ಯೂಚುಯಲ್ ಫಂಡ್ ತನ್ನ ಮಿಡ್–ಕ್ಯಾಪ್ ಕಂಪನಿಗಳಲ್ಲಿ ಹೂಡಿಕೆ ಮಾಡುವ ಟ್ರಸ್ಟ್ ಮಿಡ್ ಕ್ಯಾಪ್ ಫಂಡ್ ಬಿಡುಗಡೆ ಮಾಡಿದೆ.
ಈ ಫಂಡ್ ಸಬಿಯಿಂದ ಪೂರ್ಣ ಮಾರುಕಟ್ಟೆ ಬಂಡವಾಳ 101ರಿಂದ 250ನೇ ಸ್ಥಾನ ಪಡೆದ ಈಕ್ವಿಟಿ ಮತ್ತು ಈಕ್ವಿಟಿ ಸಂಬಂಧಿತ ಸಾಧನಗಳಲ್ಲಿ ಹೂಡಿಕೆ ಮಾಡುವ ಓಪನ್–ಎಂಡೆಡ್ ಈಕ್ವಿಟಿ ಸ್ಕೀಂ ಆಗಿದೆ. ಈ ಸ್ಕೀಂ ನಿಫ್ಟಿ ಮಿಡ್ ಕ್ಯಾಪ್ 150 ಟಿ.ಆರ್.ಐ. ಮಾನದಂಡ ಪಡೆಯಲಿದೆ.
ಈ ನ್ಯೂ ಫಂಡ್ ಆಫರ್ ಫೆಬ್ರವರಿ 27, 2026ರಂದು ಪ್ರಾರಂಭಗೊಳ್ಳುತ್ತದೆ ಮತ್ತು ಮಾರ್ಚ್ 13, 2026ರಂದು ಮುಕ್ತಾಯಗೊಳ್ಳಲಿದೆ.
ಮಿಡ್–ಕ್ಯಾಪ್ ಕಂಪನಿಗಳು ಪ್ರಾರಂಭಿಕ ಅನಿಶ್ಚಿತತೆಗಳನ್ನು ಮೀರಿರುತ್ತವೆ ಮತ್ತು ವಿಸ್ತರಿಸಲು ಸೂಕ್ತವಾಗಿರುತ್ತವೆ. ಭಾರತದಲ್ಲಿ ಮಿಡ್–ಕ್ಯಾಪ್ ಗಳು 34.8ಕೆಯಿಂದ 104.5ಕೆ ಕೋಟಿಯವರೆಗೆ ಮಾರುಕಟ್ಟೆ ಬಂಡವಾಳ ಹೊಂದಿವೆ (ಮೂಲ– ಎಎಂಎಕೊಡಿಗೆಹಳ್ಳಿ, ಡಿಸೆಂಬರ್ 2025ರಂತೆ ದತ್ತಾಂಶ) ಮಿಡ್ ಕ್ಯಾಪ್ ವಿಶ್ವದಲ್ಲಿ ಉತ್ಪಾದನೆ, ಹಣಕಾಸು ಸೇವೆಗಳು, ಮೂಲಸೌಕರ್ಯ, ರೀಟೇಲ್ ಮತ್ತು ಗ್ರಾಹಕ ವಿಭಾಗಗಳಲ್ಲಿದ್ದು ಲಾರ್ಜ್–ಕ್ಯಾಪ್ ಸ್ಥಾನ ಪಡೆಯುವ ಮುನ್ನ ಹೂಡಿಕೆದಾರರನ್ನು ಸೆಳೆಯುತ್ತವೆ. ಭಾರತದ ಮಿಡ್–ಕ್ಯಾಪ್ ವಲಯವು ದೀರ್ಘಾವಧಿ ಸಂಪತ್ತು ಸೃಷ್ಟಿಯ ಅತ್ಯಂತ ಶಕ್ತಿಯುತ ಚಾಲಕಶಕ್ತಿಗಳಲ್ಲಿ ಒಂದಾಗಿದೆ. ಕಳೆದ 5 ವರ್ಷಗಳಲ್ಲಿ 37 ಮಿಡ್–ಕ್ಯಾಪ್ ಗಳು 3 ಪಟ್ಟಿಗಿಂತ ಹೆಚ್ಚು ಗಳಿಕೆ ತಂದುಕೊಟ್ಟಿವೆ. ಮಿಡ್–ಕ್ಯಾಪ್ ವಿಶ್ವಕ್ಕೆ ಭಾರತದ ಪ್ರಗತಿಯ ಮುನ್ನೋಟವೂ ಬೆಂಬಲಿಸುತ್ತಿದೆ. ಹಣದುಬ್ಬರದನಿಯಂತ್ರಣ, ಚಾಲ್ತಿ ಖಾತೆಯ ಕೊರತೆಯ ನಿಯಂತ್ರಣ, ಸುಸ್ಥಿರ ಬಂಡವಾಳ ವೆಚ್ಚ ಮತ್ತು ಅನುಕೂಲಕರ ಜನಸಮೂಹದಿಂದ ಲಾಭ ಗಳಿಸುವ ಅವಕಾಶಗಳು ಹೆಚ್ಚಾಗಿವೆ.

# ಗೋಸಂಪತ್ತು-ಸಾವಯವ ಕೃಷಿ ಕೈಬಿಟ್ಟರೆ ರೈತರಿಗೆ ಭವಿಷ್ಯವೇ ಇಲ್ಲ: ಡಾ. ಚಂದ್ರಕಾಂತ ಕಾಳಿಬಾವಿ

ಹಗರಿಬೊಮ್ಮನಹಳ್ಳಿ,

ಹೆಚ್ಚು ಇಳುವರಿ ಪಡೆಯುವ ಉದ್ದೇಶದಿಂದ ಆಧುನಿಕ ಕೃಷಿಯತ್ತ ಅತಿಯಾದ ಒಲವು ತೋರಿ, ಗೋಸಂಪತ್ತು ಹಾಗೂ ಸಾವಯವ ಕೃಷಿಯನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ರೈತರಿಗೆ ಉಳಿಗಾಲವೇ ಇರುವುದಿಲ್ಲ ಎಂದು ಕೃಷಿ ವಿಜ್ಞಾನಿ ಡಾ. ಚಂದ್ರಕಾಂತ ಕಾಳಿಬಾವಿ ಎಚ್ಚರಿಸಿದರು.

ತಾಲ್ಲೂಕಿನ ತಂಬ್ರಹಳ್ಳಿ ರೈತ ಸಂಪರ್ಕ ಕೇಂದ್ರದ ವತಿಯಿಂದ ಆಯೋಜಿಸಲಾದ "ಸಾವಯವ ಕೃಷಿಯಲ್ಲಿ ರಾಗಿ, ಸಿರಿಧಾನ್ಯ ಹಾಗೂ ಎಣ್ಣೆಕಾಳು ಬೆಳೆಗಳ ಬೆಳವಣಿಗೆ" ಕುರಿತ ಒಂದು ದಿನದ ಕಾರ್ಯಾಗಾರದಲ್ಲಿ ಉಪನ್ಯಾಸ ನೀಡಿದ ಅವರು, ಪರಿಸರ ಸಂರಕ್ಷಣೆ ಅತ್ಯಾವಶ್ಯಕವಾಗಿದ್ದು, ಪರಿಸರವನ್ನು ಉಳಿಸಿದಾಗ ಮಾತ್ರ ಅದು ಮಾನವಕುಲವನ್ನು ಕಾಪಾಡುತ್ತದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಪರಿಶುದ್ಧ ಗಾಳಿಗೂ ಸಂಕಷ್ಟ ಎದುರಾಗುವ ಪರಿಸ್ಥಿತಿ ನಿರ್ಮಾಣವಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು. ರೈತರಿಗೆ ಶಾಶ್ವತ ಆಸರೆಯಾಗುವ ಮಾವು, ಹುಣಸೆ, ಬೇವು, ತೇಗ, ಹಬ್ಬೇವು, ಬಾರೆ ಮರಗಳನ್ನು ಹೊಲದ ಸುತ್ತಲೂ ಬೇಲಿಯಾಗಿ ಬೆಳೆಸಿದರೆ ಆರ್ಥಿಕ ಹಾಗೂ ಪರಿಸರದ ದೃಷ್ಟಿಯಿಂದ ಬಹು ಪ್ರಯೋಜನಕಾರಿಯಾಗುತ್ತದೆ ಎಂದು ತಿಳಿಸಿದರು.

ಇತ್ತೀಚಿನ ಹವಾಮಾನ ವೈಪರೀತ್ಯಗಳಿಂದ ಬೆಳೆ ನಷ್ಟ ಹೆಚ್ಚುತ್ತಿರುವ ಹಿನ್ನಲೆಯಲ್ಲಿ, ರೈತರು ಕೃಷಿಯ ಜೊತೆಗೆ ರೇಷ್ಮೆ, ಕುರಿ, ಕೋಳಿ ಸಾಕಣೆ, ಹೈನುಗಾರಿಕೆ ಸೇರಿದಂತೆ ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದರು.

ಬೆಳೆ ಪರಿವರ್ತನೆ (ಅಡಿಐಐ ಖಂಣಚಣುಂಟಿ) ಮೂಲಕ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬೇಕು. ಪ್ರತಿ ವರ್ಷ ಮಣ್ಣಿನ ಪರೀಕ್ಷೆ ಮಾಡಿಸಿ, ಪ್ರತಿ ಎಕರೆಗೆ ಕನಿಷ್ಠ ಎರಡು ಟನ್ ತಿಪ್ಪೆಗೊಬ್ಬರ ಬಳಕೆ ಮಾಡಬೇಕು. ತಿಪ್ಪೆಗೊಬ್ಬರದಲ್ಲಿ ಕೋಳಿಗೊಬ್ಬರ, ಸಿಟಿ ಕಾಂಪೋಸ್ಟ್‌ಗಳನ್ನು ಸಮರ್ಪಕವಾಗಿ ಉಪಯೋಗಿಸಿದರೆ ಮಣ್ಣಿನ ಆರೋಗ್ಯ ಉತ್ತಮವಾಗುತ್ತದೆ ಎಂದು ಸಲಹೆ ನೀಡಿದರು. ಬಿತ್ತನೆ ವೇಳೆ ಬೀಜೋಪಚಾರ ಕೈಗೊಂಡರೆ ಯೂರಿಯಾ ಬಳಕೆಯನ್ನು ಶೇಕಡಾ 20–25 ರಷ್ಟು ಕಡಿಮೆ ಮಾಡಬಹುದು ಎಂದು ವಿವರಿಸಿದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಣಕಾರ ಕೊಟ್ರೇಶ್ ಮಾತನಾಡಿ, ರೈತರಿಗೆ ಮಾರ್ಗದರ್ಶನ ನೀಡುವ ಇಂತಹ ಉಪಯುಕ್ತ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ಸದಸ್ಯ ಕಿನ್ನಾಳ ಸುರೇಶ್, ರೈತ ಸಂಘದ ಗಡ್ಡಿ ನಿಂಗಪ್ಪ, ಕೃಷಿ ಇಲಾಖೆ ಅಧಿಕಾರಿ ಇ. ಶಶಿಕುಮಾರ್ ಸೇರಿದಂತೆ ಸಿಬ್ಬಂದಿ ಹಾಗೂ ಸುತ್ತಮುತ್ತಲಿನ ಅನೇಕ ರೈತರು ಭಾಗವಹಿಸಿದ್ದರು.

# ಪ್ರತಿ ಟನ್ ಕಬ್ಬಿಗೆ ಎಫ್‌ಆರ್‌ಪಿ ಜೊತೆ ಹೆಚ್ಚುವರಿ ಹಣ ಘೋಷಣೆ

ಬೆಂಗಳೂರು

ರಾಜ್ಯದ ಕಬ್ಬು ಬೆಳೆಗಾರರ ಹಿತರಕ್ಷಣೆ ಮತ್ತು ಸಕ್ಕರೆ ಕಾರ್ಖಾನೆಗಳ ಸುಗಮ ಕಾರ್ಯನಿರ್ವಹಣೆಗೆ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಮತ್ತು ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್. ಪಾಟೀಲ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ವೇಳೆ, ಪರಿಷತ್ ಸದಸ್ಯರಾದ ಎನ್. ರವಿಕುಮಾರ್, ಡಿ.ಎಸ್.ಅರುಣ್, ಕೆ.ಎಸ್. ನವೀನ್, ಕೇಶವ ಪ್ರಸಾದ್ ಎಸ್ ಅವರುಗಳು ನಿಯಮ 330 ರಡಿ ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ ಸಚಿವರು, ಕಳೆದ ನವೆಂಬರ್ 2025 ರಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ತೀರ್ಮಾನದಂತೆ ಸರ್ಕಾರವು ರೈತರು ಮತ್ತು ಕಾರ್ಖಾನೆ ಮಾಲೀಕರ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದೆ.

ರಾಜ್ಯದ ರೈತ ಸಂಘಟನೆಗಳು 2025–26ನೇ ಸಾಲಿಗೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ (ಕಟಾವು ಮತ್ತು ಸಾರಿಗೆ ವೆಚ್ಚ ಹೊರತುಪಡಿಸಿ) 3500/– ರೂಪಾಯಿ ದರ ನಿಗದಿಪಡಿಸಬೇಕು ಎಂದು ಒತ್ತಾಯಿಸಿದ್ದವು. ಕೇಂದ್ರ ಸರ್ಕಾರ ನಿಗದಿಪಡಿಸಿರುವ ಎಫ್.ಆರ್.ಪಿ ದರವು ಉತ್ಪಾದನಾ ವೆಚ್ಚಕ್ಕೆ ಹೋಲಿಸಿದರೆ ಸಾಲದಾಗಿಲ್ಲ ಎಂಬುದು ರೈತರ ದೂರುಗಳಾಗಿದ್ದವು. ಇದನ್ನು ಪರಿಗಣಿಸಿ ಸರ್ಕಾರವು ಸಕ್ಕರೆ ಇಳುವರಿ ಆಧಾರದ ಮೇಲೆ ಕೇಂದ್ರ ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಮೊತ್ತವನ್ನು ರೈತರಿಗೆ ನೀಡಲು ತೀರ್ಮಾನಿಸಲಾಗಿದೆ. ಇದರಲ್ಲಿ ಸಕ್ಕರೆ ಕಾರ್ಖಾನೆಗಳು ಮತ್ತು ರಾಜ್ಯ ಸರ್ಕಾರ ಜಂಟಿಯಾಗಿ ಆರ್ಥಿಕ ನೆರವು ನೀಡಲಿವೆ ಎಂದು ತಿಳಿಸಿದರು.

ಸಕ್ಕರೆ ಇಳುವರಿ ಮತ್ತು ಕಬ್ಬಿನ ತೂಕದಲ್ಲಿ ಆಗುವ ವ್ಯತ್ಯಾಸಗಳನ್ನು ತಡೆಯಲು ಕಾರ್ಖಾನೆಗಳ ಮುಂದೆ ಸರ್ಕಾರದ ವತಿಯಿಂದಲೇ ಪ್ರಯೋಗಾಲಯಗಳನ್ನು ಸ್ಥಾಪಿಸುವ ಕುರಿತು ಸಕಾರಾತ್ಮಕವಾಗಿ ಪರಿಶೀಲಿಸಲಾಗುತ್ತಿದೆ. ರೈತರಿಗೆ ನೀಡಬೇಕಾದ ಬಾಕಿ ಹಣವನ್ನು 14 ದಿನಗಳ ಒಳಗಾಗಿ ಪಾವತಿಸಲು ಎಲ್ಲಾ ಸಕ್ಕರೆ ಕಾರ್ಖಾನೆಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ.

ಸಕ್ಕರೆ ಕಾರ್ಖಾನೆಗಳ ಆರ್ಥಿಕ ಸಂಕಷ್ಟವನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಕೆಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಂಡಿದೆ. ಕನಿಷ್ಠ ಮಾರಾಟ ಬೆಲೆಯಡಿ ಸಕ್ಕರೆಯ ಕನಿಷ್ಠ ಮಾರಾಟ ಬೆಲೆಯನ್ನು ಪ್ರತಿ ಕೆ.ಜಿ.ಗೆ 31/– ರೂಪಾಯಿಯಿಂದ ಹೆಚ್ಚಿಸುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆ.

ಎಥನಾಲ್ ದರ ಪರಿಷ್ಕರಣೆ ಮತ್ತು ಹಂಚಿಕೆ ಪ್ರಮಾಣವನ್ನು ಹೆಚ್ಚಿಸಲು ಕೇಂದ್ರದ ಮೇಲೆ ಒತ್ತಡ ಹೇರಲಾಗಿದೆ. ಅಲ್ಲದೆ, ರಾಜ್ಯದ ಕಾರ್ಖಾನೆಗಳಿಂದ ವಿದ್ಯುತ್ ಖರೀದಿಸುವ ಒಪ್ಪಂದವನ್ನು ನವೀಕರಿಸಲು ಮತ್ತು ಪ್ರತಿ ಯೂನಿಟ್ ಗೆ 6.5 ರೂಪಾಯಿಯಂತೆ 10 ವರ್ಷಗಳ ಕಾಲ ಖರೀದಿ ಮಾಡಲು ತೀರ್ಮಾನಿಸಲಾಗಿದೆ.

ಹೊಸ ಸಕ್ಕರೆ ಕಾರ್ಖಾನೆಗಳ ಸ್ಥಾಪನೆಯಲ್ಲಿ ಎರಡು ಕಾರ್ಖಾನೆಗಳ ನಡುವಿನ ಕನಿಷ್ಠ ಅಂತರವನ್ನು 15 ಕಿ.ಮೀ ನಿಂದ 25 ಕಿ.ಮೀ ಗೆ ಹೆಚ್ಚಿಸುವ ಬಗ್ಗೆ ನೀತಿ ರೂಪಿಸಲಾಗುತ್ತಿದೆ. 2025–26ನೇ ಹಂಗಾಮಿನಲ್ಲಿ ರಾಜ್ಯದ ರೈತರಿಗೆ ಸಕ್ಕರೆ ಇಳುವರಿ ಆಧಾರದ ಮೇಲೆ ಮೊದಲ ಕಂತಿನ ಪಾವತಿಯ ಜೊತೆಗೆ ಹೆಚ್ಚುವರಿ ಮೊತ್ತವನ್ನು ನಿಗದಿಪಡಿಸಲಾಗಿದೆ.

ಶೇ. 9.5 ಅಥವಾ ಅದಕ್ಕಿಂತ ಕಡಿಮೆ ಇಳುವರಿ: ಕೇಂದ್ರದ ಎಫ್.ಆರ್.ಪಿ ದರದ ಜೊತೆಗೆ ಹೆಚ್ಚುವರಿಯಾಗಿ 100/– ರೂಪಾಯಿಗಳನ್ನು (ಕಾರ್ಖಾನೆಯಿಂದ 50/– ಮತ್ತು ಸರ್ಕಾರದಿಂದ 50/–) ನೀಡಲಾಗುವುದು.

ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ 2.47 ಲಕ್ಷ ಮೆಟ್ರಿಕ್ ಟನ್ ಸಕ್ಕರೆ ರಫ್ತು ಮಾಡಲು ಕೇಂದ್ರದಿಂದ ಅನುಮತಿ ಕೊಡಿಸಲಾಗಿದೆ. ನದಿಗಳಿಂದ ನೀರು ಎತ್ತುವ ನೀರಿನ ತೆರಿಗೆಯನ್ನು ಪ್ರತಿ ಎಂ.ಸಿ.ಎಫ್.ಟಿ ಗೆ 3,200/– ರೂಪಾಯಿಗೆ ನಿಗದಿಪಡಿಸುವ ಬಗ್ಗೆ ಜಲಸಂಪನ್ಮೂಲ ಇಲಾಖೆಯೊಂದಿಗೆ ಚರ್ಚಿಸಲಾಗುತ್ತಿದೆ.

ರೈತರು ಯಾವುದೇ ಆತಂಕಕ್ಕೆ ಒಳಗಾಗದೆ ತಮ್ಮ ಕಬ್ಬನ್ನು ಕಾರ್ಖಾನೆಗಳಿಗೆ ಪೂರೈಸಬೇಕು ಮತ್ತು ಸರ್ಕಾರವು ಸದಾ ರೈತರ ಹಿತರಕ್ಷಣೆಗೆ ಬದ್ಧವಾಗಿದೆ ಎಂದು ಸಚಿವರು ತಿಳಿಸಿದರು.



ಸಚಿವ ಸ್ಥಾನಕ್ಕೆ ಒತ್ತಾಯಿಸಿ ಶಾಸಕರುಗಳ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನಸಭೆಯ ಕಚೇರಿಯಲ್ಲಿ ಭೇಟಿಯಾಗಿ ಮನವಿ ಅರ್ಪಿಸಿತು.

# ಇ–ಸ್ವತ್ತು ಮತ್ತು ಖಾತಾ ನಿಯಮಗಳಲ್ಲಿ ಮಹತ್ವದ ಸುಧಾರಣೆ

ಬೆಂಗಳೂರು

ಗ್ರಾಮೀಣ ಪ್ರದೇಶದ ವಸತಿ ಯೋಜನೆಗಳ ಫಲಾನುಭವಿಗಳು ಎದುರಿಸುತ್ತಿದ್ದ ಇ–ಸ್ವತ್ತು ದಾಖಲಾತಿ ಸಮಸ್ಯೆಯನ್ನು ಬಗೆಹರಿಸಲು ರಾಜ್ಯ ಸರ್ಕಾರವು ಮಹತ್ವದ ಕ್ರಮ ಕೈಗೊಂಡಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಗೆ ತಿದ್ದುಪಡಿ ತರುವ ಮೂಲಕ, ಕೃಷಿ ಭೂಮಿಯಲ್ಲಿ ನಿರ್ಮಿಸಲಾದ ಮನೆಗಳಿಗೂ ಅಧಿಕೃತ ದಾಖಲೆ ನೀಡಲು ಹಾದಿ ಸುಗಮಗೊಳಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಕಲಾಪದ ವೇಳೆ ಸದಸ್ಯರಾದ ಡಾ. ಯತೀಂದ್ರ ಎಸ್. ಅವರು ನಿಯಮ 72ರ ಅಡಿಯಲ್ಲಿ ಮಂಡಿಸಿದ ಸೂಚನೆಗೆ ಉತ್ತರಿಸಿದ ಸಚಿವರು, ಗ್ರಾಮೀಣ ವಸತಿ ಯೋಜನೆಗಳ ಅಡಿಯಲ್ಲಿ ತಮ್ಮದೇ ಕೃಷಿ ಭೂಮಿಯಲ್ಲಿ ಮನೆ ನಿರ್ಮಿಸಿಕೊಂಡವರಿಗೆ ಇ–ಸ್ವತ್ತು ನೀಡುವಲ್ಲಿ ಇದ್ದ ತಾಂತ್ರಿಕ ಅಡೆತಡೆಗಳನ್ನು ನಿವಾರಿಸಲಾಗಿದೆ ಎಂದು ಸ್ಪಷ್ಟಪಡಿಸಿದರು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ಅನ್ನು ದಿನಾಂಕ: 07.04.2025 ರಂದು ಅಧಿಸೂಚಿಸಲಾಗಿದ್ದು, ಇದರಲ್ಲಿ ಹೊಸದಾಗಿ ಪ್ರಕರಣ 199ಬಿ ಮತ್ತು 199ಸಿ ಗಳನ್ನು ಸೇರ್ಪಡೆಗೊಳಿಸಲಾಗಿದೆ.

ದಿನಾಂಕ: 07.04.2025 ಕ್ಕಿಂತ ಮೊದಲು ಕೃಷಿ ಭೂಮಿಯಲ್ಲಿ ನಿರ್ಮಿಸಲಾದ ಕಟ್ಟಡಗಳಿಗೆ 'ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025' ರನ್ವಯ ನಮೂನೆ 11ಬಿ ಅನ್ನು ಸಾರ್ವಜನಿಕರು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ದಿನಾಂಕ: 07.04.2025 ರ ನಂತರದ ಪ್ರಕರಣಗಳಲ್ಲಿ, ಕಾಯಿದೆಯ ಪ್ರಕರಣ 199ಬಿ ಹಾಗೂ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಉಪಬಂಧಗಳ ಅನ್ವಯ ಭೂ ಪರಿವರ್ತನೆ ಮತ್ತು ಅನುಮೋದನೆ ಪಡೆದ ಆಸ್ತಿಗಳಿಗೆ ನಮೂನೆ ಸೃಜಿಸಲಾಗುವುದು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೊಸ ಖಾತಾ ಅಥವಾ ಪಿ.ಐ.ಡಿ. (P.I.D) ನೀಡುವ ಮೊದಲು, ಸಂಬಂಧಪಟ್ಟ ಯೋಜನಾ ಪ್ರಾಧಿಕಾರದ ಮೂಲಕ ಲೇಔಟ್ ಪ್ಲಾಟ್‌ಗೆ ಪೂರ್ವಾನ್ವಯ ಅನುಮೋದನೆ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ.

"ಗ್ರಾಮೀಣ ಭಾಗದ ಜನರು ವಸತಿ ಯೋಜನೆಗಳ ಅಡಿಯಲ್ಲಿ ಮನೆ ಕಟ್ಟಿಕೊಂಡರೂ ಇ–ಸ್ವತ್ತು ದಾಖಲೆ ಇಲ್ಲದೆ ಅನೇಕ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದರು. ಇದನ್ನು ಮನಗಂಡು ನಮ್ಮ ಸರ್ಕಾರವು ಕಾಯಿದೆಗೆ ತಿದ್ದುಪಡಿ ತಂದಿದೆ.

ಇನ್ನು ಮುಂದೆ ಕೃಷಿ ಭೂಮಿಯಲ್ಲಿ ನಿರ್ಮಿಸಲಾದ ಮನೆಗಳಿಗೂ ಇ–ಸ್ವತ್ತು ತಂತ್ರಾಂಶದಲ್ಲಿ ಪ್ರತ್ಯೇಕ ವರ್ಗೀಕರಣ ಮಾಡಿ ದಾಖಲೆ ನೀಡಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ವಸತಿ ಯೋಜನೆಯ ಫಲಾನುಭವಿಗಳಿಗೆ ದೊಡ್ಡ ಮಟ್ಟದ ಅನುಕೂಲವಾಗಲಿದೆ.

ಈ ಸುಧಾರಣೆಯು ಗ್ರಾಮೀಣ ಪ್ರದೇಶದ ವಸತಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡುವ ಜೊತೆಗೆ, ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಸಹಕಾರಿಯಾಗಲಿದೆ ಎಂದು ಸಚಿವರು ತಿಳಿಸಿದರು.

# ಅಧಿಕಾರಿಗಳ ವಿಳಂಬ ಧೋರಣೆಗೆ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಕೆಂಡಾಮಂಡಲ

ಮಧುಗಿರಿ

ಪ್ರತೀ ವಾರ ಪವತಿ ಖಾತೆ ಆಂದೋಲನ ಮಾಡಿ ಎಂದು ಮೀಟಿಂಗ್ ಮಾಡುತ್ತೇವೆ. ಆದರೂ ಸಮಸ್ಯೆ ಹಾಗೇ ಉಳಿಯುತ್ತಿದೆ. ಅಧಿಕಾರಿಗಳು ಕಡ್ಡಾಯವಾಗಿ ಜನರ ಸಮಸ್ಯೆ ಕೇಳಬೇಕು ಎಂದು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.




ಪಟ್ಟಣದ ತಾಲೂಕು ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಮಾತನಾಡಿದ ಅವರು ಆರ್.ಐ ಗಳು ವಿಐ ಗಳು ಸಮಸ್ಯೆಯನ್ನು ತುಂಬಾ ಲೈಟ್ ಆಗಿ ತೆಗೆದುಕೊಳ್ಳುತ್ತಾರೆ. ನಾವು ಬಂದು ಇಲ್ಲಿ ಫವತಿ ಖಾತೆ ಮಾಡಿ ಎಂದು ಹೇಳಿದರೆ ಮಾತ್ರ ಕೆಲಸ ಮಾಡುತ್ತಿರಾ ಎಂದರೆ ಹೇಗೆ..? ಪೋಡಿ ಮಾಡಲು ಮೂರು ವರ್ಷ ಬೇಕಾ..? ದೊಡ್ಡೇರಿ ಮತ್ತು ಕೊಡಿಗೇನಹಳ್ಳಿ ಹೋಬಳಿಯಲ್ಲೇ ಏಕೆ ಇಷ್ಟೊಂದು ಸಮಸ್ಯೆಗಳು.. ನಾನು ಎಲ್ಲವನ್ನೂ ನೋಟ್ ಮಾಡಿಕೊಂಡಿದ್ದೇನೆ. ಏಕೆ ನೀವೆಲ್ಲ ಸಮರ್ಪಕವಾಗಿ ಕೆಲಸ ಮಾಡುತ್ತಿಲ್ಲ, ತಿಳುವಳಿಕೆ ಇಲ್ಲವಾ..? ಅಥವಾ ಭಯ ಇದೆಯಾ ನಿಮ್ಮ ಸಮಸ್ಯೆ ಏನು..? ನಾನು ಇದನ್ನು ತಿಳಿದು ಕೊಳ್ಳಬೇಕು. ಮಧುಗಿರಿಯಲ್ಲಿ ಆರ್.ಐ ಕಚೇರಿ ಎಲ್ಲಿದೆ..? ಮುಟೇಷನ್ ನಂತೆ ಪಹಣಿ ಮಾಡಲು ನಿಮಗೆ ಏನು ತೊಂದರೆ, ದೂರುದಾರರೊಬ್ಬರಿಗೆ 1986 ರಲ್ಲೇ ಜಾಗ ಮಂಜೂರು ಆಗಿದೆ ಆದರೂ ಪಹಣಿ ನೀಡುತ್ತಿಲ್ಲ. ನೀವೆಲ್ಲ ಜನ ಸಂಪರ್ಕ ಸಭೆಗೆ ಬಂದಂತಿಲ್ಲ. ಬರೀ ಟೈಂಪಾಸ್ ಮಾಡಲು ಬಂದಂತಿದೆ. ವಿಐ,ಆರ್ ಐ ಗಳು ಇನ್ನೂ ಹೆಚ್ಚು ಪರಿಮಾಣಕಾರಿಯಾಗಿ ಕೆಲಸ ಮಾಡಬೇಕು. ಜನ ಸಂಪರ್ಕ ಸಭೆ ಮಾಡುವ ಉದ್ದೇಶ ಜನರ ಕೆಲಸ ತ್ವರಿತವಾಗಿ ಆಗಬೇಕು. ಇಲ್ಲಿನ ಸಭೆಗೆ ಇಓ ಏಕೆ ಬಂದಿಲ್ಲ ಇಷ್ಟೊಂದು ಸಮಸ್ಯೆಗಳಿವೆ.ಮೊದಲು ಇಓ ರವರನ್ನು ಸ್ಥಳಕ್ಕೆ ಕರೆಸಿ ಎಂದು ಜಿಲ್ಲಾಧಿಕಾರಿಗಳು ತರಾಟೆಗೆ ತೆಗೆದುಕೊಂಡರು.

ನಮಗೆ 2.20 ಎಕರೆ ಜಮೀನು ದುರಸ್ತಿ ಮಾಡಿಕೊಡಿ ಎಂದು ಕಳೆದ ಮೂರು ವರ್ಷಗಳಿಂದ ನಾಡಕಚೇರಿಗೆ ಅಲೆದರೂ ಯಾವುದೇ ಕ್ರಮ ಆಗಿಲ್ಲ. ನಮ್ಮ ಜಮೀನನ್ನು ಸರ್ಕಾರಿ ಕರಾಬು ಎಂದು ಮಾಡಿದ್ದಾರೆ. ಡಿಸ್ಕರ್ಸ್ ಮಾಡುವುದು ಎಂದರೆ ಏನು..? ಮೂರು ವರ್ಷದಿಂದ ಸಮಸ್ಯೆ ಬಗೆಹರಿಸಿಲ್ಲ.

ಪಹಣಿ ಏಕೀಕರಣ ಆಗುತ್ತಿಲ್ಲ. ನಾವು ಸಾಲ ಸೋಲ ಮಾಡಿಕೊಂಡಿದ್ದು, ಜಮೀನು ಮಾರಿ ಸಾಲ ತೀರಿಸಬೇಕು ಎಂದು ಡಿಸಿ ಎದುರು ಕೊಡಿಗೇನಹಳ್ಳಿ ಹೋಬಳಿಯ ವೆಂಗಮ್ಮನಹಳ್ಳಿ ಗ್ರಾಮದ ರೈತ ಗಂಗಾಧರಯ್ಯ ಕಣ್ಣೀರು ಹಾಕಿ ಸಮಸ್ಯೆ ಬಗೆಹರಿಸಿಕೊಡಿ ಎಂದು ಗೋಗರೆದರು. ಆಗ ಜಮೀನು ಏಕೆ ಮಾರುತ್ತಿದ್ದಿರಾ ಎಂದು ಜಿಲ್ಲಾಧಿಕಾರಿಗಳು ವಿಚಾರಿಸಿದಾಗ, ತಮ್ಮನ ಮಗನಿಗೆ ಸೈನಲ್ ಕಾರ್ಟ್ ಆಪರೇಷನ್ ಮಾಡಿಸಲು ಸಾಲ ಮಾಡಿದ್ದೇವೆ. ಜಮೀನು ಮಾರಿ ಸಾಲ ತೀರಿಸಬೇಕು ದಯವಿಟ್ಟು ದುರಸ್ತಿ ಮಾಡಿಕೊಡಿ ಎಂದು ಮತ್ತೆ ಕಣ್ಣೀರು ಹಾಕಿದಾಗ, ಒಂದು ವಾರದೊಳಗೆ ಸಮಸ್ಯೆ ಬಗೆಹರಿಸಿಕೊಡಿ ಎಂದು ಜಿಲ್ಲಾಧಿಕಾರಿಗಳು ಕೊಡಿಗೇನಹಳ್ಳಿ ವಿಐ ಸುನಿಲ್ ಗೆ ಸೂಚನೆ ನೀಡಿದರು.

ನಮ್ಮ ಆಸ್ತಿ ಮುತ್ತಾತನ ಹೆಸರಿನಲ್ಲಿದೆ ಮನೆಯಲ್ಲಿ ವಯಸ್ಸಾದ ತಂದೆ–ತಾಯಿ ಇದ್ದು, ಕಳೆದ ಮೂರು ವರ್ಷಗಳಿಂದ ಆಸ್ತಿಯ ದರಕಾಸ್ತು ಮಾಡಿಕೊಡಿ ಎಂದು ನಾಡ ಕಚೇರಿಗೆ ಅಲೆಯುತ್ತಿದ್ದು, ಆದರೂ ಸಮಸ್ಯೆ ಬಗೆ ಹರಿಯುತ್ತಿಲ್ಲ. ಆದ್ದರಿಂದ ತಾವು ದರಕಾಸ್ತು ಮಾಡಿಕೊಡಲು ಅಧಿಕಾರಿಗಳಿಗೆ ಸೂಚನೆ ನೀಡಿ ಎಂದು ದೊಡ್ಡೇರಿ ಹೋಬಳಿಯ ಕೆ. ಬಸವನಹಳ್ಳಿ ಗ್ರಾಮದ ಹನುಮಂತರಾಜು ಮನವಿ ಮಾಡಿದಾಗ, ನಾಳೆಯೇ ಸಮಸ್ಯೆ ಬಗೆ ಹರಿಸಲು ಸಂಬಂದಪಟ್ಟವರಿಗೆ ತಾಕೀತು ಮಾಡಿದರು.

ಮೂರು ವರ್ಷದಿಂದ ವಿದ್ಯುತ್ ಕಂಬಗಳು ಜಮೀನಿನಲ್ಲಿ ಹಾದುಹೋಗಿದ್ದು, ಬದಲಾಯಿಸಿಲ್ಲ. ಕೇಳಿದರೆ 40 ಸಾವಿರ ಹಣ ಕಟ್ಟಿ ಎನ್ನುತ್ತಿದ್ದು, ನಮ್ಮನ್ನು ಕೇಳಿ ಬೆಸ್ಕಾಂನವರು ಹೊಲದಲ್ಲಿ ಕಂಬ ಹಾಕಿಲ್ಲ. ಈಗ ನಾವೇಕೆ ಹಣ ಕಟ್ಟಬೇಕು ಎಂದು ದೂರುದಾರೊಬ್ಬರು ಆರೋಪ ಮಾಡಿದಾಗ, ತಕ್ಷಣವೇ ಕ್ರಮ ವಹಿಸಿ ಎಂದು ಬೆಸ್ಕಾಂ ಎಇಇ ಮಣಿಕಣ್ಣನಾಯ್ಕರವರಿಗೆ ಸೂಚಿಸಿದರು.

ಜಿಲ್ಲೆಯಲ್ಲಿ 1160 ಕಂದಾಯ ಗ್ರಾಮಗಳ ಆಯ್ಕೆ ಮಾಡಲಾಗಿದ್ದು, ಇದು ರಾಜ್ಯದಲ್ಲೇ ಪ್ರಥಮ ಆಗಿದ್ದು, ಆಂದೋಲನ ರೀತಿ ಕ್ರಮ ಕೈಗೊಳ್ಳಲಾಗಿದೆ. 600 ಹಳ್ಳಿಗಳನ್ನು ಆಯ್ಕೆ ಮಾಡಿ 22 ಸಾವಿರ ಹಕ್ಕು ಪತ್ರ ವಿತರಣೆ, ಮಧುಗಿರಿಯಲ್ಲಿ 2500 ಹಕ್ಕುಪತ್ರ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ. ಈಗ ಶೇ. 100 ರಷ್ಟು ಲ್ಯಾಂಡ್ ಅಕ್ವೇರ್ ಮಾಡಲಾಗಿದ್ದು, ತಾಂತ್ರಿಕ ಕಾರಣದಿಂದ ಸಮಸ್ಯೆಯಾಗಿದ್ದು, ಶೀಘ್ರದಲ್ಲೇ ಸಮಸ್ಯೆ ಬಗೆ ಹರಿಯುವ ವಿಶ್ವಾಸವಿದೆ ಎಂದರು.

ಸಭೆಯಲ್ಲಿ ಎಡಿಸಿ ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರ್ ಶ್ರೀನಿವಾಸ್, ಡಿವೈಎಸ್ಪಿ ಮಂಜುನಾಥ್, ಸಿಪಿಐ ಹನುಮಂತರಾಯಪ್ಪ, ಪಿಎಸ್‌ಐ ಚಂದ್ರಶೇಖರ್ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ತಾಲ್ಲೂಕಿನಲ್ಲಿ ಗ್ಯಾಸ್ ಅಭಾವವಿಲ್ಲ ಕೃತಕ ಅಭಾವ ಸೃಷ್ಟಿಸಿದರೆ ಕಾನೂನು ಕ್ರಮ

ತಿಪಟೂರು

ತಾಲ್ಲೂಕಿನಲ್ಲಿ ಅಡುಗೆ ಅನಿಲ (ಗ್ಯಾಸ್) ವಿತರಣೆಯಲ್ಲಿ ಯಾವುದೇ ವ್ಯತ್ಯಯವಿಲ್ಲ. ಅಗತ್ಯವಿರುವಷ್ಟು ಗ್ಯಾಸ್ ಸಿಲಿಂಡರ್‌ಗಳು ದಾಸ್ತಾನು ಮಾಡಲಾಗಿದ್ದು, ಸರ್ಕಾರದ ನಿಯಮಾನುಸಾರ ವಿತರಣೆಗೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ತಹಸೀಲ್ದಾರ್ ಮೋಹನ್ ಕುಮಾರ್ ತಿಳಿಸಿದ್ದಾರೆ.




ನಗರದ ಆಡಳಿತ ಸೌಧದ ಸಭಾಂಗಣದಲ್ಲಿ ಗ್ಯಾಸ್ ವಿತರಕರ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು,ತಾಲ್ಲೂಕಿನಲ್ಲಿ ಗ್ಯಾಸ್ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ವಿತರಣೆಯಲ್ಲಿ ಯಾವುದೇ ಸಮಸ್ಯೆ ಉಂಟಾಗಿಲ್ಲ.ಸರ್ಕಾರದ ಮಾರ್ಗಸೂಚಿಯಂತೆ, ಗ್ರಾಮೀಣ ಪ್ರದೇಶಗಳಲ್ಲಿ 45 ದಿನಗಳಿಗೆ ಒಂದು ಸಿಲಿಂಡರ್ ಹಾಗೂ ನಗರ ಪ್ರದೇಶಗಳಲ್ಲಿ 25 ದಿನಗಳಿಗೆ ಒಂದು ಸಿಲಿಂಡರ್ ವಿತರಣೆ ಮಾಡಲು ಸೂಚನೆ ನೀಡಲಾಗಿದೆ. ಅದರಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಯಾರಾದರೂ ಪರಿಸ್ಥಿತಿಯನ್ನು ದುರುಪಯೋಗ ಮಾಡಿಕೊಂಡು ಕೃತಕ ಅಭಾವ ಸೃಷ್ಟಿಸಿ,ಗ್ಯಾಸ್ ಸಿಲಿಂಡರ್‌ಗಳನ್ನು ಅಕ್ರಮವಾಗಿ ದಾಸ್ತಾನು ಮಾಡುವುದು ಅಥವಾ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಕಂಡು ಬಂದರೆ ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡುತ್ತಾ,

ಜಾಗತಿಕ ಘಟನೆಗಳ ವರದಿಗಳನ್ನು ನೋಡಿ ಕೆಲವರು ಗ್ಯಾಸ್ ಸಿಗುವುದಿಲ್ಲ ಎಂಬ ಅನಗತ್ಯ ಆತಂಕಕ್ಕೆ ಒಳಗಾಗುತ್ತಿದ್ದಾರೆ. ಆದರೆ ಸರ್ಕಾರದ ನಿಯಮಾನುಸಾರ ಗ್ರಾಹಕರಿಗೆ ಗ್ಯಾಸ್ ಸಿಲಿಂಡರ್‌ಗಳು ಲಭ್ಯವಾಗುತ್ತವೆ ಎಂದು ಸ್ಪಷ್ಟಪಡಿಸಿ, ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಬುಕ್ಕಿಂಗ್ ಮಾಡುತ್ತಿರುವ ಕಾರಣ ಕೆಲವೊಮ್ಮೆ ಸರ್ವರ್ ಸಮಸ್ಯೆ ಉಂಟಾಗಿದೆ. ಇದರಿಂದ ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದರು.

ಸಭೆಯಲ್ಲಿ ನಗರ ಪೊಲೀಸ್ ಠಾಣೆ ವೃತ್ತ ನಿರೀಕ್ಷಕ ಯತೀಶ್ ಮತ್ತು ಆಹಾರ ನಿರೀಕ್ಷಕ ರೇಣುಕ ಪ್ರಸಾದ್ ಸೇರಿದಂತೆ ಗ್ಯಾಸ್ ವಿತರಕರು, ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

# ಜಯಂತಿ ಆಚರಣೆಗೆ ಸಿದ್ಧತೆಗಳನ್ನು ಕೈಗೊಳ್ಳಲು ಸೂಚನೆ

ಹಾಸನ

ಡಾ ಬಿಆರ್ ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಜಯಂತಿಗಳ ಆಚರಣೆಗೆ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳುವಂತೆ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರಾದ ಚಂದ್ರ ಮೌಳಿ ಅವರು ತಿಳಿಸಿದರು. ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ಡಾ ಬಿಆರ್ ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಜಯಂತಿಗಳ ಆಚರಣೆ ಕುರಿತು ಸಭೆ ನಡೆಸಿ ಮಾತನಾಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಮೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ದೂದು ಪೀರ್, ವಿವಿಧ ಸಂಘ ಸಂಸ್ಥೆಗಳ ಮುಖಂಡರುಗಳು ಉಪಸ್ಥಿತರಿದ್ದರು.

# ‘ಶಾಸಕರಿಂದ ಮತ ಚೋರಿ ಸಂಚು’



ಕುಣಿಗಲ್

"ತಾಲ್ಲೂಕಿನ ಸಹಕಾರ ಕ್ಷೇತ್ರದ ಚುನಾವಣೆಗಳಲ್ಲಿ ಶಾಸಕರು ಅಧಿಕಾರಿಗಳ ಮೂಲಕ ವ್ಯವಸ್ಥಿತವಾಗಿ ಮತಚೋರಿ ಮಾಡಲು ಮುಂದಾಗಿದ್ದಾರೆ. ಭ್ರಷ್ಟ ಅಧಿಕಾರಿಗಳನ್ನು ಬಳಸಿಕೊಂಡು ಅಕ್ರಮವಾಗಿ ಚುನಾವಣೆ ಗೆಲ್ಲುವ ತಂತ್ರ ರೂಪಿಸುತ್ತಿದ್ದಾರೆ," ಎಂದು ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಬಿ.ಎನ್. ಜಗದೀಶ ನಾಗರಾಜಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂತೆ ಮಾವತ್ತೂರು ವಿ.ಎಸ್.ಎಸ್.ಎನ್. ಚುನಾವಣೆಯಲ್ಲಿ ನಡೆದ ಅಕ್ರಮಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು. "ಚುನಾವಣಾ ಅಧಿಕಾರಿ ಸುನಿಲ್ ಕುಮಾರ್ ಎಂಬಾತ ಮೊದಲೇ ಮತ ಚಲಾಯಿಸಿದ ಬ್ಯಾಲೆಟ್ ಪತ್ರಗಳನ್ನು ಬೂತ್ ಒಳಗೆ ಹಾಕುವಾಗ ನಮ್ಮ ಏಜೆಂಟ್‌ಗಳ ಕೈಗೆ ಸಿಕ್ಕಿಬಿದ್ದಿದ್ದಾನೆ. ಪ್ರಾಮಾಣಿಕ ಅಧಿಕಾರಿಯಾಗಿದ್ದ ಮಲ್ಲೇಶ್ ಅವರನ್ನು ಬದಲಿಸಿ, ಅಕ್ರಮ ಎಸಗಲೆಂದೇ ಲೋಕಾಯುಕ್ತ ಬಲೆಗೆ ಬಿದ್ದಿದ್ದ ಸುನಿಲ್‌ನನ್ನು ನೇಮಿಸಲಾಗಿದೆ," ಎಂದು ಶಾಸಕರ ವಿರುದ್ಧ ನೇರ ವಾಗ್ದಾಳಿ ನಡೆಸಿದರು.

ಪೊಲೀಸ್ ಸರ್ಪಗಾವಲಿನಲ್ಲಿ ಭಯದ ವಾತಾವರಣ: ಜಿಲ್ಲಾ ಸಹಕಾರ ಬ್ಯಾಂಕ್ ನಿರ್ದೇಶಕ ಹಾಗೂ ಎಪಿಎಂಸಿ ಅಧ್ಯಕ್ಷ ಬಿ. ಶಿವಣ್ಣ ಮಾತನಾಡಿ, "ಸಂತೆ ಮಾವತ್ತೂರು ಚುನಾವಣೆಯನ್ನು ಎರಡು ರಿಸರ್ವ್ ವ್ಯಾನ್ ಪೊಲೀಸ್ ಪಡೆಯೊಂದಿಗೆ ನಡೆಸುವ ಮೂಲಕ ಭಯದ ವಾತಾವರಣ ಸೃಷ್ಟಿಸಲಾಗಿತ್ತು. ಅಭ್ಯರ್ಥಿಗಳನ್ನೇ ಬೂತ್ ಒಳಗೆ ಬಿಡದಂತೆ ತಡೆದು ಶಾಸಕರು ಪೂರ್ವ ನಿಯೋಜಿತ ಅಕ್ರಮ ಎಸಗಿದ್ದಾರೆ. ಜಾಣಗೆರೆ ಚುನಾವಣೆಯಲ್ಲೂ ಇದೇ ಅಧಿಕಾರಿಯನ್ನು ಬಳಸಿ ರಾತ್ರಿ 1:30 ರವರೆಗೂ ನಾಟಕ ನಡೆಸಲಾಗಿದೆ. ಈ ಬಗ್ಗೆ ಸಮಗ್ರ ತನಿಖೆಯಾಗಬೇಕು," ಎಂದು ಒತ್ತಾಯಿಸಿದರು.

ಬೃಹತ್ ಪ್ರತಿಭಟನೆಯ ಎಚ್ಚರಿಕೆ: ಶಾಸಕರ ಅಧಿಕಾರ ದುರುಪಯೋಗ ಮತ್ತು ಭ್ರಷ್ಟ ಅಧಿಕಾರಿಗಳ ನಡೆಯನ್ನು ಖಂಡಿಸಿದ ಜೆಡಿಎಸ್ ಮುಖಂಡರು, ತಪ್ಪಿತಸ್ಥ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. "ಶಾಸಕರು ನೂರಾರು ಸುಳ್ಳು ಕೇಸ್ ಹಾಕಿಸಿದರೂ ಎನ್‌ಡಿಎ ಕೂಟ ಬಗ್ಗುವುದಿಲ್ಲ," ಎಂದು ಸವಾಲು ಹಾಕಿದರು.

ಗೋಷ್ಠಿಯಲ್ಲಿ ಟಿಎಪಿಸಿಎಂಎಸ್ ಉಪಾಧ್ಯಕ್ಷ ಶ್ರೀನಿವಾಸ್, ಪ್ರೆಸ್ ರಂಗಸ್ವಾಮಿ, ಗ್ರಾ.ಪಂ. ಮಾಜಿ ಅಧ್ಯಕ್ಷ ಮಂಜುನಾಥ್, ಯಡಿಯೂರು ದೀಪು ಹಾಗೂ ವಕ್ತಾರ ತರೀಕೆರೆ ಪ್ರಕಾಶ್ ಉಪಸ್ಥಿತರಿದ್ದರು.

# ಧರ್ಮಪ್ರಜ್ಞೆ ಮೀರಿಸುತ್ತಿರುವ ಸ್ವಾರ್ಥ ಮನೋಭಾವ ವಿಷಾದಕರ: ಶ್ರೀಗಳ ಕಳಕಳಿ

ತಿಪಟೂರು

"ಹಿಂದಿನ ಕಾಲದಲ್ಲಿ ಮನುಷ್ಯರು ನೈತಿಕ ಮೌಲ್ಯಗಳಿಗೆ ಬೆಲೆ ನೀಡಿ ಇನ್ನೊಬ್ಬರ ಋಣದಲ್ಲಿ ಸಾಯಬಾರದು ಎಂದು ಬದುಕುತ್ತಿದ್ದರು. ಆದರೆ ಇಂದು ಧರ್ಮಪ್ರಜ್ಞೆಯನ್ನು ಮೀರಿಸುವಂತೆ ಸ್ವಾರ್ಥ ಹೆಚ್ಚುತ್ತಿರುವುದು ವಿಷಾದಕರ," ಎಂದು ಸಿರಿಗೆರೆಯ ತರಳಬಾಳು ಜಗದ್ಗುರು ಬೃಹನ್ಮಠದ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ತಿಳಿಸಿದರು.

ನಗರದ ಕೆ.ಆರ್. ಬಡಾವಣೆಯ ಗೋವಿನಪುರ ವೃತ್ತದಲ್ಲಿ ನಿರ್ಮಿಸಲಾದ ಶಿವ ವಿವಿಧೋದ್ದೇಶ ಸಹಕಾರ ಸಂಘದ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಕುಗ್ಗುತ್ತಿರುವ ಸಂಬಂಧಗಳ ಮೌಲ್ಯ: ಇತ್ತೀಚಿನ ದಿನಗಳಲ್ಲಿ ಆಸ್ತಿಗಾಗಿ ಹೆಣ್ಣುಮಕ್ಕಳು



ತಂದೆಯ ವಿರುದ್ಧವೇ ನ್ಯಾಯಾಲಯದ ಮೊರೆ ಹೋಗುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಶ್ರೀಗಳು, "ಇದು ಕುಟುಂಬ ಸಂಬಂಧಗಳನ್ನು ಕುಗ್ಗಿಸುವ ಕ್ರೌರ್ಯ ಮತ್ತು ಅಮಾನವೀಯತೆಯಾಗಿದೆ. ತಂದೆ–ತಾಯಿ ಮತ್ತು ಮಕ್ಕಳ ನಡುವಿನ ಸಂಬಂಧ ಅಮೂಲ್ಯವಾದದ್ದು. ಸಮಸ್ಯೆಗಳನ್ನು ಕೋರ್ಟ್‌ನಲ್ಲಿ ಬಗೆಹರಿಸಿಕೊಳ್ಳುವ ಬದಲು ಪರಸ್ಪರ ಕುಳಿತು ಮಾತನಾಡಿ ಬಗೆಹರಿಸಿಕೊಳ್ಳುವುದು ಉತ್ತಮ," ಎಂದು ಕಿವಿಮಾತು ಹೇಳಿದರು.

ಕಾನೂನು ಮತ್ತು ಧರ್ಮ:

"ಕಾನೂನು ಧರ್ಮದ ತತ್ವಗಳನ್ನೇ ಒಳಗೊಂಡಿದೆ. ಆದರೆ ಕಾನೂನನ್ನು ಪಾಲಿಸುವ ಬದಲು ಅದರಿಂದ ತಪ್ಪಿಸಿಕೊಳ್ಳಲು ಒಳಸುಳಿವುಗಳನ್ನು ಹುಡುಕುವ ಮನಸ್ಥಿತಿ ಸಮಾಜಕ್ಕೆ ಮಾರಕ. ಮನುಷ್ಯ ಮನುಷ್ಯರ ನಡುವಿನ ಗೌರವ ಮತ್ತು ವಿಶ್ವಾಸ ಉಳಿದಾಗ ಮಾತ್ರ ಜೀವನಕ್ಕೆ ಅರ್ಥ ಸಿಗುತ್ತದೆ," ಎಂದರು. ಇದೇ ವೇಳೆ, ಸಹಕಾರಿ ಬ್ಯಾಂಕುಗಳಿಂದ ಸಾಲ ಪಡೆದವರು ಸಮಯಕ್ಕೆ ಸರಿಯಾಗಿ ಮರುಪಾವತಿ ಮಾಡಿದರೆ ಮಾತ್ರ ಸಂಸ್ಥೆಗಳು ಬೆಳೆಯಲು ಸಾಧ್ಯ ಎಂದು ನೆನಪಿಸಿದರು.

ಸಹಕಾರ ಸಂಘಗಳ ಪಾತ್ರ: ಸಂಘದ ಅಧ್ಯಕ್ಷ ಆರ್.ಬಿ. ಆನಂದಮೂರ್ತಿ ಮಾತನಾಡಿ, ಸಾಮಾನ್ಯ ಜನರ ಆರ್ಥಿಕ ಅಭಿವೃದ್ಧಿಗೆ ಸಹಕಾರ ಸಂಘಗಳು ದೊಡ್ಡ ಆಧಾರವಾಗಿವೆ. ಸದಸ್ಯರ ಉಳಿತಾಯವನ್ನು ಪ್ರೋತ್ಸಾಹಿಸಿ ಕಡಿಮೆ ಬಡ್ಡಿದರದಲ್ಲಿ ಸಾಲ ನೀಡುವ ಮೂಲಕ ಜನರ ಜೀವನಮಟ್ಟ ಸುಧಾರಿಸುವುದು ನಮ್ಮ ಉದ್ದೇಶ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಸಾಧು ವೀರಶೈವ ಸಮಾಜದ ಅಧ್ಯಕ್ಷ ಪಿ.ಬಿ. ನಂಜುಂಡಪ್ಪ, ಸಂಘದ ಉಪಾಧ್ಯಕ್ಷ ಜಗದೀಶ್, ನಿರ್ದೇಶಕರುಗಳಾದ ಈಶ್ವರಪ್ಪ ಬೈರನಾಯಕನಹಳ್ಳಿ, ಗಿರೀಶ್ ಮತ್ತಿಹಳ್ಳಿ, ನವೀನ್ ಕುಮಾರ್ ಹಾಲ್ಕುರಿಕೆ ಹಾಗೂ ಪದಾಧಿಕಾರಿಗಳು, ಷೇರುದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ನಗೆಮಲ್ಲಿಗೆ ಬಳಗದ ಯುಗಾದಿ ಹಾಸ್ಯಗೋಷ್ಠಿಯಲ್ಲಿ ಮೊಳಗಿದ ನಗೆಯ ಅಲೆ

ತುಮಕೂರು

"ಹಾಸ್ಯವು ಸಮಾಜಕ್ಕೆ ಮುಜುಗರ ಉಂಟು ಮಾಡುವಂತಿರಬಾರದು ಅಥವಾ ಅಪಹಾಸ್ಯವಾಗಬಾರದು. ಎಲ್ಲಾ ವಯೋಮಾನದವರು ಆನಂದಿಸುವಂತಹ ಶುದ್ಧ ಹಾಸ್ಯಕ್ಕೆ ಯಾವತ್ತೂ ಬೆಲೆ ಇರುತ್ತದೆ," ಎಂದು ಸ್ವದೇಶಿ ಚಿಂತಕ ವಿಶ್ವನಾಥ್ ಸ್ವದೇಶಿ ತಿಳಿಸಿದರು.

ನಗರದ ನಗೆಮಲ್ಲಿಗೆ ಬಳಗ ಹಮ್ಮಿಕೊಂಡಿದ್ದ 'ಯುಗಾದಿ ಹಾಸ್ಯಗೋಷ್ಠಿ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹಿರಿಯ ಹಾಸ್ಯ ಸಾಹಿತಿ ದಿವಂಗತ ಗೌಡನಕಟ್ಟೆ ತಿಮ್ಮಯ್ಯನವರು ಸ್ಥಾಪಿಸಿದ ನಗೆಮಲ್ಲಿಗೆ ಸಂಸ್ಥೆಯು ದಶಕಗಳಿಂದ ಏಪ್ರಿಲ್ 1ರ 'ಮೂರ್ಖರ ದಿನಾಚರಣೆ' ಮೂಲಕ ಜನರಿಗೆ ನಗೆಯ ರಸದೌತಣ ನೀಡುತ್ತಾ ಬಂದಿದೆ. ಅವರ ನಂತರ ಈ ಪರಂಪರೆಯನ್ನು ಬಳಗ ಯಶಸ್ವಿಯಾಗಿ ಮುಂದುವರಿಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಎಂದರು.

ಹಾಸ್ಯದ ಗಂಧಗಾಳಿ: ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಡಾ. ಶೈಲಾ ನಾಗರಾಜ್ ಮಾತನಾಡಿ, "ಗೌಡನಕಟ್ಟೆ ತಿಮ್ಮಯ್ಯನವರು ಸಜ್ಜನಿಕೆಯ ಹಾಸ್ಯ ಸಾಹಿತಿಯಾಗಿದ್ದರು. ಅವರು ಕಟ್ಟಿ ಬೆಳೆಸಿದ ಸಂಸ್ಥೆ ಇಂದು ನೂರಾರು ಹಾಸ್ಯ ಬರಹಗಾರರಿಗೆ ಹಾಗೂ ಕಲಾವಿದರಿಗೆ ಸ್ಫೂರ್ತಿಯಾಗಿದೆ," ಎಂದು ತಮ್ಮ ವಿದ್ಯಾರ್ಥಿ ಜೀವನದ ನೆನಪುಗಳನ್ನು ಮೆಲುಕು ಹಾಕಿದರು.

ಸಂಶೋಧನಾ ಮಾರ್ಗದರ್ಶಕಿ ಡಾ. ಪ್ರಿಯಾಂಕ ಎಂ.ಜಿ. ಆಶಯ ನುಡಿಗಳನ್ನಾಡಿ, ಇಂದಿನ ಒತ್ತಡದ ಬದುಕಿನಲ್ಲಿ ನಗು ಹಾಗೂ ನೆಮ್ಮದಿ ಮಾಯವಾಗಿದೆ. ಹಣ ಕೊಟ್ಟು ಕೊಳ್ಳಲಾಗದ ನಗುವನ್ನು ಇಂತಹ ಗೋಷ್ಠಿಗಳ ಮೂಲಕ ಜನರಿಗೆ ಉಚಿತವಾಗಿ ತಲುಪಿಸುತ್ತಿರುವುದು ಮಹತ್ವದ ಕೆಲಸ ಎಂದರು.

ರಂಜಿಸಿದ ಹಾಸ್ಯಪಟುಗಳು:

ಯುಗಾದಿ ಹಬ್ಬದ ಸಡಗರದಲ್ಲಿ ನಡೆದ ಈ ಗೋಷ್ಠಿಯಲ್ಲಿ ವಿವಿಧೆಡೆಗಳಿಂದ ಆಗಮಿಸಿದ್ದ 25ಕ್ಕೂ ಹೆಚ್ಚು ಹಾಸ್ಯಪಟುಗಳು ತಮ್ಮ ಚತುರೋಕ್ತಿಗಳ ಮೂಲಕ ವೀಕ್ಷಕರನ್ನು ನಗೆಗಡಲಲ್ಲಿ ತೇಲಿಸಿದರು. ಸಮಾರಂಭದಲ್ಲಿ ನಗೆಮಲ್ಲಿಗೆ ಬಳಗದ ಎಂ.ಕೆ. ನಾಗರಾಜ ರಾವ್, ಅಬ್ಬಿನಹೊಳೆ ಸುರೇಶ್, ಜಿ.ಎನ್. ರಾಧಾಕೃಷ್ಣ, ಗೌ.ತಿ. ರಂಗನಾಥ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಗೃಹ ಬಳಕೆ ಅಡುಗೆ ಅನಿಲ ಸಿಲಿಂಡರ್‌ಗಳ ಪೂರೈಕೆ: ವದಂತಿಗಳಿಗೆ ಕಿವಿಗೊಡದಂತೆ ಮನವಿ

ಕೋಲಾರ

ಸಾಮಾಜಿಕ ಜಾಲ ತಾಣಗಳಲ್ಲಿ ಗೃಹ ಬಳಕೆ ಅಡುಗೆ ಅನಿಲ ಸಿಲಿಂಡರ್‌ಗಳ ಪೂರೈಕೆಯಲ್ಲಿ ವ್ಯತ್ಯಯವಾಗುತ್ತಿರುವ ಬಗ್ಗೆ ವದಂತಿಗಳು ಹರಿದಾಡುತ್ತಿರುತ್ತದೆ.

ಈ ಹಿಂದಿನಂತಯೇ ಜಿಲ್ಲೆಗೆ ಅಗತ್ಯವಿರುವ ಪ್ರಮಾಣದ ಅಡುಗೆ ಅನಿಲ ಸಿಲಿಂಡರ್‌ಗಳು ಸರಬಬರಾಜಾಗುತ್ತಿದ್ದು, ದಿನಾಂಕ 15–03–2026 ರಂತೆ 10279 ಗೃಹ ಬಳಕೆ ಅಡುಗೆ ಅನಿಲ ಸಿಲಿಂಡರ್‌ಗಳ ದಾಸ್ತಾನು ಲಭ್ಯವಿರುತ್ತದೆ. ಗ್ರಾಹಕರು, ಸಾರ್ವಜನಿಕರು ಇಂತಹ ವದಂತಿಗಳಿಗೆ ಯಾರು ಸಹ ಕಿವಿಗೊಡಬಾರದೆಂದು ಹಾಗೂ ಆತಂಕಕ್ಕೊಳಗಾಗಬಾರದು. ಗೃಹ ಬಳಕೆ ಸಿಲಿಂಡರ್‌ಗಳನ್ನು ಅಕ್ರಮವಾಗಿ ಹೆಚ್ಚುವರಿಯಾಗಿ ದಾಸ್ತಾನು ಮಾಡಿಕೊಳ್ಳುವುದು, ವಾಣಿಜ್ಯ ಉದ್ದೇಶಗಳಿಗೆ ಬಳಕೆ ಮಾಡುವುದು ಮತ್ತು ಗೃಹಬಳಕೆ ಸಿಲಿಂಡರ್‌ಗಳನ್ನು ಮಾಡುವ ಪ್ರಕರಣಗಳನ್ನು ಪತ್ತೆಹಚ್ಚಲು ಜಿಲ್ಲಾ ಮಟ್ಟದಲ್ಲಿ ಮತ್ತು ತಾಲ್ಲೂಕು ಮಟ್ಟದಲ್ಲಿ ತಂಡಗಳನ್ನು ರಚನೆ ಮಾಡಿ ನೋಡಲ್ ಅಧಿಕಾರಿಗಳನ್ನು ಸಹ ನೇಮಕಮಾಡಲಾಗಿದೆ. ತಹಶೀಲ್ದಾರ್ ಮತ್ತು ಆಹಾರ ಇಲಾಖೆಯ ಸಿಬ್ಬಂದಿ ವರ್ಗದವರೂ ಸಹ ತಪಾಸಣೆ ಮಾಡುತ್ತಿದ್ದು, ದಿ. 15–03–2026 ರಂದು ಬಂಗಾರಪೇಟೆ ತಾಲ್ಲೂಕಿನವರು ಅನಧಿಕೃತ ದಾಸ್ತಾನು ಮಾಡಿದ್ದು, 9 ಅನಿಲ ಸಿಲಿಂಡರ್‌ಗಳನ್ನು ಜಪ್ತಿ ಮಾಡಿ ಕ್ರಮ ಜರುಗಿಸಲಾಗಿದೆ. ಅಕ್ರಮವಾಗಿ ಅನಿಲ ಸಿಲಿಂಡರ್ ದಾಸ್ತಾನು ಮಾಡುವ ಕೃತ್ಯಗಳು ಕಂಡುಬಂದಲ್ಲಿ ಅಂತಹವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ–1955 ರನ್ವಯ ಪ್ರಕರಣ ದಾಖಲಿಸಿ ಕಠಿಣ ಕ್ರಮ ಜರುಗಿಸಲಾಗುವುದು. ಗ್ರಾಹಕರ ಗಳ ಯಾವುದೇ ದೂರುಗಳು ಇದ್ದಲ್ಲಿ ಉಪ ನಿರ್ದೇಶಕರು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರವರ ಕಚೇರಿಯಲ್ಲಿನ ಸಹಾಯವಾಣಿ ದೂರವಾಣಿ ಸಂಖ್ಯೆ:08152243521ಗೆ ಕರೆ ಮಾಡಬಹುದೆಂದು ಡಿಸಿ ಕಚೇರಿ ತಿಳಿಸಿದ್ದಾರೆ.

# ಸಂಜೀವಿನಿ ಯುಗಾದಿ ಮೇಳಕ್ಕೆ ಚಾಲನೆ; ರಿಯಾಯಿತಿ ದರದಲ್ಲಿ ಹಬ್ಬದ ದಿನಸಿ ಕಿಟ್

ಚಿಕ್ಕಬಳ್ಳಾಪುರ

ಜಿಲ್ಲೆಯ ಮಹಿಳಾ ಸ್ವ–ಸಹಾಯ ಗುಂಪುಗಳ ಸದಸ್ಯರು ಆರ್ಥಿಕವಾಗಿ ಸಬಲರಾಗಬೇಕು ಎಂಬ ಉದ್ದೇಶದಿಂದ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿರುವ "ಸಂಜೀವಿನಿ ಯುಗಾದಿ ಮಾಸಿಕ ಸಂತೆ ಹಾಗೂ ವಸ್ತು ಪ್ರದರ್ಶನ"ಕ್ಕೆ ಜಿಲ್ಲಾಧಿಕಾರಿ ಜಿ. ಪ್ರಭು ಚಾಲನೆ ನೀಡಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, "ಗ್ರಾಮೀಣ ಮಹಿಳೆಯರ ಸ್ವ–ಉದ್ಯೋಗಕ್ಕೆ ಪ್ರೋತ್ಸಾಹ ನೀಡಲು ಎನ್.ಆರ್.ಎಲ್.ಎಂ ಯೋಜನೆಯಡಿ ಈ ಮೇಳ ಆಯೋಜಿಸಲಾಗಿದೆ. ಜಿಲ್ಲೆಯ ನಾಗರಿಕರು ಇಲ್ಲಿನ ದಿನಸಿ ಪದಾರ್ಥಗಳನ್ನು ಖರೀದಿಸುವ ಮೂಲಕ ಮಹಿಳಾ



ಸಂಘಗಳಿಗೆ ಬೆನ್ನೆಲುಬಾಗಬೇಕು," ಎಂದು ಮನವಿ ಮಾಡಿದರು.

ಕೇವಲ 499 ರೂ.ಗೆ ಹಬ್ಬದ ದಿನಸಿ ಕಿಟ್: ಜಿಲ್ಲಾ ಪಂಚಾಯತ್ ಸಿಇಓ ಡಾ. ನವೀನ್ ಭಟ್ ವೈ ಮಾತನಾಡಿ, "ಯುಗಾದಿ ಮತ್ತು ರಂಜಾನ್ ಹಬ್ಬದ ಹಿನ್ನೆಲೆಯಲ್ಲಿ ವಿನೂತನವಾಗಿ 'ಯುಗಾದಿ ಅಕ್ಕ ಹೋಳಿಗೆ ಮಿನಿ ಕಿಟ್' ಸಿದ್ಧಪಡಿಸಲಾಗಿದೆ. 670 ರೂ. ಮಾರುಕಟ್ಟೆ ದರದ ಈ ಕಿಟ್ ಅನ್ನು ಸಾರ್ವಜನಿಕರಿಗೆ ಕೇವಲ 499 ರೂ. ರಿಯಾಯಿತಿ ದರದಲ್ಲಿ ನೀಡಲಾಗುತ್ತಿದೆ. ಮಧ್ಯವರ್ತಿಗಳಿಲ್ಲದೆ ನೇರವಾಗಿ ಗ್ರಾಹಕರಿಗೆ ತಲುಪಿಸುತ್ತಿರುವುದರಿಂದ ಕಡಿಮೆ ದರದಲ್ಲಿ ಗುಣಮಟ್ಟದ ವಸ್ತುಗಳನ್ನು ನೀಡಲು ಸಾಧ್ಯವಾಗಿದೆ," ಎಂದು ವಿವರಿಸಿದರು.

ಕಿಟ್‌ನಲ್ಲಿ ಏನೇನಿದೆ?: ಜಿಲ್ಲೆಯ 24ಕ್ಕೂ ಹೆಚ್ಚು ಸ್ವ–ಸಹಾಯ ಗುಂಪುಗಳ 250ಕ್ಕೂ ಹೆಚ್ಚು ಮಹಿಳೆಯರು ಈ ಕಿಟ್ ಸಿದ್ಧಪಡಿಸಿದ್ದಾರೆ. ಇದರಲ್ಲಿ ಜಿಲ್ಲೆಯ ಸಾವಯವ ಉತ್ಪನ್ನಗಳಾದ ತೊಗರಿಬೇಳೆ, ಹೆಸರುಬೇಳೆ, ಗಾಣದ ಕಡಲೆಕಾಯಿ ಎಣ್ಣೆ, ಆರ್ಗಾನಿಕ್ ಬೆಲ್ಲ, ತುಪ್ಪ, ಮನೆಯಲ್ಲೇ ತಯಾರಿಸಿದ ಹಪ್ಪಳ, ತೆಂಗಿನಕಾಯಿ, ಸೀಗೆಕಾಯಿ ಪುಡಿ ಸೇರಿದಂತೆ ಪೌಷ್ಟಿಕಾಂಶದ ಪದಾರ್ಥಗಳಿವೆ.

ಅಧಿಕಾರಿಗಳಿಂದಲೇ ಖರೀದಿ: ಉದ್ಘಾಟನೆ ಬಳಿಕ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಇಓ, ಎಸ್ಪಿ ಕುಶಲ್ ಚೌಕ್ಸೆ ಹಾಗೂ ಅಪರ ಜಿಲ್ಲಾಧಿಕಾರಿಗಳು ಸ್ವತಃ ದಿನಸಿ ಕಿಟ್ ಖರೀದಿಸಿ ಮಾದರಿಯಾದರು. ಅಲ್ಲದೆ, ಮೇಳದಲ್ಲಿ ಸಿದ್ಧಪಡಿಸಿದ್ದ ಬಿಸಿ ಬಿಸಿ ಹೋಳಿಗೆ ಊಟವನ್ನು ಸವಿದು ಮೆಚ್ಚುಗೆ ವ್ಯಕ್ತಪಡಿಸಿದರು. ಪ್ರಸ್ತುತ 3 ದಿನಗಳ ಕಾಲ ನಡೆಯುವ ಈ ಸಂತೆ ಯಶಸ್ವಿಯಾದರೆ, ಮುಂದಿನ ದಿನಗಳಲ್ಲಿ ಪ್ರತಿ ಪ್ರಮುಖ ಹಬ್ಬಗಳಲ್ಲೂ ಇಂತಹ ಮಾರಾಟ ಮೇಳ ಆಯೋಜಿಸುವುದಾಗಿ ಅಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ಎಡಿಸಿ ಡಾ. ಎನ್. ಭಾಸ್ಕರ್, ಪಂಚಾಯತ್ ಉಪಕಾರ್ಯದರ್ಶಿ ಅತೀಕ್ ಪಾಷ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಂಜೀವಿನಿ ಯೋಜನೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ಶಾಲೆ ಬಳಿ ಕಬ್ಬಿಣದ ತಡೆಗೋಡೆ ನಿರ್ಮಿಸಲು ಒತ್ತಾಯ

ಕೋಲಾರ

ನಗರದ ಹೊರವಲಯದ ರಾಷ್ಟ್ರೀಯ ಹೆದ್ದಾರಿ 75ರಲ್ಲಿರುವ ಪೇಟೆಚಾಮನಹಳ್ಳಿಯ ಆರ್.ವಿ. ಖಾಸಗಿ ಶಾಲೆಯ ಬಳಿ ಮಕ್ಕಳ ಸುರಕ್ಷತೆಗಾಗಿ ಕಬ್ಬಿಣದ ಸರಳುಗಳ ತಡೆಗೋಡೆ ನಿರ್ಮಿಸುವಂತೆ ಒತ್ತಾಯಿಸಿ ಭೂಸಂತ್ರಸ್ತರ ಹೋರಾಟ ಸಮಿತಿಯ ಜಿಲ್ಲಾ ಸಂಚಾಲಕ ಆರ್. ಶ್ರೀನಿವಾಸನ್ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ ಎಂ.ಆರ್. ರವಿ, "ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಕೆಲವು ಕಡೆಗಳಲ್ಲಿ ಆಕಸ್ಮಿಕ ಅಪಘಾತಗಳು ಸಂಭವಿಸುತ್ತಿವೆ. ಸಾರ್ವಜನಿಕರು ಸಂಚಾರಿ ನಿಯಮಗಳನ್ನು ಪಾಲಿಸಬೇಕು. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಶಾಲಾ ಮುಖ್ಯಸ್ಥರು ಸಹ ಮಕ್ಕಳು ಶಾಲೆಗೆ ಬರುವಾಗ ಮತ್ತು ಬಿಡುವ ಸಮಯದಲ್ಲಿ ಪೋಷಕರು ಹಾಗೂ ಮಕ್ಕಳ ರಕ್ಷಣೆಗಾಗಿ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಈಗಾಗಲೇ ಸೂಚನೆ ನೀಡಲಾಗಿದೆ," ಎಂದರು.

ಹೆದ್ದಾರಿ ಅಧಿಕಾರಿಗಳಿಗೆ ಸೂಚನೆ: ಹೆದ್ದಾರಿಯ ಈ ಭಾಗದಲ್ಲಿ ವಾಹನಗಳ ವೇಗ ಹೆಚ್ಚಿರುವುದರಿಂದ ಶಾಲಾ ಮಕ್ಕಳ ಹಿತದೃಷ್ಟಿಯಿಂದ ಕಬ್ಬಿಣದ ತಡೆಗೋಡೆ ಅನಿವಾರ್ಯವಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿತ್ತು. ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು, ಕೂಡಲೇ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಚರ್ಚಿಸಿ, ಶಾಲೆಯ ಮುಖ್ಯರಸ್ತೆಯ ಬಳಿ ಕಬ್ಬಿಣದ ಸರಳುಗಳ ತಡೆಗೋಡೆ ನಿರ್ಮಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಹರಟಿ ಪ್ರಕಾಶ್, ಭಟ್ರಹಳ್ಳಿ ಮಂಜುನಾಥ್ ಸೇರಿದಂತೆ ಹೋರಾಟ ಸಮಿತಿಯ ಪ್ರಮುಖರು ಉಪಸ್ಥಿತರಿದ್ದರು.




# ಚಿರತೆ ಆತಂಕ: ಬೋನಿಗೆ ಇರಿಸಲು ಸಾರ್ವಜನಿಕರ ಒತ್ತಾಯ

ಮಾಗಡಿ


*ತಾಲೂಕಿನ ಮಾಡಬಾಳ್ ಹೋಬಳಿಯ ಸೊಣ್ಣೇನಹಳ್ಳಿ ತಾಂಡ್ಯ ಗ್ರಾಮದಲ್ಲಿ ಚಿರತೆಯೊಂದು ದಾಳಿ ನಡೆಸಿ ಮನೆಯ ನಾಯಿಯನ್ನು ಬಲಿ ಪಡೆದಿರುವ ಘಟನೆ ನಡೆದಿದೆ. ಈ ಘಟನೆಯಿಂದಾಗಿ ಗ್ರಾಮಸ್ಥರಲ್ಲಿ ತೀವ್ರ ಭಯ ಮತ್ತು ಆತಂಕದ ವಾತಾವರಣ ನಿರ್ಮಾಣವಾಗಿದೆ.*

*ಗ್ರಾಮದ ನಿವಾಸಿ ಮಂಜು ನಾಯಕ್ ಎಂಬುವವರ ಮನೆಯ ಹೊರಗೆ ಕಟ್ಟಿದ್ದ ನಾಯಿಯ ಮೇಲೆ ರಾತ್ರಿ ವೇಳೆ ಹೊಂಚು ಹಾಕಿ ಬಂದ ಚಿರತೆಯು, ಕುತ್ತಿಗೆಯನ್ನು ಸೀಳಿ ಭೀಕರವಾಗಿ ದಾಳಿ ನಡೆಸಿ ಕೊಂದಿದೆ. ಬೆಳಿಗ್ಗೆ ಘಟನೆ ಬೆಳಕಿಗೆ ಬಂದಾಗ ಗ್ರಾಮಸ್ಥರು ಆತಂಕಕ್ಕೊಳಗಾಗಿದ್ದಾರೆ.*

*ಈ ಭಾಗವು ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವುದರಿಂದ ಇತ್ತೀಚಿನ ದಿನಗಳಲ್ಲಿ ಚಿರತೆಗಳ ಸಂಚಾರ ಹೆಚ್ಚಾಗಿದೆ. "ಚಿರತೆಗಳು ಪದೇ ಪದೇ ಗ್ರಾಮಕ್ಕೆ ನುಗ್ಗುತ್ತಿದ್ದು, ಪಶುಗಳು ಹಾಗೂ ಸಾಕುಪ್ರಾಣಿಗಳಿಗೆ ರಕ್ಷಣೆ ಇಲ್ಲದಂತಾಗಿದೆ," ಎಂದು ಸ್ಥಳೀಯ ನಿವಾಸಿ ಯಶವಂತ್ ನಾಯಕ್ ಅಳಲು ತೋಡಿಕೊಂಡಿದ್ದಾರೆ.*

*ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚಿರತೆಯ ಚಲನವಲನಗಳನ್ನು ಗಮನಿಸಿ, ಅದನ್ನು ಸೆರೆಹಿಡಿಯಲು ಶೀಘ್ರದಲ್ಲೇ ಸೂಕ್ತ ಸ್ಥಳದಲ್ಲಿ ಬೋನು ಅಳವಡಿಸಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದ್ದಾರೆ. ಚಿರತೆ ಹಾವಳಿ ಇರುವ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯು ಗ್ರಾಮಸ್ಥರಿಗೆ ಕೆಲವು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದೆ. ರಾತ್ರಿ ವೇಳೆ ಮನೆಯಿಂದ ಹೊರಬರುವಾಗ ಜಾಗ್ರತೆ ವಹಿಸಬೇಕು. ಕಾಡಿನ ಸಮೀಪದ ಪ್ರದೇಶಗಳಿಗೆ ಒಬ್ಬರೇ ಓಡಾಡಬಾರದು. ಸಾಕುಪ್ರಾಣಿಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಬೇಕು.*

# ದಕ್ಷ ಅಧಿಕಾರಿಯ ಅಗಲಿಕೆಗೆ ಕಂಬನಿ



ಚಿಂತಾಮಣಿ

ತಾಲ್ಲೂಕಿನಲ್ಲಿ ಅತ್ಯಂತ ದಕ್ಷ ಹಾಗೂ ಪ್ರಾಮಾಣಿಕ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ (ಬಿಇಓ) ದಿವಂಗತ ವಿ. ಉಮಾದೇವಿ ಅವರಿಗೆ ತಾಲ್ಲೂಕಿನ ಶೈಕ್ಷಣಿಕ ವಲಯ ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇಲ್ಲಿನ ಬಿಇಓ ಕಚೇರಿ ಆವರಣದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘ, ಶಿಕ್ಷಣ ಇಲಾಖೆ ಹಾಗೂ ವಿವಿಧ ಶಿಕ್ಷಕ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ನೂರಾರು ಶಿಕ್ಷಕರು ಮತ್ತು ಅಧಿಕಾರಿಗಳು ಭಾಗವಹಿಸಿ ಪುಷ್ಪ ನಮನ ಸಲ್ಲಿಸಿದರು.

ಕರ್ತವ್ಯ ನಿಷ್ಠೆಗೆ ಮತ್ತೊಂದು ಹೆಸರು: ತಾಲ್ಲೂಕು ಪಂಚಾಯಿತಿ ಇಓ ಎಸ್. ಆನಂದ್ ಮಾತನಾಡಿ, "ಉಮಾದೇವಿ ಅವರ ಸಮಯ ಪ್ರಜ್ಞೆ ಹಾಗೂ ಕರ್ತವ್ಯ ನಿಷ್ಠೆ ಪ್ರತಿಯೊಬ್ಬ ಸರ್ಕಾರಿ ನೌಕರನಿಗೂ ಮಾದರಿಯಾಗಿತ್ತು. ಅವರ ಶಿಸ್ತುಬದ್ಧ ಕೆಲಸದ ವೈಖರಿಯಿಂದ ತಾಲ್ಲೂಕಿನ ಶೈಕ್ಷಣಿಕ ಚಟುವಟಿಕೆಗಳಿಗೆ ಹೊಸ ಆಯಾಮ ದೊರೆತಿತ್ತು," ಎಂದು ಸ್ಮರಿಸಿದರು. ನಗರಸಭೆ ಪೌರಾಯುಕ್ತ ಜಿ.ಎನ್. ಚಲಪತಿ ಮಾತನಾಡಿ, ಇಲಾಖಾ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದಲ್ಲಿ ಅವರ ದಕ್ಷತೆಯನ್ನು ಗುಣಗಾನ ಮಾಡಿದರು.

ಶಿಕ್ಷಣ ಕ್ಷೇತ್ರಕ್ಕೆ ದೊಡ್ಡ ನಷ್ಟ: ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರ್. ಅಶೋಕ್ ಕುಮಾರ್ ಮಾತನಾಡಿ, "ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಅವರು ಕೈಗೊಂಡ ಕ್ರಾಂತಿಕಾರಿ ಕ್ರಮಗಳು ಮತ್ತು ಇಲಾಖೆಯಲ್ಲಿ ತಂದ ಸುಧಾರಣೆಗಳು ಎಂದಿಗೂ ಅವಿಸ್ಮರಣೀಯ. ಅವರ ನಿಧನದಿಂದ ತಾಲ್ಲೂಕಿನ ಶಿಕ್ಷಣ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಉಂಟಾಗಿದೆ," ಎಂದು ಕಂಬನಿ ಮಿಡಿದರು.

ಕ್ಷೇತ್ರ ಸಮನ್ವಯಾಧಿಕಾರಿ ಗಿರಿಜಮ್ಮ ಅವರು ದಿವಂಗತರ ಶೈಕ್ಷಣಿಕ ಸೇವೆಗಳನ್ನು ನೆನಪಿಸಿಕೊಂಡರು. ಸಭೆಯಲ್ಲಿ ಶಿಕ್ಷಕರ ಸಂಘಟನೆಯ ಮುಖಂಡರಾದ ವಸಂತ್ ರೆಡ್ಡಿ, ಮಂಜು ಭಾರ್ಗವಿ, ಚಂದ್ರಮ್ಮ, ರಮೇಶ್ ಸೇರಿದಂತೆ ಶಿಕ್ಷಣ ಸಂಯೋಜಕರು, ಬಿಆರ್‌ಪಿಗಳು, ಸಿಆರ್‌ಪಿಗಳು ಹಾಗೂ ಬಿಇಓ ಕಚೇರಿಯ ಸಿಬ್ಬಂದಿ ವರ್ಗದವರು ಭಾಗವಹಿಸಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಮೌನ ಪ್ರಾರ್ಥನೆ ಸಲ್ಲಿಸಿದರು.

# ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಾಮಗ್ರಿ ವಿತರಣೆ

ರಾಮನಗರ

2025–26ನೇ ಸಾಲಿಗೆ ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯಲಿರುವ ವಿದ್ಯಾರ್ಥಿಗಳಿಗೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಜಿ.ಎನ್.ನಟರಾಜ್ ಗಾಣಕಲ್‌ರವರು ಸೋಮವಾರ ಪರೀಕ್ಷಾ ಸಾಮಗ್ರಿಗಳನ್ನು ವಿತರಿಸಿದರು.

ಬಿಡದಿ ಪಟ್ಟಣದ ಶ್ರೀಬಸವೇಶ್ವರಸ್ವಾಮಿ ಗ್ರಾಮಾಂತರ ಪ್ರೌಢಶಾಲೆ ಆವರಣದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ 1500ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪರೀಕ್ಷಾ ಸಾಮಗ್ರಿಗಳನ್ನು ನೀಡಿದ ನಟರಾಜ್‌ರವರು ಎಸ್ಸೆಸ್ಸೆಲ್ಸಿ ಪರೀಕ್ಷೆ ನಮಗೆ ಭಯವಿಲ್ಲ, ಅದು ಯುಗಾದಿ ಹಬ್ಬ, ಮೊಬೈಲ್ ಬಿಡಿ, ಪುಸ್ತಕ ಹಿಡಿ ಎಂಬ ಘೋಷಣೆಗಳನ್ನು ವಿದ್ಯಾರ್ಥಿಗಳೊಂದಿಗೆ ಕೂಗಿ ಅವರಲ್ಲಿ ಆತ್ಮಸ್ಥೈರ್ಯ ತುಂಬಿದರು.

ಈ ವೇಳೆ ಗಾಣಕಲ್ ನಟರಾಜ್ ಮಾತನಾಡಿ, ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಿರುವ ಮಕ್ಕಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆಯೊಂದಿಗೆ ಪರೀಕ್ಷಾ ಸಾಮಗ್ರಿಗಳನ್ನುವಿತರಣೆಮಾಡಲಾಗಿದೆ.ಪರೀಕ್ಷೆಯನ್ನು ಯುಗಾದಿ ಹಬ್ಬದಂತೆ ಪರಿಗಣಿಸಬೇಕೆಂದು ಮಕ್ಕಳಲ್ಲಿ ನೈತಿಕ ಸ್ಥೈರ್ಯ ತುಂಬುವ ಕೆಲಸ ಮಾಡಿದ್ದೇವೆ



ಎಂದ ಅವರು ಬಿಡದಿ ಹೋಬಳಿಯಾದ್ಯಂತ ಎಲ್ಲಾ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಾಮಾಗ್ರಿಗಳನ್ನು ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಲಿಂಗಯ್ಯ ಮಾತನಾಡಿ, ಬಿಡದಿ ಹೋಬಳಿಯಲ್ಲಿ ಒಂದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಿದ್ದಾರೆ. ರಾಮನಗರ ತಾಲ್ಲೂಕಿನಲ್ಲಿ ಈ ಬಾರಿ ಉತ್ತಮ ಫಲಿತಾಂಶ ಬರುವ ವಿಶ್ವಾಸವಿದೆ. ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬಿ ಶುಭಾಶಯ ಕೋರುವ ನಿಟ್ಟಿನಲ್ಲಿ ಗಾಣಕಲ್ ನಟರಾಜ್‌ರವರು ಉಚಿತವಾಗಿ ಪರೀಕ್ಷಾ ಸಾಮಗ್ರಿಗಳನ್ನು ವಿತರಿಸಿದ್ದಾರೆ. ಅವರಿಗೆ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆಯ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಶ್ರೀಬಸವೇಶ್ವರಸ್ವಾಮಿ ಗ್ರಾಮಾಂತರ ಪ್ರೌಢಶಾಲೆಯ ಮುಖ್ಯಶಿಕ್ಷಕ ಗಿರೀಶ್, ಪ್ರಾಂಶುಪಾಲ ಜಾನ್ಸನ್, ಸಿಆರ್‌ಪಿ ಚಿಕ್ಕವೀರಯ್ಯ, ಮುಖಂಡ ನವೀನ್ ಸೇರಿದಂತೆ ಬೋಧಕ ವೃಂದ ಹಾಗೂ ಸಿಬ್ಬಂದಿ ಹಾಜರಿದ್ದರು.

# ಅಮಾನಿಕೆರೆಯಲ್ಲಿ ಇನ್ನು ಜಲಕ್ರೀಡೆಯ ಸಡಗರ

ತುಮಕೂರು

ಕಲ್ಪತರು ನಾಡಿನ ಕ್ರೀಡಾಸಕ್ತರ ದಶಕಗಳ ಕನಸು ನನಸಾಗಿದ್ದು, ನಗರದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅತ್ಯಾಧುನಿಕ ಶೂಟಿಂಗ್ ರೇಂಜ್, ಟೆನಿಸ್ ಹಾಗೂ ಬ್ಯಾಸ್ಕೆಟ್ ಬಾಲ್ ಅಂಕಣಗಳನ್ನು ಭಾನುವಾರ ಅದ್ಧೂರಿಯಾಗಿ ಲೋಕಾರ್ಪಣೆ ಮಾಡಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಡೆದ ಈ ಸಮಾರಂಭವನ್ನು ಜಿಲ್ಲಾ ಉಸ್ತುವಾರಿ ಹಾಗೂ ಗೃಹ ಸಚಿವ ಡಾ. ಜಿ. ಪರಮೇಶ್ವರ ಉದ್ಘಾಟಿಸಿದರು. ಇದೇ ವೇಳೆ ಅಮಾನಿಕೆರೆಯಲ್ಲಿ ಪ್ರವಾಸೋದ್ಯಮ ಹಾಗೂ ಕ್ರೀಡೆಗೆ ಉತ್ತೇಜನ ನೀಡುವ ಸಲುವಾಗಿ ನಿರ್ಮಿಸಲಾದ 'ಕಯಾಕಿಂಗ್ ಮತ್ತು ಕೆನೋಯಿಂಗ್' ಜಲಕ್ರೀಡಾ ಕೇಂದ್ರಕ್ಕೂ ಚಾಲನೆ ನೀಡಲಾಯಿತು.

ಕ್ರೀಡಾ ಹಬ್ ಆಗಲಿರುವ ತುಮಕೂರು: ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್, "ನಮ್ಮ ಜಿಲ್ಲೆಯ ಯುವ ಪ್ರತಿಭೆಗಳಿಗೆ ಜಾಗತಿಕ ಮಟ್ಟದ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಶೂಟಿಂಗ್ ರೇಂಜ್ ಮತ್ತು ಅಂಕಣಗಳನ್ನು ತಜ್ಞರ ಮಾರ್ಗದರ್ಶನದಲ್ಲಿ ಸಿದ್ಧಪಡಿಸಲಾಗಿದೆ. ತುಮಕೂರು ಶೀಘ್ರದಲ್ಲೇ ರಾಜ್ಯದ ಪ್ರಮುಖ ಕ್ರೀಡಾ ಹಬ್ ಆಗಿ



ಗುರುತಿಸಿಕೊಳ್ಳಲಿದೆ. ಈಗಾಗಲೇ ಒಂದು ಕ್ರೀಡಾ ಹಾಸ್ಟೆಲ್ ಇದ್ದು, ಮತ್ತೊಂದು ಹಾಸ್ಟೆಲ್ ಸ್ಥಾಪನೆಗೆ ಚಿಂತನೆ ನಡೆಸಲಾಗುತ್ತಿದೆ," ಎಂದರು.

ಬೇಸಿಗೆ ರಜೆಯನ್ನು ಮಕ್ಕಳು ವ್ಯರ್ಥ ಮಾಡದೆ ಈ ಕ್ರೀಡಾ ಸೌಲಭ್ಯಗಳನ್ನು ಬಳಸಿಕೊಳ್ಳಬೇಕು ಎಂದು ಅವರು ಪೋಷಕರಿಗೆ ಕಿವಿಮಾತು ಹೇಳಿದರು.

ಜನಸಂಪರ್ಕ ಸಭೆ ಹಾಗೂ ಪೌತಿ ಖಾತೆ ಆಂದೋಲನ: ಜಿಲ್ಲಾಡಳಿತದ ಕಾರ್ಯವೈಖರಿ ಕುರಿತು ಮಾಹಿತಿ ನೀಡಿದ ಡಿಸಿ, "ಜಿಲ್ಲಾದ್ಯಂತ ನಡೆಯುತ್ತಿರುವ ಜನಸಂಪರ್ಕ ಸಭೆಗಳಿಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಈ ವಾರವೊಂದರಲ್ಲೇ 10 ಸಾವಿರ ಪೌತಿ ಖಾತೆಗಳನ್ನು ಆನ್‌ಲೈನ್ ಮೂಲಕ ಮಾಡಿಕೊಡಲಾಗಿದೆ. ಮುಂದಿನ ದಿನಗಳಲ್ಲಿ ಇದನ್ನು 'ಆಧಾರ್ ಅದಾಲತ್' ಮಾದರಿಯಲ್ಲಿ ನಿರಂತರವಾಗಿ ನಡೆಸಲಾಗುವುದು," ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕ ಜಿ.ಬಿ. ಜ್ಯೋತಿಗಣೇಶ್, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್ ಮೌರ್ಯ, ಜಿ.ಪಂ ಸಿಇಓ ಬಿ.ವಿ. ಅಶ್ವಿಜ, ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್, ಪಾಲಿಕೆ ಆಯುಕ್ತೆ ಶೋಭ ಸಿ. ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಭಾರತ ಸಾರಥಿ
18/03/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮನೆಗೊಂದು ಗ್ರಂಥಾಲಯ: ಬಂಗಾರವಿದ್ದ ಮನೆಯಲ್ಲಿ ಪುಸ್ತಕದ ರಾಶಿಯೂ ಇರಲಿ!




ದೊಡ್ಡಬಳ್ಳಾಪುರ

"ಒಂದು ಮನೆಯಲ್ಲಿರುವ ಗ್ರಂಥಾಲಯವು ಕೇವಲ ಪುಸ್ತಕಗಳ ಸಂಗ್ರಹವಲ್ಲ, ಅದು ಜ್ಞಾನ ಮತ್ತು ಸಂಸ್ಕೃತಿಯನ್ನು ಬೆಳಗಿಸುವ ದೀಪವಾಗಿದೆ," ಎಂದು ನಿವೃತ್ತ ಶಿಕ್ಷಕ ಬಿ.ಎಲ್. ರಾಮಕೃಷ್ಣ ಅಭಿಪ್ರಾಯಪಟ್ಟರು.

ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿರುವ 'ಮನೆಗೊಂದು ಗ್ರಂಥಾಲಯ' ಜಾಗೃತಿ ಅಭಿಯಾನದ ಅಂಗವಾಗಿ, ನಗರದ ನಿವೃತ್ತ ಶಿಕ್ಷಕ ದಂಪತಿಗಳಾದ ವಿ. ವಿಮಲಮ್ಮ ಮತ್ತು ಬಿ.ಎಲ್. ರಾಮಕೃಷ್ಣ ಅವರ ಮನೆಯಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬದುಕಿಗೆ ದಾರಿದೀಪವಾಗುವ ಸಾಹಿತ್ಯ: ಕಾರ್ಯಕ್ರಮದಲ್ಲಿ ಮಾತನಾಡಿದ ವಿದ್ಯಾನಿಧಿ ಕಾಲೇಜಿನ ಉಪನ್ಯಾಸಕ ಗಿರೀಶ್, "ಕುವೆಂಪು, ಬೇಂದ್ರೆ, ಮಾಸ್ತಿ ಅವರಂತಹ ಮಹನೀಯರ ಕೃತಿಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ. ಈ ಅಮೂಲ್ಯ ಸಾಹಿತ್ಯವನ್ನು ಮನೆಮನೆಗೆ ತಲುಪಿಸುವ ಉದ್ದೇಶದಿಂದ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ಅವರು ರಾಜ್ಯದಲ್ಲೇ ಮೊದಲ ಬಾರಿಗೆ ಜಿಲ್ಲಾ ಮಟ್ಟದ ಸಮಿತಿಗಳನ್ನು ರಚಿಸಿ ಈ ಕ್ರಾಂತಿಕಾರಿ ಹೆಜ್ಜೆ ಇಟ್ಟಿದ್ದಾರೆ," ಎಂದು ಶ್ಲಾಘಿಸಿದರು.

ಮಕ್ಕಳಲ್ಲಿ ಬೆಳೆಯಲಿ ಓದುವ ಹವ್ಯಾಸ: ಪ್ರತಿ ಮನೆಯಲ್ಲೂ ಕನಿಷ್ಠ ಒಂದು ಸಣ್ಣ ಗ್ರಂಥಾಲಯ ಸ್ಥಾಪನೆಯಾಗಬೇಕು. ಶುಭ ಸಮಾರಂಭಗಳಲ್ಲಿ ಪುಸ್ತಕಗಳನ್ನು ಉಡುಗೊರೆಯಾಗಿ ನೀಡುವ ಸಂಪ್ರದಾಯ ಬೆಳೆಯಬೇಕು. ಆ ಮೂಲಕ ಮುಂದಿನ ಪೀಳಿಗೆಯಲ್ಲಿ ಸಾಹಿತ್ಯದ ಬಗ್ಗೆ ಆಸಕ್ತಿ ಮೂಡಿಸುವುದು ಇಂದಿನ ಅಗತ್ಯವಾಗಿದೆ ಎಂದು ಸಮಿತಿಯ ಸದಸ್ಯರು ಈ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆಯ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ವಿ.ಎಸ್. ರವಿಕುಮಾರ್, ಜಿಲ್ಲಾ ಸದಸ್ಯ ರಬ್ಬನಹಳ್ಳಿ ಕೆಂಪಣ್ಣ, ಪ್ರಮೀಳಾ ಮಹಾದೇವ್ ಮಾತನಾಡಿದರು. ಇದೇ ವೇಳೆ ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಶ್ರೀನಿವಾಸ್ ಕರಿಯಪ್ಪ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ನಗರಸಭೆ ಸದಸ್ಯ ಕಾಂತರಾಜ್, ಸಮಿತಿ ಸಂಚಾಲಕ ಗಂಗರಾಜ ಶಿರವಾರ, ಗೌಹರ್ ಜಾನ್, ಮುನಿರತ್ನ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಜಾನಪದ ಕಲೆ ಮನರಂಜನೆಯಲ್ಲ, ದೇಶದ ಸಂಸ್ಕೃತಿಯ ಪ್ರತಿಬಿಂಬ: ಕೆಹೆಚ್ಎಂ



ವಿಜಯಪುರ

"ಜಾನಪದ ಕಲೆ ಕೇವಲ ಮನರಂಜನೆಯಲ್ಲ, ಅದು ನಮ್ಮ ದೇಶದ ಸಂಸ್ಕೃತಿಯ ಪ್ರತಿಬಿಂಬ. ಗ್ರಾಮೀಣ ಕಲಾವಿದರಿಂದಾಗಿ ಇಂದು ಈ ಗಂಡುಕಲೆ ಜಾಗತಿಕ ಮಟ್ಟದಲ್ಲಿ ಬೆಳಗುತ್ತಿದೆ," ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ಸಮೃದ್ಧಿ ಸಮಾಜ ಸೇವಾ ಟ್ರಸ್ಟ್‌ನ 3ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ವೆಂಕಟಗಿರಿಕೋಟೆಯ ಮಂಜುನಾಥ ಪ್ರೌಢಶಾಲಾ ಆವರಣದಲ್ಲಿ ಆಯೋಜಿಸಿದ್ದ 'ಸಮೃದ್ಧಿ ಜಾನಪದ ಕಲಾ ಉತ್ಸವ-2026' ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಪಾನ್ ವರೆಗೆ ಹಬ್ಬಿದೆ ನಮ್ಮ ತಮಟೆ ಸದ್ದು!

"ಶಿಡ್ಲಘಟ್ಟದ ಪಿಂಡಿಪಾಪನಹಳ್ಳಿ ಮುನಿವೆಂಕಟಪ್ಪ ಅವರು ತಮಟೆ ವಾದನದ ಮೂಲಕ ಜಪಾನ್ ದೇಶದಲ್ಲೂ ಭಾರತದ ಕೀರ್ತಿ ಪತಾಕೆ ಹಾರಿಸಿದ್ದಾರೆ. ಅಂತಹ ಮಹಾನ್ ಕಲಾವಿದರನ್ನು ಸೃಷ್ಟಿಸಲು ಇಂತಹ ಜಾನಪದ ಉತ್ಸವಗಳು ಸೂಕ್ತ ವೇದಿಕೆಯಾಗಲಿವೆ. ಯುವಪೀಳಿಗೆ ಈ ಕಲೆಯನ್ನು ಮೈಗೂಡಿಸಿಕೊಳ್ಳುತ್ತಿರುವುದು ಆಶಾದಾಯಕ ಬೆಳವಣಿಗೆ," ಎಂದು ಸಚಿವರು ಶ್ಲಾಘಿಸಿದರು.

ಜಿದ್ದಾಜಿದ್ದಿನ ಸ್ಪರ್ಧೆ – ಬುಳ್ಳಹಳ್ಳಿ ತಂಡಕ್ಕೆ ಅಗ್ರಸ್ಥಾನ:

ಉತ್ಸವದ ಪ್ರಮುಖ ಆಕರ್ಷಣೆಯಾಗಿದ್ದ ತಮಟೆ ವಾದನ ಸ್ಪರ್ಧೆಯಲ್ಲಿ ತಂಡಗಳ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿತ್ತು.

ಪ್ರಥಮ ಬಹುಮಾನ: ಬುಳ್ಳಹಳ್ಳಿಯ ತಮಟೆ ವಾದನ ತಂಡ (44,444 ರೂ. ನಗದು ಹಾಗೂ ಟ್ರೋಫಿ).

ದ್ವಿತೀಯ ಬಹುಮಾನ: ಬೈಚಾಪುರ ತಂಡ (22,222 ರೂ. ನಗದು ಹಾಗೂ ಟ್ರೋಫಿ).

ತೃತೀಯ ಬಹುಮಾನ: ಬೂದಿಗೆರೆ ತಂಡ (11,111 ರೂ. ನಗದು).

ಮನಸೆಳೆದ ಕಲಾ ಪ್ರದರ್ಶನಗಳು: ಅಂತಾರಾಷ್ಟ್ರೀಯ ಖ್ಯಾತಿಯ ಜಂಬೆಬಾಲು ತಂಡದ ಜಂಬೆ ವಾದನ ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿತು. ಜಾನಪದ ಗಾಯನ, ಸುಗಮ ಸಂಗೀತ, ಡೊಳ್ಳುಕುಣಿತ, ಮಹಿಳಾ ವೀರಗಾಸೆ, ಕೀಲು ಕುದುರೆ, ನಗಾರಿ ಮತ್ತು ಗಾರುಡಿ ಬೊಂಬೆ ಪ್ರದರ್ಶನಗಳು ಹಬ್ಬದ ಕಳೆಯನ್ನು ಹೆಚ್ಚಿಸಿದವು. ಮಂಜುನಾಥ ಶಾಲೆಯ ವಿದ್ಯಾರ್ಥಿಗಳು ಪ್ರದರ್ಶಿಸಿದ ಕರಗ ನೃತ್ಯ ಎಲ್ಲರ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಮಾಜಿ ಕೇಂದ್ರ ಸಚಿವ ಎ. ನಾರಾಯಣಸ್ವಾಮಿ, ಸಮೃದ್ಧಿ ಟ್ರಸ್ಟ್ ಅಧ್ಯಕ್ಷ ಕದಿರಪ್ಪ, ಬಮೂಲ್ ನಿರ್ದೇಶಕ ಎಸ್.ಪಿ. ಮುನಿರಾಜು, ಮಾಜಿ ಶಾಸಕ ಎಸ್.ಎಂ. ಮುನಿಯಪ್ಪ ಸೇರಿದಂತೆ ಹತ್ತಾರು ಗಣ್ಯರು ಹಾಗೂ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮಾವಿಗೆ ಅಗತ್ಯ ನಿರ್ವಹಣೆ ಕ್ರಮವಹಿಸಲು ಸಲಹೆ

ಕೋಲಾರ

ಜಿಲ್ಲೆಯಲ್ಲಿನ ಮಾವು ಬೆಳೆಯ ಸ್ಥಿತಿಗತಿಗಳು, 2026ನೇ ಮಾರ್ಚ್ ತಿಂಗಳು ಬೇಸಿಗೆಯ ಪ್ರಾರಂಭದಲಿನ ಸುಡು ಬಿಸಿಲು, ಒಣ ಸನ್ನಿವೇಶ ಹಾಗೂ ಹವಾಮಾನ ವ್ಯಾಪರಿತ್ಯದ ಪರಿಣಾಮವಾಗಿ ಮಾವು ಅನೇಕ ವಿಷಮಪರಿಸ್ಥಿತಿಯನ್ನು ಎದುರಿಸುತ್ತಿದೆ.

ಮಾರ್ಚ್ ಮೊದಲನೆವಾರ ಮುಗಿದು ಎರಡನೇ ವಾರಕ್ಕೆ ಕಾಲಿಟ್ಟಾಗಲು ಅನೇಕ ಮಾವಿನ ಗಿಡಗಳು 2 ಅಥವಾ 3 ಹಂತದ ಹೂ ಬಿಡುವಿಕೆಯನ್ನು ತಪ್ಪಿಸುತ್ತವೆ. ವಾತಾವರಣದಲ್ಲಿ ಉಷ್ಣಾಂಶ ಏರಿದಂತೆಲ್ಲ ಹಾಗೂ ಒಣ ಸನ್ನಿವೇಶ ಸೃಷ್ಟಿಯಾದಂತೆಲ್ಲ. ಈಗಿರುವ ಹೂತೆನೆಗಳಲ್ಲಿ ಅಪಾರ ಸಂಖ್ಯೆಯ ಥ್ರಿಪ್ಸ್ ಹುಳುಗಳು ಹಾಗೂ ಜಿಗಿ ಹುಳುಗಳು ಹಾನಿಯನ್ನುಂಟು ಮಾಡುತ್ತಿರುವುದು ಈ ವ್ಯಾಪಕವಾಗಿ ಕಂಡುಬಂದಿದೆ. ಅಲ್ಲಲ್ಲಿ ಬಂದಿರುವ ಚಿಗುರೆಲೆಗಳೂ ಸಹ ಈ ಎರಡು ಕೀಟಗಳ ಸಂತತಿ ಹೆಚ್ಚಿಸಲು ಸಹಯಕಾರಿಯಾಗಿದೆ, ಏಕೆಂದರೆ ಚಿಗುರೆಲೆ ಹಾಗೂ ಹೂಗಳು ದೀಪ್ ಹಾಗೂ ಜಿಗಿಹುಳುಗಳಿಗೆ ಆಹಾರವಾಗಿರುತ್ತದೆ.

ಈ 2 ಹುಳುಗಳ ಹಾವಳಿಯಿಂದ ಹಾಗೂ ವಾತಾವರಣದಲ್ಲಿ ಹೆಚ್ಚಿದ ಉಷ್ಣತೆ ಹಾಗೂ ಒಣ ಸನ್ನಿವೇಶಗಳಿಂದ ಕಚ್ಚಿದ ಚಿಕ್ಕ ಕಾಯಿ-ಹುಳುಗಳು ಹೆಚ್ಚಿನ ಪ್ರಮಾಣದಲ್ಲಿ ಉದುರುತ್ತದೆ. ಎಲ್ಲಾ ತಳಿಗಳ ಮಾವಿನಲಿ. ಈ ಸಮಸ್ಯೆ ಕಂಡುಬಂದಿದೆ ಹಾಗೂ ಬಾದಾಮಿ ತಳಿಯಲ್ಲಿ ಹೆಚ್ಚಿನ ಹಾನಿ ಉಂಟಾಗಿರುವುದು ಸಾರ್ವತ್ರಿಕವಾಗಿದೆ.

ಈ ಪ್ರಸ್ತುತ ಸನ್ನಿವೇಶಗಳನ್ನು ಎದುರಿಸಲು ಮಾವು ಬೆಳೆಗಾರರು ಕೈಗೊಳ್ಳಬೇಕಾದ ಈ ಸಮಸ್ಯೆಗಳ ಬೆನ್ನೆಲೆಯಲ್ಲಿ ಇನ್ನು ಹೆಚ್ಚಿನ ಹಾನಿ ನಮ್ಮ ಸಂಭವಿಸುವುದನ್ನು ತಡೆಗಟ್ಟಲು ಮಾವು ಬೆಳೆಗಾರರು ಈ ಕೆಳಗೆ ಕಾಣಿಸಿದ ನಿರ್ವಹಣಾ ಕ್ರಮಗಳನ್ನು ಆದ್ಯತೆ ಮೇರೆಗೆ ಕೈಗೊಳ್ಳಬಹುದಾಗಿದೆ.

ಮಣ್ಣಿಲಿ ಹಾಗು ವಾತಾವರಣದಲ್ಲಿ ತೇವಾಂಶ ತುಂಬಾ ಕಡಿಮೆ ಇರುವ ಕಾರಣ ಕಟ್ಟಿದ ಹರಳುಗಳ ಹಾಗೂ ಚಿಕ್ಕ ಕಾಯಿಗಳು ಉದುರುವುದನ್ನು ಕಡಿಮೆ ಮಾಡಲು ರಕ್ಷಣಾತ್ಮಕ ನೀರುಣಿಸುವಿಕೆಯನ್ನು ಮಾಡವುದು. ಕಾಯಿಗಳು ಚಿಕ್ಕವಾಗಿರುವ ಹಂತದಲ್ಲಿ, ಪಾನೋಫಿಕ್ಸ್ ರಸಾಯನವನ್ನು 0.5 ಟಟ/ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ಕಟ್ಟಿದ ಕಾಯಿಗಳಿಗೆ ಸಿಂಪಡಿಸುವುದು ಉದರವಿಕೆಯನ್ನು ಸಾಕಷ್ಟು ತಡೆಗಟ್ಟಲು ಸಾಧ್ಯ.

ಸಂಭವನೀಯ ಬೆಂಕಿ ಅನಾಹುತಗಳನ್ನು ತಪ್ಪಿಸಲು ತೋಟದ ಬದುಗಳಲಿ, ಬೇಲಿಗುಂಟೆ ಒಣಗಿದ ಎಲೆ/ಕಸ/ಕಡ್ಡಿಗಳನ್ನು ತೆಗೆದು ತೋಟಗಳನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕೆಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾಪದ ಫಲ ಅನುಭವಿಸಲೇಬೇಕು:
# ಅಭಿಮನ್ಯು ಪಿ. ಮಣಿ



ಬೂದಿಕೋಟೆ

"ಮಾಡಿದ ಪಾಪ-ಪುಣ್ಯಗಳನ್ನು ಅನುಭವಿಸಲೇಬೇಕು. ಪ್ರಾಮಾಣಿಕ ಅಧಿಕಾರಿ ಡಿ.ಕೆ. ರವಿ ಅವರ ಸಾವಿಗೆ ಕಾರಣರಾದ ಉದ್ಯಮಿಯ ಗತಿ ಏನಾಗಿದೆ ಎಂಬುದು ಇಡೀ ರಾಜ್ಯಕ್ಕೆ ತಿಳಿದಿದೆ," ಎಂದು ಸುಹೇಲ್ ದೇವ್ ಭಾರತೀಯ ಸಮಾಜ ಪಕ್ಷದ ರಾಜ್ಯಾಧ್ಯಕ್ಷ ಅಭಿಮನ್ಯು ಪಿ. ಮಣಿ ಗುಡುಗಿದ್ದಾರೆ.

ಪಟ್ಟಣದ ಹೊರವಲಯದ ಗಂಗಮ್ಮನ ಪಾಳ್ಯದ ತೋಟದ ಮನೆಯಲ್ಲಿ ನಡೆದ ಕೋಲಾರದ ಮಾಜಿ ಜಿಲ್ಲಾಧಿಕಾರಿ ಡಿ.ಕೆ. ರವಿ ಅವರ 11ನೇ ವರ್ಷದ ಪುಣ್ಯತಿಥಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾನ್ಫಿಡೆಂಟ್ ಗ್ರೂಪ್‌ನ ಉದ್ಯಮಿ ಸಿ.ಜೆ. ರಾಯ್ ಅವರ ಹೆಸರನ್ನು ನೇರವಾಗಿ ಹೇಳದಿದ್ದರೂ, ಅವರ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದ ಮಣಿ, ರವಿ ಅವರ ಸಾವು ಸಹಜವಾದುದಲ್ಲ ಎಂದು ಪುನರುಚ್ಚರಿಸಿದರು.

"ಸರಿಯಾಗಿ ನಡೆಯದ ಮರಣೋತ್ತರ ಪರೀಕ್ಷೆ": "2008ರ ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿ ಕೋಲಾರಕ್ಕೆ ಬಂದ ಡಿ.ಕೆ. ರವಿ, ಜಿಲ್ಲೆಯ ಅಕ್ರಮಗಳ ವಿರುದ್ಧ ಸಿಂಹಸ್ವಪ್ನವಾಗಿದ್ದರು. ರಾಜಕಾರಣಿಗಳ ಭ್ರಷ್ಟಾಚಾರವನ್ನು ಬಯಲಿಗೆಳೆದಿದ್ದಕ್ಕೆ ಅವರನ್ನು ವರ್ಗಾವಣೆ ಮಾಡಲಾಯಿತು. ಅಂದಿನ ಕಾಂಗ್ರೆಸ್ ಸರ್ಕಾರ ಇದೊಂದು ಆತ್ಮಹತ್ಯೆ ಎಂದು ಬಿಂಬಿಸಲು ಯತ್ನಿಸಿತು. ಮರಣೋತ್ತರ ವರದಿಯನ್ನು ಸಹ ಸರಿಯಾಗಿ ಮಾಡಲಿಲ್ಲ, ಆ ಅಸಲಿ ವರದಿ ಇಂದಿಗೂ ನನ್ನ ಬಳಿ ಇದೆ," ಎಂದು ಅವರು ಗಂಭೀರವಾಗಿ ಆರೋಪಿಸಿದರು.

ಅಧಿಕಾರಿಗಳಿಗೆ ಧೈರ್ಯ ತುಂಬಿದ ಮಣಿ: ರಾಜಕಾರಣಿಗಳ ಒತ್ತಡಕ್ಕೆ ಮಣಿಯದಂತೆ ಅಧಿಕಾರಿಗಳಿಗೆ ಕರೆ ನೀಡಿದ ಅವರು, "ಭ್ರಷ್ಟಾಚಾರಕ್ಕೆ ಬಲಿಯಾಗಬೇಡಿ, ಪಾರದರ್ಶಕವಾಗಿ ಕೆಲಸ ಮಾಡಿ. ಪ್ರಾಮಾಣಿಕ ಅಧಿಕಾರಿಗಳ ಪರವಾಗಿ ನಮ್ಮ ಪಕ್ಷ ಮತ್ತು ಜನತೆ ಸದಾ ಇರುತ್ತಾರೆ," ಎಂದರು.

ದಲಿತ ಮುಖಂಡರ ಶ್ರದ್ಧಾಂಜಲಿ: ಕಾರ್ಯಕ್ರಮದಲ್ಲಿ ಮಾತನಾಡಿದ ದಲಿತ ಮುಖಂಡ ಪಿವಿಸಿ, "ರೈತರು, ಬಡವರು ಮತ್ತು ಶೋಷಿತರ ಪರವಾಗಿ ಕೆಲಸ ಮಾಡಿದ ಮಹಾನ್ ವ್ಯಕ್ತಿ ಡಿ.ಕೆ. ರವಿ. ಅವರ ಸಾವಿನ ಸುತ್ತಲಿನ ನಿಗೂಢತೆ ಇಂದಿಗೂ ಮಾಸಿಲ್ಲ. ದಲಿತ ಸಮುದಾಯ ಮತ್ತು ಎಸ್‌ಬಿಎಸ್‌ಪಿ ಪಕ್ಷ ಅವರ ತತ್ವಗಳನ್ನು ಸದಾ ಸ್ಮರಿಸುತ್ತದೆ," ಎಂದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಮಗೊಂದಿ ನಾರಾಯಣಸ್ವಾಮಿ, ಕೋಲಾರಪ್ಪ, ಮೂರ್ತಿ, ವಿಜ್ಞೇಶ್, ಕೃಷ್ಣ, ಉದಯ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಾಣಿಜ್ಯ ಸಿಲಿಂಡರ್ ಕೊರತೆ; ಹೋಟೆಲ್‌ಗಳಿಗೆ ಬಿತ್ತು ಬೀಗ!

ವಿ.ಶಿವಾರೆಡ್ಡಿ
ಬಂಗಾರಪೇಟೆ




ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಉಲ್ಬಣಿಸಿರುವ ಯುದ್ಧದ ಭೀತಿಯು ಇದೀಗ ಸ್ಥಳೀಯ ಹೋಟೆಲ್ ಉದ್ಯಮದ ಮೇಲೆ ನೇರ ಪರಿಣಾಮ ಬೀರಿದೆ. ಇಂಧನ ಸರಬರಾಜಿನಲ್ಲಿ ಉಂಟಾಗಿರುವ ವ್ಯತ್ಯಯದಿಂದಾಗಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ತೀವ್ರ ಕೊರತೆ ಎದುರಾಗಿದ್ದು, ಬಂಗಾರಪೇಟೆ ನಗರದ ಹೋಟೆಲ್ ಮಾಲೀಕರು ಅನಿವಾರ್ಯವಾಗಿ ವ್ಯವಹಾರ ಸ್ಥಗಿತಗೊಳಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಬಡವರ ಹೊಟ್ಟೆ ತಣಿಸುತ್ತಿದ್ದ 'ದೋಸೆ ಹೋಟೆಲ್' ಕ್ಲೋಸ್!

ನಗರದ ಡೇವಿಡ್ ರಸ್ತೆಯಲ್ಲಿರುವ ಶ್ರೀ ಸಾಯಿಬಾಬಾ ದೇವಸ್ಥಾನದ ಮುಂಭಾಗದ ಅನ್ನಪೂರ್ಣೇಶ್ವರಿ ಹೋಟೆಲ್ ಮತ್ತು ಬಡವರ ಪಾಲಿಗೆ ವರದಾನವಾಗಿದ್ದ ಪ್ರಸಿದ್ಧ '10 ರೂ. ದೋಸೆ' ಶಿವಣ್ಣ ಹೋಟೆಲ್ ಸೋಮವಾರದಿಂದ ತಾತ್ಕಾಲಿಕವಾಗಿ ಮುಚ್ಚಲ್ಪಟ್ಟಿವೆ. ಕಳೆದ ಹಲವು ವರ್ಷಗಳಿಂದ ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳು ಮತ್ತು ಬಡವರಿಗೆ ಕೇವಲ 10 ರೂಪಾಯಿಗೆ ಚಟ್ನಿ, ಸಾಂಬಾರ್ ಹಾಗೂ ಆಲೂಗಡ್ಡೆ ಪಲ್ಯದೊಂದಿಗೆ ದೋಸೆ ನೀಡಿ ಹೊಟ್ಟೆ ತುಂಬಿಸುತ್ತಿದ್ದ ಶಿವಣ್ಣ ಅವರ ಹೋಟೆಲ್ ಬಂದ್ ಆಗಿರುವುದು ಸ್ಥಳೀಯರಲ್ಲಿ ತೀವ್ರ ಬೇಸರ ಮೂಡಿಸಿದೆ.

> "ಗ್ಯಾಸ್ ಸರಬರಾಜು ಸರಿಯಾಗಿ ಆಗದಿದ್ದರೆ ಮುಂದಿನ ದಿನಗಳಲ್ಲಿ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಬಹುದು. ಅನಿವಾರ್ಯವಾಗಿ ನಾವು ಹೋಟೆಲ್ ಮುಚ್ಚಬೇಕಾಗಿದೆ."
> - ಸ್ಥಳೀಯ ಹೋಟೆಲ್ ಮಾಲೀಕರು

ಸರಬರಾಜು ಕುಸಿತ – ಹೋಟೆಲ್ ಮಾಲೀಕರ ಆತಂಕ:

ವಾಣಿಜ್ಯ ಬಳಕೆಯ 19 ಕೆಜಿ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆ ಕಳೆದ ಕೆಲವು ದಿನಗಳಿಂದ ಗಣನೀಯವಾಗಿ ಇಳಿಕೆಯಾಗಿದೆ. "ಗ್ಯಾಸ್ ಸಿಲಿಂಡರ್ ಸಿಗುತ್ತಿಲ್ಲ, ಒಂದೊಮ್ಮೆ ಸಿಕ್ಕರೂ ಬೆಲೆ ಗಗನಕ್ಕೇರಿದೆ. ಇಂತಹ ಪರಿಸ್ಥಿತಿಯಲ್ಲಿ ಕಡಿಮೆ ದರಕ್ಕೆ ತಿಂಡಿ ನೀಡುವುದು ಅಸಾಧ್ಯವಾಗಿದೆ," ಎಂದು ಹೋಟೆಲ್ ಮಾಲೀಕರು ಅಳಲು ತೋಡಿಕೊಂಡಿದ್ದಾರೆ. ನಗರದ ಇತರ ಹೋಟೆಲ್‌ಗಳು ಸಹ ತಮ್ಮ ಮೆನುವನ್ನು ಕಡಿತಗೊಳಿಸಿದ್ದು, ಪರಿಸ್ಥಿತಿ ಹೀಗೆಯೇ ಮುಂದುವರಿದರೆ ಇನ್ನಷ್ಟು ಹೋಟೆಲ್‌ಗಳು ಬಾಗಿಲು ಹಾಕುವ ಭೀತಿ ಎದುರಾಗಿದೆ.

ಅತಂತ್ರರಾದ ಕಾರ್ಮಿಕರು – ಸರ್ಕಾರದ ಹಸ್ತಕ್ಷೇಪಕ್ಕೆ ಆಗ್ರಹ: ಹೋಟೆಲ್‌ಗಳ ಮುಚ್ಚುವಿಕೆಯಿಂದಾಗಿ ಅಲ್ಲಿ ಕೆಲಸ ಮಾಡುತ್ತಿದ್ದ ನೂರಾರು ಕಾರ್ಮಿಕರ ಬದುಕು ಅತಂತ್ರಗೊಂಡಿದೆ. ಅತ್ತ ಅಗ್ಗದ ದರದ ಊಟವಿಲ್ಲದೆ ಬಡವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ತಕ್ಷಣವೇ ಸರ್ಕಾರ ಮತ್ತು ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಈ ಬಗ್ಗೆ ಗಮನಹರಿಸಿ, ವಾಣಿಜ್ಯ ಸಿಲಿಂಡರ್ ಪೂರೈಕೆಯನ್ನು ಸರಿಪಡಿಸಬೇಕು ಮತ್ತು ಬಡವರ ಹಸಿವು ನೀಗಿಸುವ ಹೋಟೆಲ್‌ಗಳು ಮತ್ತೆ ತೆರೆಯಲು ಸಹಕರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# 'ವಿದ್ಯಾರ್ಥಿಗಳ ಸಂಕಷ್ಟಕ್ಕೆ ಸಿಕ್ಕಿತು ಮುಕ್ತಿ'



ಶ್ರೀನಿವಾಸಪುರ

ಗ್ರಾಮೀಣ ಭಾಗದ ಸರ್ಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗೆ ವೇಗ ನೀಡಲು ಮತ್ತು ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಚಂಜಿಮಲೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ 'ಸೈಕಲ್ ಬ್ಯಾಂಕ್' ಎಂಬ ವಿನೂತನ ಯೋಜನೆಗೆ ಚಾಲನೆ ನೀಡಲಾಯಿತು. ಕೋಲಾರ ರೋಟರಿ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಈ ಸಮಾರಂಭವು ಜಿಲ್ಲೆಯಲ್ಲೇ ಮೊದಲ ಪ್ರಯತ್ನ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನಿವೃತ್ತ ಶಿಕ್ಷಣಾಧಿಕಾರಿ ಹಾಗೂ ರೋಟರಿ ಕ್ಲಬ್ ನಿಕಟಪೂರ್ವ ಅಧ್ಯಕ್ಷ ಸಿ.ಆರ್. ಅಶೋಕ್, "ಗ್ರಾಮೀಣ ಮಕ್ಕಳು ದೂರದ ಊರುಗಳಿಂದ ಶಾಲೆಗೆ ಬರಲು ಪಡುತ್ತಿರುವ ಕಷ್ಟ ತಪ್ಪಿಸಲು ಈ ಯೋಜನೆ ರೂಪಿಸಲಾಗಿದೆ. 7ನೇ ತರಗತಿ ಪಾಸಾಗಿ 8ನೇ ತರಗತಿಗೆ ಸರ್ಕಾರಿ ಶಾಲೆಗೆ ಸೇರುವ ವಿದ್ಯಾರ್ಥಿಗಳಿಗೆ ಈ ಸೈಕಲ್ ನೀಡಲಾಗುವುದು. ಅವರು 10ನೇ ತರಗತಿ ಮುಗಿಯುವವರೆಗೆ ಇದನ್ನು ಬಳಸಿ ನಂತರ ಮತ್ತೆ ಬ್ಯಾಂಕ್‌ಗೆ ಹಿಂದಿರುಗಿಸಬಹುದು," ಎಂದು ವಿವರಿಸಿದರು.

ಈ ವಿಶೇಷ ಯೋಜನೆಗೆ ನಿವೃತ್ತ ಶಿಕ್ಷಣಾಧಿಕಾರಿ ಸಿ.ಆರ್. ಅಶೋಕ್ ಒಂದು ಸೈಕಲ್ ನೀಡಿದರೆ, ಸೀಗೆಹಳ್ಳಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಎಸ್.ಆರ್. ಧರ್ಮೇಶ್ ಅವರು ಸ್ವತಃ 4 ಸೈಕಲ್‌ಗಳನ್ನು ದಾನವಾಗಿ ನೀಡುವ ಮೂಲಕ ಮಾನವೀಯತೆ ಮೆರೆದರು. ನಿವೃತ್ತಿಯ ನಂತರವೂ ಸಮಾಜ ಸೇವೆ ಮುಂದುವರಿಸುವ ಸಂಕಲ್ಪ ಮಾಡಿದ್ದೇನೆ ಎಂದು ಧರ್ಮೇಶ್ ಹೇಳಿದರು. ಈ ವಿಶೇಷ ಯೋಜನೆಗೆ ನಿವೃತ್ತ ಶಿಕ್ಷಣಾಧಿಕಾರಿ ಸಿ.ಆರ್. ಅಶೋಕ್ ಒಂದು ಸೈಕಲ್ ನೀಡಿದರೆ, ಸೀಗೆಹಳ್ಳಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಎಸ್.ಆರ್. ಧರ್ಮೇಶ್ ಅವರು ಸ್ವತಃ 4 ಸೈಕಲ್‌ಗಳನ್ನು ದಾನವಾಗಿ ನೀಡುವ ಮೂಲಕ ಮಾನವೀಯತೆ ಮೆರೆದರು. ನಿವೃತ್ತಿಯ ನಂತರವೂ ಸಮಾಜ ಸೇವೆ ಮುಂದುವರಿಸುವ ಸಂಕಲ್ಪ ಮಾಡಿದ್ದೇನೆ ಎಂದು ಧರ್ಮೇಶ್ ಹೇಳಿದರು. ಕೋಮುಲ್ ನಿರ್ದೇಶಕ ಬಿ. ರಮೇಶ್ ಮಾತನಾಡಿ, ಮುಂದಿನ ವರ್ಷ ಈ ಶಾಲೆಗೆ ಸೇರುವ ಎಲ್ಲಾ ವಿದ್ಯಾರ್ಥಿಗಳಿಗೂ ಸೈಕಲ್ ಕೊಡಿಸುವ ಭರವಸೆ ನೀಡಿದರು. ನಿವೃತ್ತಿಯ ನಂತರವೂ ಸಮಾಜ ಸೇವೆ ಮುಂದುವರಿಸುವ ಸಂಕಲ್ಪ ಮಾಡಿದ್ದೇನೆ ಎಂದು ಧರ್ಮೇಶ್ ಹೇಳಿದರು. ಕೋಮುಲ್ ನಿರ್ದೇಶಕ ಬಿ. ರಮೇಶ್ ಮಾತನಾಡಿ, ಮುಂದಿನ ವರ್ಷ ಈ ಶಾಲೆಗೆ ಸೇರುವ ಎಲ್ಲಾ ವಿದ್ಯಾರ್ಥಿಗಳಿಗೂ ಸೈಕಲ್ ಕೊಡಿಸುವ ಭರವಸೆ ನೀಡಿದರು. ಇಸಿಒ ನಂಜುಂಡಗೌಡ ಮಾತನಾಡಿ, ಮುಂದಿನ ವರ್ಷದಿಂದ 30 ಮಕ್ಕಳಿರುವ ಎಲ್ಲಾ ಪ್ರಾಥಮಿಕ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ಆರಂಭಿಸುವ ಸರ್ಕಾರದ ನಿರ್ಧಾರದ ಬಗ್ಗೆ ತಿಳಿಸಿ, ಪೋಷಕರು ಇದರ ಸದುಪಯೋಗ ಪಡೆಯಬೇಕೆಂದು ಕೋರಿದರು.

ಸಮಾರಂಭದಲ್ಲಿ ಸೈಕಲ್ ದಾನಿಗಳನ್ನು ಸನ್ಮಾನಿಸಲಾಯಿತು ಹಾಗೂ ಮಕ್ಕಳಿಗೆ ಸಿಹಿ ಹಂಚಿ ಸಂಭ್ರಮಿಸಲಾಯಿತು. ವೇಮಗಲ್ ಪಟ್ಟಣ ಪಂಚಾಯಿತಿ ಸದಸ್ಯ ಮುನಿರಾಜು, ಎಸ್‌ಡಿಎಂಸಿ ಅಧ್ಯಕ್ಷ ನರಸಿಂಹಮೂರ್ತಿ, ಮುಖ್ಯ ಶಿಕ್ಷಕಿ ಮಂಜುಳಾ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# 18ರಂದು 'ನಶಾ ಮುಕ್ತ ಭಾರತ' ಯುವ ಶುದ್ಧ ಅಭಿಯಾನ ವಾಕ್ ಥಾನ್

ಬಳ್ಳಾರಿ

ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಯುವ ಶುದ್ಧ ಅಭಿಯಾನ ವಾಕಥಾನ್ ಕಾರ್ಯಕ್ರಮವನ್ನು ಇದೇ 18ರಂದು ಬಳ್ಳಾರಿಯಲ್ಲಿ ಆಯೋಜಿಸಲಾಗುತ್ತಿದೆ ಎಂದು ತಾರಾನಾಥ್ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಡಾ.ರಾಜಶೇಖರ್ ಗಾಣಿಗೇರ ತಿಳಿಸಿದ್ದಾರೆ.

ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದು, ಯುವಜನರಲ್ಲಿ ಮಾದಕ ದ್ರವ್ಯ ವಿರೋಧಿ ಜಾಗೃತಿ ಮೂಡಿಸುವ ಉದ್ದೇಶದಿಂದ ವಿದ್ಯಾರ್ಥಿಗಳ ಮಹಾ ವಾಕಥಾನ್ ಉದ್ದೇಶಿಸಿ ಮಾತನಾಡಲಿದ್ದಾರೆ ಎಂದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಂಯೋಜಿತ ಕಾಲೇಜುಗಳು, ದಿಶಾಬೋಧ ಸುಸ್ಥಿರ ಸಮುದಾಯ ಅಭಿವೃದ್ಧಿ ಪ್ರತಿಷ್ಠಾನ ಹಾಗೂ ಭಾರತ ಸರ್ಕಾರದ ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ ಸಹಯೋಗದಲ್ಲಿ ಕಾರ್ಯಕ್ರಮ ನಡೆಯಲಿದೆ. ಉಪಕುಲಪತಿ ಡಾ. ಭಗವಾನ್ ಬಿ.ಸಿ ಅವರ ಮಾರ್ಗದರ್ಶನ ಹಾಗೂ ಎನ್‌ಸಿಬಿ ವಲಯ ನಿರ್ದೇಶಕ ಸಚಿನ್ ಘೋರ್ಪಡೆ, ಐಪಿಎಸ್ ಅವರ ಬೆಂಬಲದಲ್ಲಿ ಅಭಿಯಾನ ಜಾರಿಯಲ್ಲಿದೆ ಎಂದು ತಿಳಿಸಿದರು.


ರಾಜ್ಯಾದ್ಯಂತ ಈಗಾಗಲೇ 13 ಜಿಲ್ಲೆಗಳಲ್ಲಿ 15 ಕಾರ್ಯಕ್ರಮಗಳನ್ನು ನಡೆಸಲಾಗಿದ್ದು, ಸುಮಾರು 77 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದಾರೆ. ಅಂಗಾಂಗ ದಾನ ಜಾಗೃತಿ ಅಭಿಯಾನವೂ ಇದರ ಭಾಗವಾಗಿದ್ದು, 10 ಸಾವಿರಕ್ಕೂ ಹೆಚ್ಚು ಮಂದಿ ಅಂಗದಾನಕ್ಕೆ ಪ್ರತಿಜ್ಞೆ ಮಾಡಿದ್ದಾರೆ.

ಮಾದಕ ದ್ರವ್ಯ ರಹಿತ, ಒತ್ತಡರಹಿತ ಹಾಗೂ ಆತ್ಮಹತ್ಯೆ ರಹಿತ ಕ್ಯಾಂಪಸ್ ನಿರ್ಮಾಣ, ವಿದ್ಯಾರ್ಥಿನಿಯರ ಸುರಕ್ಷತೆ ಮತ್ತು ಯುವಜನರಲ್ಲಿ ಸಾಮಾಜಿಕ ಜವಾಬ್ದಾರಿ ಬೆಳೆಸುವುದು ಅಭಿಯಾನದ ಪ್ರಮುಖ ಉದ್ದೇಶಗಳಾಗಿವೆ.

ಇದೇ 18ರಂದು ಬೆಳಿಗ್ಗೆ 7.30ಕ್ಕೆ ವಿಜಯನಗರ ಮೆಡಿಕಲ್ ಕಾಲೇಜು (ವಿಮ್ಸ್) ಕ್ರೀಡಾಂಗಣದಲ್ಲಿ ವಾಕಥಾನ್ ಆರಂಭವಾಗಲಿದೆ.

ಈ ಜಾಗೃತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು, ಯುವ ಸಂಘಟನೆಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಡಾ.ಯೋಗಾನಂದ ರೆಡ್ಡಿ, ಡಾ. ಮಂಜುನಾಥ್, ಭಾರತೀ, ಅನ್ನಪೂರ್ಣ ಹಾಗೂ ಸೋಮಶೇಖರ್ ಇನ್ನಿತರರು ಇದ್ದರು.




# ಆರೋಗ್ಯದಲ್ಲಿ ಉದಾಸೀನ ಬೇಡ




ತುರುವೇಕೆರೆ

ತಮ್ಮ ಆರೋಗ್ಯದ ವಿಷಯದಲ್ಲಿ ಯಾರೂ ಉದಾಸೀನ ತೋರಬಾರದು ಎಂದು ದಂಡಿನಶಿವರ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಸಂದೇಶ್ ಕಿವಿಮಾತು ಹೇಳಿದರು.

ದಂಡಿನಶಿವರದ ಬಯಲು ರಂಗಮಂದಿರದಲ್ಲಿ ಸುನಿಲ್ ಚಿಮ್ಮನಹಳ್ಳಿ ಚಾರಿಟಬಲ್ ಟ್ರಸ್ಟ್, ಕಲ್ಪಜ್ಯೋತಿ ಪತ್ರಿಕೆ, ಸಪ್ತಗಿರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಆಶ್ರಯದಲ್ಲಿ ನಡೆದ ಉಚಿತ ಆರೋಗ್ಯ ತಪಾಸಣಾ ಶಿಬಿರ ಮತ್ತು ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಯಾವುದೇ ರೋಗ ಬಂದಲ್ಲಿ ಆರಂಭದಲ್ಲೇ ಅದನ್ನು ಗುರುತಿಸಿ ಸೂಕ್ತ ಚಿಕಿತ್ಸೆ ತೆಗೆದುಕೊಳ್ಳುವುದು ಸೂಕ್ತ. ಉದಾಸೀನ ಮಾಡಿದರೆ ಮುಂದೊಂದು ದಿನ ಪಶ್ಚಾತ್ತಾಪ ಪಡಬೇಕಾಗುವುದು. ಆರಂಭದಲ್ಲೇ ರೋಗಕ್ಕೆ ಸೂಕ್ತ ಔಷಧೋಪಚಾರ ಮಾಡಿದಲ್ಲಿ ನೆಮ್ಮದಿಯ ಜೀವನ ನಡೆಸಬಹುದು ಎಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎನ್. ಆರ್.ಜಯರಾಮ್ ಮಾತನಾಡಿ ಗ್ರಾಮಾಂತರ ಪ್ರದೇಶದಲ್ಲಿನ ಜನರು ಆರೋಗ್ಯದ ಬಗ್ಗೆ ಗಮನ ಕೊಡುವುದು ವಿರಳ. ತಮ್ಮ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಂಡು ತಮ್ಮ ಆರೋಗ್ಯವನ್ನು ಕಡೆಗಣಿಸುತ್ತಾರೆ. ಆರೋಗ್ಯ ಸುಧಾರಣೆಗೆ ಸಾಕಷ್ಟು ಹಣ ತೆರಬೇಕಾದೀತು ಎಂಬ ಭಯದಿಂದಲೂ ಸುಮ್ಮನಾಗುತ್ತಾರೆ. ಆದರೆ ಸುನಿಲ್ ಚಿಮ್ಮನಹಳ್ಳಿಯವರು ತಮ್ಮ ಹುಟ್ಟುಹಬ್ಬದ ದಿನದಂದೇ ಸಾರ್ಥಕ ಸೇವೆ ಮಾಡುತ್ತಿದ್ದಾರೆ. ಗ್ರಾಮಾಂತರ ಪ್ರದೇಶದ ಜನರ ಬಳಿಗೇ ತೆರಳಿ ಖ್ಯಾತ ಆಸ್ಪತ್ರೆಯ ವೈದ್ಯರಿಂದ ಚಿಕಿತ್ಸೆ ಕೊಡಿಸುತ್ತಿರುವುದು ಉತ್ತಮ ಕಾರ್ಯವಾಗಿದೆ ಎಂದರು. ಜನರು ಇಂತಹ ಶಿಬಿರದ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಎಂ.ಟಿ.ಕೃಷ್ಣಪ್ಪ, ಕೆ.ಎಂ.ಎಫ್ ನಿರ್ದೇಶಕ ಸಿ.ವಿ.ಮಹಲಿಂಗಯ್ಯ, ಮಾಜಿ ಶಾಸಕ ಎಚ್.ಬಿ.ನಂಜೇಗೌಡ, ಬೆಸ್ಕಾಂ ನ ಮಾಜಿ ನಿರ್ದೇಶಕ ಬಿ.ಎಸ್. ವಸಂತಕುಮಾರ್, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾ ರಾಜಣ್ಣ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಸನ್ನ ಕುಮಾರ್, ಪಿಎಸಿಎಸ್ ಅಧ್ಯಕ್ಷ ಗುಡ್ಡೇನಹಳ್ಳಿ ನಂಜುಂಡಪ್ಪ, ಎಐಸಿಸಿ ಸದಸ್ಯ ಸುಬ್ರಮಣಿ ಶ್ರೀಕಂಠೇಗೌಡ, ಗ್ರಾಮದ ಮುಖಂಡರಾದ ಶಂಕರೇಗೌಡ, ಗುಡಿಗೌಡರಾದ ಸಿದ್ದೇಗೌಡ, ಬೊಮ್ಮೇನಹಳ್ಳಿ ನಂದೀಶ್, ಮೇಲನಹಳ್ಳಿ ಮಂಜಣ್ಣ, ಪೃಥ್ವಿ ಕುಮಾರ್, ಗುತ್ತಿಗೆದಾರರಾದ ತ್ಯಾಗರಾಜು, ಬಾಣಸಂದ್ರ ಕೃಷ್ಣ ಮಾದಿಗ, ವಿಜಯೇಂದ್ರ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಡಿ.ಸಿ.ಕುಮಾರ್ ಸೇರಿದಂತೆ ಹಲವರು ಶಿಬಿರದ ಪ್ರಾಯೋಜಕ ಸುನಿಲ್ ಚಿಮ್ಮನಹಳ್ಳಿಯವರಿಗೆ ಅಭಿನಂದನೆ ಸಲ್ಲಿಸಿದರು.

ಈ ಆರೋಗ್ಯ ತಪಾಸಣಾ ಶಿಬಿರದಲ್ಲಿ ನೂರಾರು ಮಂದಿ ಭಾಗವಹಿಸಿ ಶಿಬಿರದ ಪ್ರಯೋಜನ ಪಡೆದುಕೊಂಡರು. ಈ ಸಂದರ್ಭದಲ್ಲಿ ಹತ್ತಾರು ಆಶಾ ಕಾರ್ಯಕರ್ತೆಯರಿಗೆ ಗೌರವ ಸಲ್ಲಿಸಲಾಯಿತು. ಹಲವು ಗರ್ಭಿಣಿಯರಿಗೆ ಮುಡಿ ತುಂಬುವ ಕಾರ್ಯವೂ ನಡೆಯಿತು.

## ಅಕ್ರಮ ಗ್ಯಾಸ್ ಸಿಲಿಂಡರ್ ದಾಸ್ತಾನು ವಶಕ್ಕೆ

ವಿಜಯಪುರ

ಅಕ್ರಮವಾಗಿ ಗೃಹಬಳಕೆಯ ಎಲ್.ಪಿ.ಜಿ ಗ್ಯಾಸ್ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿದ್ದ ಅಡ್ಡೆಯ ಮೇಲೆ ಆಹಾರ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸರು ಜಂಟಿಯಾಗಿ ದಾಳಿ ನಡೆಸಿ, ನೂರಾರು ಸಿಲಿಂಡರ್‌ಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಹೋಬಳಿಯ ಹುರುಳುಗುರ್ಕಿ ಗ್ರಾಮದ ಅಲ್ಲಾಭಕಾಶ್ ಎಂಬುವವರಿಗೆ ಸೇರಿದ ಶೆಡ್‌ನಲ್ಲಿ ಅಕ್ರಮವಾಗಿ ಸಿಲಿಂಡರ್ ಸಂಗ್ರಹಿಸಿಡಲಾಗಿದೆ ಎಂಬ ಖಚಿತ ಮಾಹಿತಿ ಮೇರೆಗೆ ಆಹಾರ ಇಲಾಖೆಯ ನಿರೀಕ್ಷಕರಾದ ರವಿಸೂರ್ಯವಂಶಿ ನೇತೃತ್ವದ ತಂಡ ಈ ಕಾರ್ಯಾಚರಣೆ ನಡೆಸಿದೆ.

ದಾಳಿಯ ವೇಳೆ ಸಿಲಿಂಡರ್ ಸಾಗಾಣಿಕೆಗೆ ಬಳಸುತ್ತಿದ್ದ ಆಟೋದಲ್ಲಿ ಯಾವುದೇ ಬ್ರ್ಯಾಂಡ್ ಹೆಸರಿಲ್ಲದ, ಹಾಳಾಗಿರುವ 5 ಕೆ.ಜಿ. ತೂಕದ 15 ಸಿಲಿಂಡರ್ಗಳು ಪತ್ತೆಯಾಗಿವೆ. ಇದಲ್ಲದೆ, ಶೆಡ್‌ನ ಒಳಭಾಗದಲ್ಲಿ ಸುಮಾರು 14 ಕೆ.ಜಿ. ಸಾಮರ್ಥ್ಯದ 100 ಖಾಲಿ ಸಿಲಿಂಡರ್ಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿರುವುದು ಕಂಡುಬಂದಿದೆ. ಅಧಿಕಾರಿಗಳು ಈ ಎಲ್ಲಾ 115 ಸಿಲಿಂಡರ್‌ಗಳನ್ನು ಹಾಗೂ ಸಾಗಾಣಿಕೆಗೆ ಬಳಸುತ್ತಿದ್ದ ವಾಹನವನ್ನು ಜಪ್ತಿ ಮಾಡಿದ್ದಾರೆ.

ಯಲಹಂಕ ಮೂಲದ ವ್ಯಕ್ತಿ ವಿರುದ್ಧ ದೂರು: ಈ ಅಕ್ರಮ ದಾಸ್ತಾನು ಪ್ರಕರಣಕ್ಕೆ ಸಂಬಂಧಿಸಿದಂತೆ ಯಲಹಂಕ ಮೂಲದ ಲಾಲ್ ಸಿಂಗ್ ಎಂಬಾತನ ಮೇಲೆ ಆಹಾರ ಇಲಾಖೆ ಅಧಿಕಾರಿಗಳು ದೂರು ನೀಡಿದ್ದಾರೆ. ಸದ್ಯ ವಿಜಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸವಲತ್ತುಗಳ ಸುರಿಮಳೆ!

ವಿಜಯಪುರ

"ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಲು ಸರ್ಕಾರ ಎಲ್ಲ ಸೌಲಭ್ಯಗಳನ್ನು ಒದಗಿಸುತ್ತಿದೆ. ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ಬಿಟ್ಟು ಸರ್ಕಾರಿ ಶಾಲೆಗಳ ಸದುಪಯೋಗ ಪಡೆದುಕೊಳ್ಳಬೇಕು," ಎಂದು ಮುಖ್ಯಶಿಕ್ಷಕಿ ಎನ್. ಸುಜಾತಮ್ಮ ಕರೆ ನೀಡಿದರು.

ಪಟ್ಟಣದ ಗುರಪ್ಪನಮಠದ ಪಿ.ಎಂ.ಶ್ರೀ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ 'ದಾಖಲಾತಿ ಆಂದೋಲನ ಜಾಥಾ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. 2026– 27ನೇ ಶೈಕ್ಷಣಿಕ ಸಾಲಿಗೆ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆ ಆರಂಭವಾಗಿದ್ದು, ಮನೆ ಮನೆಗೆ ತೆರಳಿ




ಪೋಷಕರಿಗೆ ಜಾಗೃತಿ ಮೂಡಿಸಲಾಯಿತು.

ಕೇಂದ್ರ ಪುರಸ್ಕೃತ ಶಾಲೆಯ ವಿಶೇಷತೆಗಳು: ಕೇಂದ್ರ ಸರ್ಕಾರದ 'ಪಿ.ಎಂ.ಶ್ರೀ' ಯೋಜನೆಯಡಿ ಆಯ್ಕೆಯಾಗಿರುವ ಈ ಶಾಲೆಯಲ್ಲಿ ಎಲ್‌ಕೆಜಿಯಿಂದ 8ನೇ ತರಗತಿಯವರೆಗೆ ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಬೋಧನೆ ನಡೆಯುತ್ತಿದೆ. ಆಧುನಿಕ ತಂತ್ರಜ್ಞಾನದಡಿ ಟ್ಯಾಬ್ ಬಳಕೆ, ಸ್ಮಾರ್ಟ್ ಕ್ಲಾಸ್, ಸುಸಜ್ಜಿತ ಪ್ರಯೋಗಾಲಯ ಹಾಗೂ ಗ್ರಂಥಾಲಯದ ವ್ಯವಸ್ಥೆ ಇಲ್ಲಿದೆ.

ವಿದ್ಯಾರ್ಥಿಗಳಿಗೆ ಸಿಗುವ ಉಚಿತ ಸೌಲಭ್ಯಗಳು: ಸಮವಸ್ತ್ರ ಟೈ, ಬೆಲ್ಟ್, ಶೂ–ಸಾಕ್ಸ್, ಬ್ಯಾಗ್ ಹಾಗೂ ನೋಟ್ ಪುಸ್ತಕಗಳು.

ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಮೊಟ್ಟೆ ಮತ್ತು ಬಾಳೆಹಣ್ಣು ವಿತರಣೆ.

ನವೋದಯ ಪರೀಕ್ಷೆಗೆ ವಿಶೇಷ ತರಬೇತಿ, ಯೋಗ, ಕರಾಟೆ ಮತ್ತು ಸಂಗೀತ ಶಿಕ್ಷಣ.

ಸ್ಕೌಟ್ಸ್ ಅಂಡ್ ಗೈಡ್ಸ್, ಸೇವಾದಳ ಹಾಗೂ ಸ್ಪೋಕನ್ ಇಂಗ್ಲಿಷ್ ತರಬೇತಿ.

ಜಾಥಾದ ಉದ್ದಕ್ಕೂ ಶಿಕ್ಷಕರು ಪೋಷಕರಿಗೆ ಶಾಲೆಯ ಸೌಲಭ್ಯಗಳ ಕುರಿತ ಕರಪತ್ರಗಳನ್ನು ವಿತರಿಸಿ, ಮಕ್ಕಳ ಭವಿಷ್ಯಕ್ಕಾಗಿ ಸರ್ಕಾರಿ ಶಾಲೆಗೆ ದಾಖಲಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಎಸ್.ಡಿ.ಎಂ.ಸಿ ಅಧ್ಯಕ್ಷ ಮಂಜುನಾಥ್, ಶಿಕ್ಷಕಿಯರಾದ ಮಂಜುಳಾ, ಕುಮಾರಿ, ಸೂರ್ಯಪ್ರಭ, ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.

# ರಾಸಾಯನಿಕ ಮುಕ್ತ ಕೃಷಿಗೆ ಒತ್ತು ನೀಡಲು ತಜ್ಞರ ಕರೆ

ಕೋಲಾರ

"ಇತ್ತೀಚಿನ ದಿನಗಳಲ್ಲಿ ರೈತರು ಕೀಟ ಮತ್ತು ಪೀಡೆಗಳ ನಿರ್ವಹಣೆಗೆ ಅತಿಯಾಗಿ ರಾಸಾಯನಿಕಗಳ ಮೊರೆ ಹೋಗುತ್ತಿದ್ದಾರೆ. ಇದರಿಂದ ಕೃಷಿ ವೆಚ್ಚ ಹೆಚ್ಚಾಗುವುದಲ್ಲದೆ, ಪರಿಸರ ಮತ್ತು ಮಾನವನ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ. ರಾಸಾಯನಿಕದ ಜೊತೆಗೆ ಸಾವಯವ ಪದ್ಧತಿಯನ್ನು ಸಮತೋಲನವಾಗಿ ಬಳಸಿದರೆ ಮಾತ್ರ ರೈತರು ಸುಸ್ಥಿರ ಆದಾಯ ಗಳಿಸಲು ಸಾಧ್ಯ," ಎಂದು ಕೋಲಾರ ತೋಟಗಾರಿಕಾ ಮಹಾವಿದ್ಯಾಲಯದ ಕೀಟಶಾಸ್ತ್ರದ ಸಹ–ಪ್ರಾಧ್ಯಾಪಕ ಡಾ. ಗಂಗಾಧರ ನರಬೆಂಚಿ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಉಪ್ಪುಕುಂಟೆ ಹಾಗೂ ಅರಹಳ್ಳಿ ಗ್ರಾಮಗಳಲ್ಲಿ ಗ್ರಾಮೀಣ ತೋಟಗಾರಿಕಾ ಕಾರ್ಯಾನುಭವ ಶಿಬಿರದ ಭಾಗವಾಗಿ



ಆಯೋಜಿಸಲಾಗಿದ್ದ ಗುಂಪು ಚರ್ಚೆ ಮತ್ತು ಸಾವಯವ ಪದ್ಧತಿ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಸಾವಯವ ಪದ್ಧತಿಯೇ ಸಂಜೀವಿನಿ: ಸಿದ್ದಪಡಿಸಿದ ಕೀಟ–ಪೀಡೆ ಬಲೆಗಳು, ಜೈವಿಕ ಪೀಡೆನಾಶಕಗಳು ಹಾಗೂ ಸಸ್ಯಜನ್ಯ ಕೀಟನಾಶಕಗಳ ತಯಾರಿಕಾ ವಿಧಾನವನ್ನು ರೈತರಿಗೆ ಪ್ರಾತ್ಯಕ್ಷಿಕೆ ಮೂಲಕ ವಿವರಿಸಲಾಯಿತು. "ಸಸ್ಯಜನ್ಯ ಕೀಟನಾಶಕಗಳ ಬಳಕೆಯಿಂದ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬಹುದು," ಎಂದು ನರಬೆಂಚಿ ಕಿವಿಮಾತು ಹೇಳಿದರು.

ಜೀವಾಮೃತ ಹಾಗೂ ಬೀಜೋಪಚಾರದ ಮಹತ್ವ: ಕೃಷಿ ಹವಾಮಾನ ಶಾಸ್ತ್ರದ ಸಹಾಯಕ ಪ್ರಾಧ್ಯಾಪಕ ಡಾ. ಜಗದೀಶ ನಾಯ್ಕ ಅವರು ಮಾತನಾಡಿ, ಕೃಷಿಯಲ್ಲಿ ಜೀವಾಮೃತ, ಪಂಚಗವ್ಯ, ಬ್ರಹ್ಮಾಸ್ತ್ರ ಹಾಗೂ ಸೆರಿಬೆಡ್ ವೇಸ್ಟ್ ಕಾಂಪೋಸ್ಟ್ ಬಳಕೆಯ ಮಹತ್ವವನ್ನು ವಿವರಿಸಿದರು. ರಾಗಿ ಬೆಳೆಯಲ್ಲಿ ಬೀಜ ಕಠಿಣಗೊಳಿಸುವುದು ಮತ್ತು ಬೀಜೋಪಚಾರದ ವಿಧಾನಗಳ ಬಗ್ಗೆ ರೈತರೊಂದಿಗೆ ಸಂವಾದ ನಡೆಸಿದರು.

ಕ್ಷೇತ್ರ ಭೇಟಿ ಮತ್ತು ಚರ್ಚೆ: ಕಾರ್ಯಕ್ರಮದ ಅಂಗವಾಗಿ ತೋಟಗಾರಿಕಾ ಮಹಾವಿದ್ಯಾಲಯದ ಅಂತಿಮ ವರ್ಷದ ವಿದ್ಯಾರ್ಥಿಗಳು ಮತ್ತು ರೈತರು ತಂಡೋಪತಂಡವಾಗಿ ಗ್ರಾಮದ ಗುಲಾಬಿ, ಸಿಹಿಜೋಳ, ಮಾವು ಹಾಗೂ ಸೀಬೆ ಬೆಳೆಗಳ ಕ್ಷೇತ್ರಗಳಿಗೆ ಭೇಟಿ ನೀಡಿದರು. ಬೆಳೆಗಳ ಪ್ರಸ್ತುತ ಸ್ಥಿತಿ, ಕಂಡುಬರುವ ರೋಗಗಳು ಮತ್ತು ಅವುಗಳ ನಿರ್ವಹಣೆಯ ಕುರಿತು ಸ್ಥಳದಲ್ಲೇ ತಜ್ಞರೊಂದಿಗೆ ಚರ್ಚಿಸಲಾಯಿತು.

## 20ರಿಂದ ಉಪನ್ಯಾಸಕರ ಅಸಹಕಾರ ಚಳವಳಿ

ದೊಡ್ಡಬಳ್ಳಾಪುರ

ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಉಪನ್ಯಾಸಕರು ನಡೆಸುತ್ತಿರುವ ಹೋರಾಟಕ್ಕೆ ಕರ್ನಾಟಕ ರಾಜ್ಯ ಅನುದಾನಿತ ಪದವಿಪೂರ್ವ ಕಾಲೇಜುಗಳ ನೌಕರರ ಸಂಘವು ಸಂಪೂರ್ಣ ಬೆಂಬಲ ಘೋಷಿಸಿದೆ. ಮಾರ್ಚ್ 20 ರಿಂದ ಆರಂಭವಾಗಲಿರುವ ದ್ವಿತೀಯ ಪಿಯು ಪರೀಕ್ಷೆಯ ಮೌಲ್ಯಮಾಪನವನ್ನು ಬಹಿಷ್ಕರಿಸುವುದಾಗಿ ಸಂಘದ ಮುಖಂಡರು ಎಚ್ಚರಿಸಿದ್ದಾರೆ.

ಮಾರಸಂದ್ರದ ಪಿ.ಕೆ.ಬಿ. ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಸಂಘದ ಪದಾಧಿಕಾರಿಗಳ ಮಹತ್ವದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಸಂಘದ ಅಧ್ಯಕ್ಷ ಡಾ. ಎಸ್. ಹರೀಶ್, ಗೌರವಾಧ್ಯಕ್ಷ ಡಾ. ಆರ್. ಕೃಷ್ಣಮೂರ್ತಿ ಮತ್ತು ಪ್ರಧಾನ ಕಾರ್ಯದರ್ಶಿ ಎಂ. ಆನಂದ್, ಸರ್ಕಾರದ ಆಡಳಿತಾತ್ಮಕ ನಿರ್ಧಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರಮುಖ ಬೇಡಿಕೆಗಳು ಮತ್ತು ವಿರೋಧ:

ಜಿ.ಪಂ ನಿಯಂತ್ರಣಕ್ಕೆ ವಿರೋಧ: ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಗಳನ್ನು ಜಿಲ್ಲಾ ಪಂಚಾಯತ್‌ಗಳ ಆಡಳಿತಾತ್ಮಕ ನಿಯಂತ್ರಣಕ್ಕೆ ವರ್ಗಾಯಿಸುವ ಸರ್ಕಾರದ ಪ್ರಸ್ತಾವನೆಯನ್ನು ಸಂಘವು ತೀವ್ರವಾಗಿ ಖಂಡಿಸಿದೆ. ಇದು ಇಲಾಖೆಯ ಸ್ವಾಯತ್ತತೆಗೆ ಧಕ್ಕೆ ತರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ನಿಯೋಜನೆಗೆ ಆಗ್ರಹ: ಕಾರ್ಯಭಾರದ ಕೊರತೆ ಎದುರಿಸುತ್ತಿರುವ ಅನುದಾನಿತ ಕಾಲೇಜುಗಳ ಉಪನ್ಯಾಸಕರನ್ನು ಸಮೀಪದ ಸರ್ಕಾರಿ ಕಾಲೇಜುಗಳಿಗೆ ನಿಯೋಜಿಸಬೇಕು.

ಅನುಪಾತ ಕಡಿತ: ಇಲಾಖೆಯಲ್ಲಿ ಪ್ರಸ್ತುತ ಇರುವ ವಿದ್ಯಾರ್ಥಿ ಮತ್ತು ಉಪನ್ಯಾಸಕರ ಅನುಪಾತವನ್ನು ಕಡಿಮೆ ಮಾಡಬೇಕು.

ಆದೇಶಕ್ಕಾಗಿ ಕಾಯುತ್ತಿರುವ ನೌಕರರು: "ನಮ್ಮ ಬೇಡಿಕೆಗಳ ಕುರಿತು ಶಿಕ್ಷಣ ಸಚಿವರು ಮತ್ತು ಉನ್ನತ ಅಧಿಕಾರಿಗಳೊಂದಿಗೆ ಈಗಾಗಲೇ ಸುದೀರ್ಘ ಚರ್ಚೆ ನಡೆಸಲಾಗಿದೆ. ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದರೂ, ಈವರೆಗೆ ಯಾವುದೇ ಅಧಿಕೃತ ಆದೇಶ ಹೊರಡಿಸಿಲ್ಲ. ಸರ್ಕಾರದ ಈ ವಿಳಂಬ ಧೋರಣೆಯಿಂದಾಗಿ ಅನಿವಾರ್ಯವಾಗಿ ಮೌಲ್ಯಮಾಪನ ಬಹಿಷ್ಕಾರದಂತಹ ಕಠಿಣ ನಿರ್ಧಾರ ತೆಗೆದುಕೊಳ್ಳಬೇಕಾಗಿದೆ," ಎಂದು ಪದಾಧಿಕಾರಿಗಳು ತಿಳಿಸಿದರು.

ಈ ಹೋರಾಟದಿಂದಾಗಿ ದ್ವಿತೀಯ ಪಿಯುಸಿ ಫಲಿತಾಂಶದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದ್ದು, ಸರ್ಕಾರ ತಕ್ಷಣವೇ ಮಧ್ಯಪ್ರವೇಶಿಸಿ ಸಮಸ್ಯೆ ಬಗೆಹರಿಸಬೇಕೆಂದು ಉಪನ್ಯಾಸಕರ ಸಮುದಾಯ ಒತ್ತಾಯಿಸಿದೆ.

# ತುರುವೇಕೆರೆ ಗ್ರಾಮಸ್ಥರಿಂದ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ; ಅಕ್ರಮ ಮದ್ಯ ಮಾರಾಟ ತಡೆಯಲು ಆಗ್ರಹ

ತುಮಕೂರು

"ನಮ್ಮ ಊರಿನಲ್ಲಿ ದಿನದಿಂದ ದಿನಕ್ಕೆ ಕುಡಿತದ ಹಾವಳಿ ಮಿತಿ ಮೀರಿದೆ. ಅಕ್ರಮ ಮದ್ಯ ಮಾರಾಟದಿಂದಾಗಿ ಯುವಕರು ಮತ್ತು ಅಮಾಯಕರು ದಾರಿ ತಪ್ಪುತ್ತಿದ್ದಾರೆ. ಹಗಲು–ರಾತ್ರಿಯೆನ್ನದೆ ಮದ್ಯದ ಚಟಕ್ಕೆ ಬಿದ್ದಿರುವುದರಿಂದ ಗ್ರಾಮದ ನೆಮ್ಮದಿಯೇ ಹರಾಜಾಗಿದೆ," ಎಂದು ತುರುವೇಕೆರೆ ತಾಲ್ಲೂಕಿನ ನಾಗೇಗೌಡನ ಪಾಳ್ಯ ಗ್ರಾಮದ ಮಹಿಳೆಯರು ತೀವ್ರ



ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿದ ಗ್ರಾಮದ ನೂರಾರು ಮಹಿಳೆಯರು ಮತ್ತು ಗ್ರಾಮಸ್ಥರು, ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿ ತಮ್ಮ ಅಳಲು ತೋಡಿಕೊಂಡರು. ಕಳೆದ ನಾಲ್ಕೈದು ತಿಂಗಳಿನಿಂದ ಸಂಬಂಧಪಟ್ಟ ಇಲಾಖೆಗಳಿಗೆ ದೂರು ನೀಡುತ್ತಿದ್ದರೂ, ಅಕ್ರಮ ಮದ್ಯ ಸರಬರಾಜಿಗೆ ಕಡಿವಾಣ ಬಿದ್ದಿಲ್ಲ ಎಂದು ಅವರು ಆರೋಪಿಸಿದರು.

"ಮನೆಯ ಯಜಮಾನರು ಕುಡಿದು ಬಂದು ಹೆಂಡತಿ–ಮಕ್ಕಳ ಮೇಲೆ ಹಲ್ಲೆ ಮಾಡುತ್ತಿದ್ದಾರೆ. ಸಂಸಾರಕ್ಕೆ ಬೇಕಾದ ಕನಿಷ್ಠ ಸೌಲಭ್ಯಗಳನ್ನು ಒದಗಿಸದೆ ನಿರ್ಲಕ್ಷಿಸುತ್ತಿದ್ದಾರೆ. ಇದರಿಂದಾಗಿ ಕುಟುಂಬಗಳು ಬೀದಿಗೆ ಬರುವಂತಾಗಿದೆ. ಮನೆಗಳಲ್ಲಿ ನೆಮ್ಮದಿ ಇಲ್ಲದಂತಾಗಿದ್ದು, ಹೆಣ್ಣುಮಕ್ಕಳು ಕಣ್ಣೀರಿನಲ್ಲಿ ಕೈ ತೊಳೆಯುವಂತಾಗಿದೆ," ಎಂದು ಪ್ರತಿಭಟನಾ ನಿರತ ಮಹಿಳೆಯರು ಅಳಲು ತೋಡಿಕೊಂಡರು.

ಅಬಕಾರಿ ಇಲಾಖೆಯ ಅಧಿಕಾರಿಗಳು ಕೂಡಲೇ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಮತ್ತು ಅಕ್ರಮ ಮದ್ಯ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಒಂದು ವೇಳೆ ವಾರದೊಳಗೆ ಅಕ್ರಮ ಮದ್ಯಕ್ಕೆ ಕಡಿವಾಣ ಹಾಕದಿದ್ದರೆ, ಮುಂದಿನ ದಿನಗಳಲ್ಲಿ ಬೃಹತ್ ಸಂಖ್ಯೆಯಲ್ಲಿ ಆಗಮಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಗ್ರಾಮಸ್ಥರು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರಾದ ಶಿವಮ್ಮ, ಲಕ್ಷ್ಮಿ, ಗಂಗಮ್ಮ, ಜಯಮ್ಮ, ಚಿಕ್ಕಮಣಿ, ಶಿಲ್ಪ, ಪ್ರೇಮ, ಭಾರತಿ, ನಾಗರತ್ನ, ಕಮಲಮ್ಮ, ರತ್ನಮ್ಮ, ಚಂದ್ರಮ್ಮ, ದೊಡ್ಡಮ್ಮಯ್ಯ, ಪ್ರೀತಿ, ರೇಣುಕಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 'ಪದವಿ ಪೂರ್ವ ಶಿಕ್ಷಣ ಇಲಾಖೆಗೆ 'ಜಿ.ಪಂ' ಲಗಾಮು ಬೇಡ'

ತುಮಕೂರು

ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರ ಕಚೇರಿಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಆಡಳಿತಾತ್ಮಕ ನಿಯಂತ್ರಣಕ್ಕೆ ಒಪ್ಪಿಸುವ ಸರ್ಕಾರದ ಪ್ರಸ್ತಾವನೆಯನ್ನು ತಕ್ಷಣವೇ ಹಿಂಪಡೆಯಬೇಕು ಎಂದು ಒತ್ತಾಯಿಸಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘವು ಸೋಮವಾರ ಬೃಹತ್ ಪ್ರತಿಭಟನೆ ನಡೆಸಿತು.

ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದ ನೂರಾರು ಉಪನ್ಯಾಸಕರು, ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಅವರ ಮೂಲಕ ಶಿಕ್ಷಣ ಸಚಿವ ಮಧು ಬಂಗಾರಪ್ಪ



ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಸ್ವಾಯತ್ತತೆಗೆ ಸಂಚು ನೇ.ರಂ. ನಾಗರಾಜ ಆಕ್ರೋಶ: ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷ ನೇ.ರಂ. ನಾಗರಾಜ ಮಾತನಾಡಿ, "ಸರ್ಕಾರದ ಈ ಹೊಸ ಪ್ರಸ್ತಾವನೆಯು ಪದವಿ ಪೂರ್ವ ಶಿಕ್ಷಣ ಇಲಾಖೆಯ ಸ್ವಾಯತ್ತತೆ ಮತ್ತು ಅಸ್ತಿತ್ವಕ್ಕೆ ಕೊಡಲಿ ಪೆಟ್ಟು ನೀಡುವಂತಿದೆ. ಈಗಾಗಲೇ ಸ್ಥಾಪಿತವಾಗಿರುವ ಆಡಳಿತಾತ್ಮಕ ವ್ಯವಸ್ಥೆಯನ್ನು ಅಸ್ತವ್ಯಸ್ತಗೊಳಿಸುವುದು ಸರಿಯಲ್ಲ. ಹಲವು ಬಾರಿ ಮನವಿ ಮಾಡಿದರೂ ಸರ್ಕಾರ ಮೌನ ವಹಿಸಿರುವುದು ಉಪನ್ಯಾಸಕರ ಸಮುದಾಯದಲ್ಲಿ ಆತಂಕ ಮೂಡಿಸಿದೆ," ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರಮುಖ ಬೇಡಿಕೆಗಳು:

ನಿಯಂತ್ರಣ ವರ್ಗಾವಣೆ ಬೇಡ: ಡಿಡಿಪಿಐ ಕಚೇರಿಗಳನ್ನು ಸಿಇಒಗಳ ಅಧೀನಕ್ಕೆ ತರುವ ನಿರ್ಧಾರ ಕೈಬಿಡಬೇಕು.

ಪರೀಕ್ಷಾ ವಿಭಾಗ ವಾಪಸ್ ತನ್ನಿ: ಈ ಹಿಂದೆ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿದ್ದ ಪರೀಕ್ಷಾ ವಿಭಾಗವನ್ನು ಮತ್ತೆ ನಿರ್ದೇಶನಾಲಯಕ್ಕೆ ಮರಳಿ ವರ್ಗಾಯಿಸಬೇಕು.

ನ್ಯಾಯಸಮ್ಮತ ಬೇಡಿಕೆ ಈಡೇರಿಕೆ: ಇಲಾಖೆಯ ಒಳಗಿನ ಆಡಳಿತಾತ್ಮಕ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಬೇಕು.

ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕ ಚಂದ್ರಯ್ಯ, ಅನುದಾನಿತ ಕಾಲೇಜುಗಳ ನೌಕರರ ಸಂಘದ ಅಧ್ಯಕ್ಷ ಪರಮೇಶ್ವರಪ್ಪ, ಉಪನ್ಯಾಸಕರ ಸಂಘದ ಅಧ್ಯಕ್ಷ ಎನ್. ಮಹಾಲಿಂಗೇಶ್, ಜಿಲ್ಲಾ ಪ್ರಾಂಶುಪಾಲರ ಸಂಘದ ಕಾರ್ಯದರ್ಶಿ ಸತೀಶ್ ಸಿ.ಜಿ ಸೇರಿದಂತೆ ವೆಂಕಟಾಚಲ, ವಸಂತ್ ಕುಮಾರ್, ಚಂದ್ರಶೇಖರ್ ಹಾಗೂ ನೂರಾರು ಉಪನ್ಯಾಸಕರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಶ್ರೀಗಂಧ ಕಳ್ಳತನ: ಆರೋಪಿಗಳ ಬಂಧನಕ್ಕೆ ಮನವಿ



ಬಳ್ಳಾರಿ

ಜಿಲ್ಲೆಯ ಕಂಪ್ಲಿ ತಾಲೂಕಿನ ಶ್ರೀರಾಮರಂಗಾಪುರಂ ಬಳಿಯ ಜಮೀನಿನಲ್ಲಿ ಶ್ರೀಗಂಧದ ಮರಗಳ ಕಳ್ಳತನವಾಗಿದ್ದು, ಆರೋಪಿಗಳನ್ನು ಕೂಡಲೇ ಪತ್ತೆ ಹಚ್ಚಿ ಬಂಧಿಸುವಂತೆ ಎಸ್ಪಿ ಸುಮನ್ ಪೆನ್ನೇಕರ್ ಅವರಿಗೆ ಅಖಿಲ ಕರ್ನಾಟಕ ಶ್ರೀಗಂಧ ಮತ್ತು ವನಕೃಷಿ ಬೆಳೆಗಾರರ ಸಂಘದಿಂದ ಮನವಿ ಮಾಡಲಾಗಿದೆ.

ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಗಣಪಾಲ ಐನಾಥರೆಡ್ಡಿ ನೇತೃತ್ವದ ನಿಯೋಗವು ಗ್ರಾಮದ ಸುರೇಶ ಬಾಬು ಅವರ ಜಮೀನಿನಲ್ಲಿನ 5 ಶ್ರೀಗಂಧದ ಮರಗಳನ್ನು ಪೂರ್ಣವಾಗಿ ಕತ್ತರಿಸಿ ಕಳುವು ಮಾಡಲಾಗಿದೆ. 30 ಮರಗಳನ್ನು ಅರ್ಧಕ್ಕೆ, ಕತ್ತರಿಸಿ ಬಿಟ್ಟು ಹೋಗಿದ್ದಾರೆ. ಇವುಗಳ ಮೌಲ್ಯ ರೂ 16,5000 ಗಳಾಗಿದೆ. ಹಂಪಿ ಪೊಲೀಸ್ ಠಾಣೆಯಲ್ಲಿ ನವೆಂಬರ್ 2023 ರಲ್ಲಿ ಪ್ರಕರಣ ದಾಖಲಾಗಿದ್ದು ಇನ್ನೂ ಇಬ್ಬರು ಕದ್ದ ಮಾಲು ಸ್ವೀಕರಿಸಿದ ಆರೋಪಿತರನ್ನು ದಸ್ತಗಿರಿ ಮಾಡುವುದು ಬಾಕಿ ಇದೆ.

ಹೊಸಪೇಟೆ ನಗರ ಠಾಣೆಯಲ್ಲಿ ಆರು ಜನ ಆರೋಪಿತರು ಇದ್ದು, ಇಬ್ಬರು ಶ್ರೀಗಂಧ ಕದ್ದ ಮಾಲನ್ನು ಖರೀದಿಸಿದ ಆರೋಪವಿದೆ. ಕೇರಳ ಮೂಲದವರನ್ನು ದಸ್ತಗಿರಿ ಮಾಡಿರುವ ವಿಚಾರವಿದೆ. ಮರಗಳ ಬಗ್ಗೆ ಮಾಹಿತಿ ನೀಡುವ, ಮರ ಕದಿಯುವ, ಕದ್ದ ಮರಗಳನ್ನು ಸಾಗಾಟ ಮಾಡುವ, ಕದ್ದ ಮರವನ್ನು ಖರೀದಿ ಮಾಡುವ, ಅಲ್ಲದೇ ಕದ್ದ ಮರದಿಂದ ಮೌಲ್ಯವರ್ಧನೆ ಮಾಡಿ ಲಾಭ ಪಡೆಯುವ ಕಾರ್ಖಾನೆಯವರೆಗೂ ಎಲ್ಲಾ ಹಂತಗಳಲ್ಲೂ ತಂಡ ವ್ಯವಸ್ಥಿತವಾಗಿ ತೊಡಗಿಕೊಂಡಿದೆ.

ಶ್ರೀಗಂಧದ ಕಳ್ಳತನಗಳು ನಡೆಯುತ್ತಿದ್ದರೂ ಪೊಲೀಸ್ ಇಲಾಖೆ ಕ್ರಮ ತೆಗೆದುಕೊಳ್ಳದಿರುವುದರಿಂದ ಕಳ್ಳತನಗಳ ಹೆಚ್ಚಳಕ್ಕೆ ಇಂಬು ನೀಡಿದಂತಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ನಾಗರಾಜ ಕೆ.ಎಂ. ಕೊಳಗಲ್ಲು, ಲಿಂಗಾರೆಡ್ಡಿ ಯರಗುಡಿ, ಶರಣಬಸಂಪ್ಪ ಬಾದನಹಟ್ಟಿ, ಮಾಗರಾಜ, ಹನುಮನಗೌಡ, ರುದ್ರಪ್ಪ, ಪ್ರಕಾಶ್ ಬಾಬು, ಕರಿಬಸಪ್ಪ ಮೊದಲಾದವರು ಈವೇಳೆ ಇದ್ದರು.

## ಪೌತಿ ಖಾತೆ ವಿಳಂಬಕ್ಕೆ ಅಧಿಕಾರಿಗಳ ವಿರುದ್ಧ ಡಿಸಿ ಅಸಮಾಧಾನ



ಮಧುಗಿರಿ

"ಸಾರ್ವಜನಿಕರ ಅರ್ಜಿಗಳನ್ನು ವಿಳಂಬ ಮಾಡದೆ ಶೀಘ್ರವಾಗಿ ವಿಲೇವಾರಿ ಮಾಡಿ. ಸಣ್ಣಪುಟ್ಟ ಕೆಲಸಗಳಿಗೂ ಜನ ಸಾಮಾನ್ಯರು ಕಚೇರಿಗಳಿಗೆ ಅಲೆಯುವಂತೆ ಮಾಡಿದರೆ ಶಿಸ್ತು ಕ್ರಮ ಅನಿವಾರ್ಯ," ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ತಾಲೂಕು ಕಚೇರಿಯ ಸಭಾಂಗಣದಲ್ಲಿ ಸೋಮವಾರ ನಡೆದ ಜನಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ ಸ್ವೀಕೃತವಾದ 280ಕ್ಕೂ ಹೆಚ್ಚು ಅರ್ಜಿಗಳಲ್ಲಿ ಬಹುಪಾಲು ಭೂಮಿ ಕೇಂದ್ರ, ಪೌತಿ ಖಾತೆ ಹಾಗೂ ಕಂದಾಯ ಇಲಾಖೆಗೆ ಸಂಬಂಧಿಸಿದ್ದವು.

ಸಿದ್ದಾಪುರದ ಹನುಮಂತರಾಯಪ್ಪ ಹಾಗೂ ಹನುಮಂತರಾಜು ಎಂಬ ಅರ್ಜಿದಾರರು, ಪೌತಿ ಖಾತೆಗಾಗಿ ಅಧಿಕಾರಿಗಳು ನೀಡುತ್ತಿರುವ ಕಿರುಕುಳದ ಬಗ್ಗೆ ಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು. "ಮೂರು ಬಾರಿ ಚೆಕ್ ಲಿಸ್ಟ್ ಸಿದ್ಧವಾಗಿ ಒಟಿಪಿ ಬಂದಿದ್ದರೂ ಅಧಿಕಾರಿಗಳು ನಾನಾ ನೆಪ ಹೇಳಿ ಅಲೆದಾಡಿಸುತ್ತಿದ್ದಾರೆ" ಎಂಬ ದೂರು ಕೇಳಿದ ಜಿಲ್ಲಾಧಿಕಾರಿಗಳು, ಸ್ಥಳದಲ್ಲಿದ್ದ ಕಂದಾಯ ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಕೂಡಲೇ ಸಮಸ್ಯೆ ಬಗೆಹರಿಸಲು ಆದೇಶಿಸಿದರು. ವಿಧವಾ ಮಾಸಾಶನ, ಅಂಗವಿಕಲ ಮಾಸಾಶನ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸೌಲಭ್ಯಗಳಿಗೆ ಸಂಬಂಧಿಸಿದ ಹಲವು ಅರ್ಜಿಗಳನ್ನು ಡಿಸಿಯವರು ಸ್ಥಳದಲ್ಲೇ ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ಮಂಜೂರಾತಿ ಪತ್ರಗಳನ್ನು ವಿತರಿಸಿದರು. ಐಡಿ ಹಳ್ಳಿ ಹಾಗೂ ದೊಡ್ಡೇರಿ ಹೋಬಳಿಯ ರೈತರ ಸಾಗುವಳಿ ಭೂಮಿ ಸಮಸ್ಯೆಗಳನ್ನು ಆಲಿಸಿದ ಅವರು, ಶೀಘ್ರ ವಿಲೇವಾರಿಯ ಭರವಸೆ ನೀಡಿದರು.

# ಮಾಲೂರು ನಗರಸಭೆ ಖಜಾನೆಗೆ 10.18 ಲಕ್ಷ ರೂ. ಜಮೆ

ಮಾಲೂರು

ನಗರಸಭೆ ಮಾಲೀಕತ್ವದ ವಿವಿಧ ಮೂಲಗಳ ಶುಲ್ಕ ವಸೂಲಾತಿ ಹಾಗೂ ಅನುಪಯುಕ್ತ ವಸ್ತುಗಳ ವಿಲೇವಾರಿಗಾಗಿ ನಡೆದ 2026–27ನೇ ಸಾಲಿನ ವಾರ್ಷಿಕ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಒಟ್ಟು 10,18,200 ರೂಪಾಯಿಗಳು ನಗರಸಭೆಗೆ ಸಂದಾಯವಾಗಿದೆ ಎಂದು ಪೌರಾಯುಕ್ತ ಎಂ.ಎಸ್. ಮಹದೇವ್ ತಿಳಿಸಿದ್ದಾರೆ.

ನಗರಸಭಾ ಕಾರ್ಯಾಲಯದ ಆವರಣದಲ್ಲಿರುವ ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ರಂಗಮಂದಿರದಲ್ಲಿ ನಡೆದ ಈ ಪ್ರಕ್ರಿಯೆಯಲ್ಲಿ ಹಲವಾರು ಬಿಡ್‌ದಾರರು ತೀವ್ರ ಪೈಪೋಟಿ ನಡೆಸಿದರು. ನಗರಸಭೆಯ ಆರ್ಥಿಕ ಸ್ಥಿರತೆಗಾಗಿ ಪ್ರತಿ ವರ್ಷ ಇಂತಹ ಹರಾಜು ನಡೆಸಲಾಗುತ್ತಿದ್ದು, ಸರ್ಕಾರದ ನಿಯಮಾವಳಿಗಳ ಅನ್ವಯ ಪಾರದರ್ಶಕವಾಗಿ ಬಿಡ್ ನಡೆಸಲಾಯಿತು.

ಬಿಡ್ ವಿವರಗಳು:

ವಾರದ ಸಂತೆ ಹಾಗೂ ಮಾರುಕಟ್ಟೆ ಶುಲ್ಕ: ಸಂತೆ ಹಾಗೂ ದಿನವಹಿ ಮಾರುಕಟ್ಟೆ ಶುಲ್ಕ ವಸೂಲಾತಿಯ ಹಕ್ಕನ್ನು ಮುನಿಕೃಷ್ಣ ಅವರು 10 ಲಕ್ಷ ರೂಪಾಯಿಗಳಿಗೆ



ಬಿಡ್ ಮಾಡುವ ಮೂಲಕ ತಮ್ಮದಾಗಿಸಿಕೊಂಡರು.

ಅನುಪಯುಕ್ತ ವಸ್ತುಗಳ ವಿಲೇವಾರಿ: ಆರೋಗ್ಯ ಶಾಖೆಯ ಅನುಪಯುಕ್ತ ವಸ್ತುಗಳನ್ನು 10 ಸಾವಿರ ರೂ.ಗಳಿಗೆ ಹಾಗೂ ತಾಂತ್ರಿಕ ವಿಭಾಗದ 200 ಕೆಜಿ ವಸ್ತುಗಳನ್ನು ಪ್ರತಿ ಕೆಜಿಗೆ 36 ರೂ. ನಂತೆ (ಒಟ್ಟು 7,200 ರೂ.) ಜುಬೇದ್ ವುಲ್ಲಾಖಾನ್ ಪಡೆದುಕೊಂಡರು. ಹಳೆಯ ಪತ್ರಿಕೆಗಳು 1,000 ರೂ.ಗಳಿಗೆ ಹರಾಜಾದವು.

ಹರಾಜಿಗೂ ಮುನ್ನ ಸಾರ್ವಜನಿಕರಿಗೆ ಕರಪತ್ರಗಳ ಮೂಲಕ ಮಾಹಿತಿ ನೀಡಿ ಪ್ರಚಾರ ಮಾಡಲಾಗಿತ್ತು. ಠೇವಣಿ ಹಣ ಪಾವತಿಸಿದ್ದ ಬಿಡ್‌ದಾರರಿಗೆ ಹರಾಜಿನ ಕಟ್ಟುನಿಟ್ಟಿನ ಷರತ್ತುಗಳನ್ನು ವಿವರಿಸಿದ ಬಳಿಕವೇ ಪ್ರಕ್ರಿಯೆ ಆರಂಭಿಸಲಾಯಿತು.

ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ಚಂದ್ರು, ನಿರೀಕ್ಷಕ ಅನಿಲ್, ಆರೋಗ್ಯ ನಿರೀಕ್ಷಕರಾದ ಶ್ರೀನಿವಾಸ್, ರಾಜಣ್ಣ, ಕರವಸೂಲಿಗಾರ ಆನೇಕಲ್ ನಾಗರಾಜ್, ಅಭಿಯಂತರರಾದ ಶ್ರೀನಿವಾಸ್, ಸುಹಾಸ್ ಸೇರಿದಂತೆ ನಗರಸಭೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಸೋಶಿಯಲ್ ಮೀಡಿಯಾ ವ್ಯೂವ್ಸ್‌ಗೆ ಸೀಮಿತವಾಯಿತೇ ಶಾಸಕಗಿರಿ?

ಚಿಕ್ಕಬಳ್ಳಾಪುರ

"ಶಾಸಕ ಪ್ರದೀಪ್ ಈಶ್ವರ್ ಹೋದ ಬಂದ ಕಡೆಯಲ್ಲೆಲ್ಲಾ ನನ್ನ ಲೆವೆಲ್ ಏನಿದ್ದರೂ ಮೋದಿ ಜೊತೆ ಎನ್ನುತ್ತಾರೆ. ಅವರ ಬಗ್ಗೆ ಮಾತನಾಡಲು ನನ್ನ ಲೆವೆಲ್ ಸಾಲದು, ನಾನೇನಿದ್ದರೂ ಸಾಮಾನ್ಯ ಜನರ ಲೆವೆಲ್," ಎಂದು ಯಲಹಂಕ ಶಾಸಕ ಎಸ್.ಆರ್. ವಿಶ್ವನಾಥ್ ವ್ಯಂಗ್ಯವಾಡಿದ್ದಾರೆ.

ನಗರದ ಭುವನೇಶ್ವರಿ ವೃತ್ತದಲ್ಲಿ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಎಚ್.ಎನ್. ವ್ಯಾಲಿ ನೀರಿನ ಮೂರನೇ ಹಂತದ ಶುದ್ಧೀಕರಣಕ್ಕೆ ಒತ್ತಾಯಿಸಿ ನಡೆದ ಬೃಹತ್ ಪ್ರತಿಭಟನಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕ್ಯಾನ್ಸರ್, ಕಿಡ್ನಿ ಸಮಸ್ಯೆಯ 'ಗ್ಯಾರಂಟಿ' ಕೊಟ್ಟ ಸರ್ಕಾರ: ಚಿಕ್ಕಬಳ್ಳಾಪುರಕ್ಕೆ ಬರುತ್ತಿರುವ ಬೆಂಗಳೂರಿನ ಕೊಳಚೆ ನೀರಿನಿಂದ ಅಂತರ್ಜಲ



ಕಲುಷಿತಗೊಂಡಿದೆ. ಈ ನೀರು ಕುಡಿದ ಜನರಿಗೆ ಕ್ಯಾನ್ಸರ್ ಮತ್ತು ಕಿಡ್ನಿ ಸಮಸ್ಯೆಗಳು ಬಾಧಿಸುತ್ತಿವೆ. "ಶುದ್ಧ ನೀರು ಕೊಡಲಾಗದ ಈ ಸರ್ಕಾರ ಮತ್ತು ಜನಪ್ರತಿನಿಧಿಗಳು ಜನರಿಗೆ ಬೀದಿಗೊಂದು 'ಡಯಾಲಿಸಿಸ್ ಗ್ಯಾರಂಟಿ' ನೀಡುತ್ತಿದ್ದಾರೆ," ಎಂದು ವಿಶ್ವನಾಥ್ ಲೇವಡಿ ಮಾಡಿದರು. ಅಹಿಂದ ವರ್ಗದ ಜನರ ಮತ ಪಡೆದು ಗೆದ್ದವರು ಇಂದು ಅವರಿಗೆ ಬಿಸ್ಲೇರಿ ನೀರು ಕುಡಿಸುವ ಬದಲು ಚರಂಡಿ ನೀರು ಕುಡಿಸುತ್ತಿದ್ದಾರೆ ಎಂದು ಕಿಡಿಕಾರಿದರು.

ಅಹಿಂದ ಪರದೆಯ ಹಿಂದೆ ಬಚ್ಚಿಡಬೇಡಿ ಸಂದೀಪ್ ರೆಡ್ಡಿ ಆಕ್ರೋಶ: ಟ್ರಸ್ಟ್ ಅಧ್ಯಕ್ಷ ಸಂದೀಪ್ ಬಿ. ರೆಡ್ಡಿ ಮಾತನಾಡಿ, "ಕ್ಷೇತ್ರದಲ್ಲಿ ಕೆಲಸ ಮಾಡಲು ಸಾಧ್ಯವಾಗದ ಶಾಸಕ ಪ್ರದೀಪ್ ಈಶ್ವರ್, ನೀರಾವರಿ ಹೋರಾಟಗಾರರ ವಿರುದ್ಧ ಸೋಶಿಯಲ್ ಮೀಡಿಯಾದಲ್ಲಿ 'ಅಹಿಂದ ನಾಯಕನ ಬೆಳವಣಿಗೆ ಸಹಿಸದವರು' ಎಂಬ ಟೀಕೆಗಳನ್ನು ಮಾಡುತ್ತಿದ್ದಾರೆ. ನೀವು ಬಿಸ್ಲೇರಿ ನೀರು ಕುಡಿದರೆ, ನಿಮಗೆ ಮತ ಹಾಕಿದ ಜನರು ಕೊಳಚೆ ನೀರು ಕುಡಿಯಬೇಕೇ? ಮಹಿಳೆಯರಲ್ಲಿ ಗರ್ಭಧಾರಣೆಗೂ ಈ ನೀರು ಅಡ್ಡಿಯಾಗುತ್ತಿದೆ," ಎಂದು ಗಂಭೀರ ಆರೋಪ ಮಾಡಿದರು.

ನೆರೆಯ ದೊಡ್ಡಬಳ್ಳಾಪುರ ಮತ್ತು ನೆಲಮಂಗಲ ಶಾಸಕರು ತಮ್ಮ ಕ್ಷೇತ್ರಕ್ಕೆ ಈ ನೀರು ಬೇಡ ಎಂದು ಧೈರ್ಯದಿಂದ ಹೇಳಿದ್ದಾರೆ. ಆದರೆ ಈ ಶಾಸಕರು ಕೇವಲ 'ವ್ಯೂವ್ಸ್ ಮತ್ತು ಲೈಕ್ಸ್'ಗಾಗಿ ಬದುಕುತ್ತಿದ್ದಾರೆ ಎಂದು ಧಿಕ್ಕಾರ ಕೂಗಿದರು. ಸಂದೀಪ್ ರೆಡ್ಡಿ ನೇತೃತ್ವದಲ್ಲಿ ನಡೆದ ಸ್ವಯಂಘೋಷಿತ ಬಂದ್‌ಗೆ ಸಾರ್ವಜನಿಕರಿಂದ ವ್ಯಾಪಕ ಬೆಂಬಲ ವ್ಯಕ್ತವಾಯಿತು.

18/03/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ವರ್ಗಾವಣೆ ಖಂಡಿಸಿ ಪ್ರತಿಭಟನೆ



ಬಂಗಾರಪೇಟೆ

ಮೀಸಲು ಕ್ಷೇತ್ರವಾದ ಬಂಗಾರಪೇಟೆಯಲ್ಲಿ ದಲಿತ ಕೋಟಾದಡಿ ಅಧಿಕಾರ ವಹಿಸಿಕೊಂಡ ಅಧಿಕಾರಿಗಳನ್ನು ಕೇವಲ ಒಂದು ತಿಂಗಳಿಗೇ ವರ್ಗಾವಣೆ ಮಾಡುತ್ತಿರುವುದನ್ನು ಖಂಡಿಸಿ, ಬರುವ 23ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಿಪಬ್ಲಿಕ್ ಸಂಘಟನೆಯ ರಾಜ್ಯಾಧ್ಯಕ್ಷ ಬನ್ನಹಳ್ಳಿ ಚಿಕ್ಕನಾರಾಯಣ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ದಲಿತ ಅಧಿಕಾರಿಗಳು ತಮ್ಮ ಅವಧಿ ಪೂರ್ಣಗೊಳಿಸುವ ಮುನ್ನವೇ ಅವರನ್ನು ಎತ್ತಂಗಡಿ ಮಾಡುತ್ತಿರುವುದು ಸರ್ಕಾರದ ದಲಿತ ವಿರೋಧಿ ಧೋರಣೆಯನ್ನು ಎತ್ತಿ ತೋರಿಸುತ್ತಿದೆ," ಎಂದು ಕಿಡಿಕಾರಿದರು.

ಪಿಎಸ್‌ಐ ವರ್ಗಾವಣೆಗೆ ಆಕ್ರೋಶ: "ಬೂದಿಕೋಟೆ ಪೊಲೀಸ್ ಠಾಣೆಗೆ ಸಬ್ ಇನ್ಸ್‌ಪೆಕ್ಟರ್ ಆಗಿ ಬಂದ ನಾರಾಯಣಸ್ವಾಮಿ ಅವರು ಅಧಿಕಾರ ವಹಿಸಿಕೊಂಡು ಕೇವಲ ಒಂದು ತಿಂಗಳಾಗಿದೆ. ಅಷ್ಟರಲ್ಲೇ ಅವರನ್ನು ವರ್ಗಾವಣೆ ಮಾಡಿರುವುದು ಸರಿಯಲ್ಲ. ಇಷ್ಟು ಕಡಿಮೆ ಅವಧಿಯಲ್ಲಿ ಅಧಿಕಾರಿಗಳು ಮುಕ್ತವಾಗಿ ಕೆಲಸ ಮಾಡಲು ಹೇಗೆ ಸಾಧ್ಯ?" ಎಂದು ಅವರು ಪ್ರಶ್ನಿಸಿದರು.

ಬೃಹತ್ ಪಾದಯಾತ್ರೆ ಎಚ್ಚರಿಕೆ: ಪೊಲೀಸ್ ಮಹಾನಿರ್ದೇಶಕರು ಈ ಕೂಡಲೇ ಮಧ್ಯಪ್ರವೇಶಿಸಿ ನಾರಾಯಣಸ್ವಾಮಿ ಅವರನ್ನು ಮತ್ತೆ ಬೂದಿಕೋಟೆ ಠಾಣೆಗೇ ನೇಮಿಸಬೇಕು. ಇಲ್ಲವಾದಲ್ಲಿ, ಬೆಂಗಳೂರಿನ ಹೊಸಕೋಟೆಯಿಂದ ಫ್ರೀಡಂ ಪಾರ್ಕ್‌ವರೆಗೂ ವಿವಿಧ ದಲಿತ ಸಂಘಟನೆಗಳು ಹಮ್ಮಿಕೊಂಡಿರುವ ಬೃಹತ್ ಕಾಲ್ನಡಿಗೆ ಜಾಥಾದಲ್ಲಿ ಈ ವರ್ಗಾವಣೆ ವಿಷಯವನ್ನೂ ಪ್ರಸ್ತಾಪಿಸಿ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ಎಚ್ಚರಿಸಿದರು. ಅಲ್ಲದೆ, ಬೆಂಗಳೂರಿನಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 200 ಮೀಟರ್ ಎತ್ತರದ ಪ್ರತಿಮೆ ಸ್ಥಾಪಿಸಬೇಕು ಎಂಬ ಬೇಡಿಕೆಯನ್ನೂ ಈ ಸಂದರ್ಭದಲ್ಲಿ ಒತ್ತಾಯಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಚಿಂಟು ರಾಮಚಂದ್ರ, ಸಕ್ಕನಹಳ್ಳಿ ಮುನಿರಾಜು ಸೇರಿದಂತೆ ಸಂಘಟನೆಯ ಪ್ರಮುಖರು ಉಪಸ್ಥಿತರಿದ್ದರು.

# ರೂರಲ್ ಕಾಲೇಜಿನಲ್ಲಿ 'ಪೈ' ದಿನಾಚರಣೆ ಸಂಭ್ರಮ

ಕನಕಪುರ

ಇಲ್ಲಿನ ಪ್ರಖ್ಯಾತ ರೂರಲ್ ಕಾಲೇಜು ಶಿಕ್ಷಣ ಸಂಸ್ಥೆಯಲ್ಲಿ ಗಣಿತ ವಿಭಾಗದ ವತಿಯಿಂದ ಅಂತರರಾಷ್ಟ್ರೀಯ ಪೈ ದಿನವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.

ಸಂಸ್ಥೆಯ ಅಧ್ಯಕ್ಷರಾದ ಹೆಚ್. ಕೆ. ಶ್ರೀಕಂಠ ಅವರ ಮಾರ್ಗದರ್ಶನದಲ್ಲಿ ಈ ವಿಶೇಷ ಕಾರ್ಯಕ್ರಮ ಆಯೋಜನೆಗೊಂಡಿತ್ತು. ಬೆಂಗಳೂರಿನ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದ ಡಾ. ಡೇವಿಡ್ ಎ. ಕಲಕೋರ್ಪ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, "ಗಣಿತದ ಸ್ಥಿರಾಂಕವಾದ ಕೇವಲ ಸಂಖ್ಯೆಯಲ್ಲ, ಅದರ ಅನ್ವಯಗಳು ವಿಜ್ಞಾನ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಅಪಾರವಾಗಿವೆ," ಎಂದರು.

ವಿದ್ಯಾರ್ಥಿಗಳು IIT, IISc, ISI ನಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಉನ್ನತ ಶಿಕ್ಷಣ ಪಡೆಯುವ ಬಗ್ಗೆ ಮಾಹಿತಿ ನೀಡಿದ ಅವರು, IIT-JAM ನಂತಹ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಕ್ರಮಗಳ ಬಗ್ಗೆ ಮಾರ್ಗದರ್ಶನ ನೀಡಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ:

ಗಣಿತ ವಿಷಯದಲ್ಲಿ ಅತ್ಯುತ್ತಮ ಅಂಕ ಗಳಿಸಿದ ಕಾಲೇಜಿನ ವಿದ್ಯಾರ್ಥಿಗಳಾದ ಸೌಂದರ್ಯ ಆರ್. (100/100), ಪ್ರಿಯಾಂಕಾ ಎಂ. (98/100) ಮತ್ತು ಹರ್ಷಿತ್ ಗೌಡ (98/100) ಅವರನ್ನು ಈ ಸಂದರ್ಭದಲ್ಲಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ. ಎಂ. ಎಸ್. ಕೆಂಪೇಗೌಡ ವಹಿಸಿದ್ದರು. ಐಕ್ಯೂಎಸಿ ಸಂಯೋಜಕ ಎ. ಪಿ. ಪ್ರಕಾಶ್, ವಿಜ್ಞಾನ ವಿಭಾಗದ ಡೀನ್ ಡಾ. ವಿಮಲಾ ಟಿ., ಉಪನ್ಯಾಸಕಿ ಜ್ಯೋತಿ, ಗಣಿತ ವಿಭಾಗದ ಡಾ. ರಘು ವಿ.ಡಿ ಹಾಗೂ ಬೋಧಕ ವೃಂದ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# 19ರಿಂದ ಶ್ರೀ ಬಲಭೀಮ ದೇವರ ಓಕಳಿ ಹಾಗೂ ಜಡಿಸಿದ್ದೇಶ್ವರ ಜಾತ್ರೆ

ಮೂಡಲಗಿ

ತಾಲೂಕಿನ ಭೈರನಟ್ಟಿ ಗ್ರಾಮದಲ್ಲಿ ಮಾರ್ಚ್ 19 ರಿಂದ 24 ರವರೆಗೆ ಶ್ರೀ ಬಲಭೀಮ ದೇವರ ಓಕಳಿ ಹಾಗೂ ಪವಾಡ ಪುರುಷ ಶ್ರೀ ಜಡಿಸಿದ್ದೇಶ್ವರ ಜಾತ್ರಾ ಮಹೋತ್ಸವವು ಅತ್ಯಂತ ವೈಭವದಿಂದ ಜರುಗಲಿದೆ. ಭೈರನಟ್ಟಿ-ಕರಡಿಗುದ್ದಿಯ ಶ್ರೀ ರುದ್ರಯ್ಯ ಅಜ್ಜನವರ ನೇತೃತ್ವದಲ್ಲಿ ವಿವಿಧ ಮಠಾಧೀಶರ ಸಾನ್ನಿಧ್ಯದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಆರ್.ಕೆ. ಪಾಟೀಲ ತಿಳಿಸಿದ್ದಾರೆ.

ಮಾ.19: ಸಂಜೆ 7ಕ್ಕೆ ಶ್ರೀಮಠದ ಪಲ್ಲಕ್ಕಿ ಉತ್ಸವ. ಮನ್ನಿಕೇರಿ ಮಠದ ಶ್ರೀ ವಿಜಯಸಿದ್ದೇಶ್ವರ ಶ್ರೀಗಳ ಸಾನ್ನಿಧ್ಯದಲ್ಲಿ 'ಗೋಮಾಬಾಯಿ ಚರಿತ್ರೆ' ಪ್ರವಚನ ಆರಂಭ.

ಮಾ.20: ಸಂಜೆ 7ಕ್ಕೆ ಸಂಗೀತ ಸೇವೆ ಹಾಗೂ ಉಚ್ಚಾಯ ಕಾರ್ಯಕ್ರಮಕ್ಕೆ ಚಾಲನೆ. ಸುಣಧೋಳಿಯ ಶ್ರೀ ಶಿವಾನಂದ ಶ್ರೀಗಳ ಸಾನ್ನಿಧ್ಯದಲ್ಲಿ 'ಸಂತ ರೋಹಿದಾಸ ಚರಿತ್ರೆ' ಪ್ರವಚನ.

ಮಾ.21: ಸಂಜೆ 5ಕ್ಕೆ ಶ್ರೀ ಬಲಭೀಮ ದೇವರ ಓಕಳಿಯ ಕೊಂಡ ಪೂಜೆ. ಲಕ್ಷ್ಮೇಶ್ವರ ಕ್ರಾಸ್‌ನ ಮಾತೋಶ್ರೀ ಗೀತಾಭಾರತಿ ಅಮ್ಮನವರ ಸಾನ್ನಿಧ್ಯದಲ್ಲಿ 'ಸೇನಾ ನಾಪಿತನ ಚರಿತ್ರೆ' ಪ್ರವಚನ.

ಮಾ.22: ಸಂಜೆ 4ಕ್ಕೆ 'ನಡು ಓಕುಳಿ'. ಬಾಗೋಜಿಕೊಪ್ಪದ ಡಾ. ಶಿವಲಿಂಗ ಮುರಘರಾಜೇಂದ್ರ ಶಿವಾಚಾರ್ಯ ಶ್ರೀಗಳ ಸಾನ್ನಿಧ್ಯದಲ್ಲಿ 'ಪಿಪಾಜಿರಾಜನ ಚರಿತ್ರೆ' ಪ್ರವಚನ. ಮಾ.23: ಸಂಜೆ 4ಕ್ಕೆ 'ಕಡೆಯ ಓಕುಳಿ'. ಶ್ರೀ ಶಶಿಕಾಂತ ಗುರೂಜಿ ಸಾನ್ನಿಧ್ಯದಲ್ಲಿ 'ಭಕ್ತ ನರಹರಿ' ಪ್ರವಚನ. ರಾತ್ರಿ 10ಕ್ಕೆ ಅಮ್ಮಟ್ಟಿಯ ಶ್ರೀ ಶಿವಬೋಧರಂಗ ಪಾರಿಜಾತ ಸಂಘದವರಿಂದ 'ಶ್ರೀಕೃಷ್ಣ ಪಾರಿಜಾತ' ನಾಟಕ ಪ್ರದರ್ಶನ.

# 'ಬಿಎಸ್ಪಿ ಕೇವಲ ಪಕ್ಷವಲ್ಲ, ಶೋಷಿತರ ಬದುಕಿನ ಆಯುಧ'

ದೇವನಹಳ್ಳಿ

"ದೇಶಾದ್ಯಂತ ದಲಿತ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗಗಳಿಗೆ ರಾಜಕೀಯ ಶಕ್ತಿ ನೀಡುವ ಉದ್ದೇಶದಿಂದ ಮಾನ್ಯ ಕಾನ್ಶಿರಾಮ್ ಅವರು ಬೃಹತ್ ಬಹುಜನ ಚಳುವಳಿಯನ್ನು ಆರಂಭಿಸಿದರು," ಎಂದು ಬಿಎಸ್ಪಿ ರಾಜ್ಯ ಸಂಯೋಜಕ ಹಾಗೂ ಬೆಂಗಳೂರು ವಲಯ ಉಸ್ತುವಾರಿ ಅಶೋಕ ಚಕ್ರವರ್ತಿ ತಿಳಿಸಿದರು.

ಪಟ್ಟಣದ ಹಳೆ ಬಸ್ ನಿಲ್ದಾಣದ ಬಳಿ ಭಾನುವಾರ ಆಯೋಜಿಸಲಾಗಿದ್ದ ಬಹುಜನ ಸಮಾಜ ಪಕ್ಷದ ಸ್ಥಾಪಕ ಕಾನ್ಶಿರಾಮ್ ಅವರ 92ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯಗಳಂತೆ ಶೋಷಿತ ವರ್ಗಗಳಿಗೆ ಆತ್ಮಗೌರವದ ಅರಿವು ಮೂಡಿಸಿದ ಕೀರ್ತಿ ಕಾನ್ಶಿರಾಮ್ ಅವರಿಗೆ ಸಲ್ಲುತ್ತದೆ ಎಂದರು. ಈ ಸಂದರ್ಭದಲ್ಲಿ ದೇವನಹಳ್ಳಿ ತಾಲೂಕಿನಲ್ಲಿ ಪಕ್ಷ ಕಟ್ಟಲು ಶ್ರಮಿಸಿದ ಕೋರಮಂಗಲದ ಮುನಿಯಪ್ಪ ಅವರನ್ನು ಸ್ಮರಿಸಿ ಕೃತಜ್ಞತೆ ಸಲ್ಲಿಸಿದರು.

ಚುನಾವಣೆಗೆ ಬೂತ್ ಸಮಿತಿ ಬಲಪಡಿಸಿ: ಜಿಲ್ಲಾಧ್ಯಕ್ಷ ಬಲರಾಮಚಂದ್ರ ಮಾತನಾಡಿ, "ಮತ ನಮ್ಮದು ಆಡಳಿತ ನಿಮ್ಮದು ಎಂಬ ಅಸಮಾನ ರಾಜಕೀಯ ವ್ಯವಸ್ಥೆಯನ್ನು ಬದಲಾಯಿಸಲು ಕಾನ್ಶಿರಾಮ್ ಅವರು ಬಹುಜನರನ್ನು ಸಂಘಟಿಸಿದರು. ಮುಂಬರುವ ತಾಲೂಕು, ಜಿಲ್ಲಾ ಮತ್ತು ಗ್ರಾಮ ಪಂಚಾಯಿತಿ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಕಾರ್ಯಕರ್ತರು ಗ್ರಾಮ ಮಟ್ಟದಲ್ಲಿ ಬೂತ್ ಸಮಿತಿಗಳನ್ನು ಬಲಪಡಿಸಬೇಕು," ಎಂದು ಕರೆ ನೀಡಿದರು.

ಬಿಎಸ್ಪಿ ಎಲ್ಲಾ ಸಮುದಾಯಗಳ ಪಕ್ಷ: ಕಾರ್ಯದರ್ಶಿ ಹೆಚ್. ನರಸಿಂಹಯ್ಯ ಮಾತನಾಡಿ, "ಬಿಎಸ್ಪಿ ಕೇವಲ ಒಂದು ವರ್ಗಕ್ಕೆ ಸೀಮಿತವಾದ ಪಕ್ಷವಲ್ಲ. ಇದು ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರಿಗೂ ಸೇರಿದ ಪಕ್ಷವಾಗಿದೆ. ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಶೋಷಿತ ವರ್ಗಗಳನ್ನು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಂಡಿವೆ. ಇದನ್ನು ಬದಲಾಯಿಸಲು ಪ್ರಜ್ಞಾವಂತರು ಬಿಎಸ್ಪಿ ಜೊತೆ ಕೈಜೋಡಿಸಬೇಕು," ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬೆಂಗಳೂರು ವಲಯ ಉಸ್ತುವಾರಿ ನಾಗರಾಜ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ್, ಜಿಲ್ಲಾ ಉಪಾಧ್ಯಕ್ಷ ಕಾರಲ್ಲಿ ಮುನಿರಾಜು, ತಾಲೂಕು ಅಧ್ಯಕ್ಷ ರಾಮಾಂಜಿನಪ್ಪ, ಉಪಾಧ್ಯಕ್ಷ ದೇವರಾಜ್ ಸೇರಿದಂತೆ ಹಲವು ಮುಖಂಡರು ಹಾಗೂ ಮಹಿಳಾ ನಾಯಕಿಯರು ಉಪಸ್ಥಿತರಿದ್ದರು.

# ಡಿಎಂಆರ್ ಫೌಂಡೇಷನ್ ವತಿಯಿಂದ ಯುಗಾದಿ ಉತ್ಸವ

ಕೋಲಾರ

ನಗರದ ಜೂನಿಯರ್ ಕಾಲೇಜು ಮೈದಾನದಲ್ಲಿ ಮಾರ್ಚ್ 19ರ ಶುಕ್ರವಾರ ಸಂಜೆ 7 ಗಂಟೆಗೆ ದ್ಯಾವೀರಪ್ಪ ಮತ್ತು ರತ್ನಮ್ಮ (ಡಿ.ಎಂ.ಆರ್) ಫೌಂಡೇಷನ್ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದೊಂದಿಗೆ 'ಕೋಲಾರ ಯುಗಾದಿ ಉತ್ಸವ-2026' ಅನ್ನು ಅದ್ದೂರಿಯಾಗಿ ಆಯೋಜಿಸಲಾಗಿದೆ ಎಂದು ಫೌಂಡೇಷನ್ ಕಾರ್ಯದರ್ಶಿ ಡಿ. ಮುನಿರಾಜು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ಚಿತ್ರರಂಗದ ತಾರೆಯರ ಸಮಾಗಮವಾಗಲಿದ್ದು, ಗಾಯನ ಮತ್ತು ನೃತ್ಯದ ಮೂಲಕ ಜನರನ್ನು ರಂಜಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ತಾರೆಯರ ಹೊಳೆ: ಸಂಜೆ 7 ಗಂಟೆಗೆ ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ತಂಡದಿಂದ 'ಮ್ಯೂಸಿಕಲ್ ನೈಟ್' ನಡೆಯಲಿದೆ. ರಾತ್ರಿ 8 ಗಂಟೆಗೆ ಕನ್ನಡ ಚಿತ್ರರಂಗದ ಹಿರಿಯ ನಟ ಕ್ರೇಜಿಸ್ಟಾರ್ ರವಿಚಂದ್ರನ್ ಮತ್ತು ನಟಿ ಅನು ಪ್ರಭಾಕರ್ ಭಾಗವಹಿಸಲಿದ್ದಾರೆ. ಅವರೊಂದಿಗೆ ಯುವ ನಟ ಯುವ ರಾಜ್‌ಕುಮಾರ್ ಮತ್ತು ನಟಿ ಸಂಜನಾ ಆನಂದ್ ಆಗಮಿಸಿ ಮೆರುಗು ನೀಡಲಿದ್ದಾರೆ. ಇದೇ ವೇದಿಕೆಯಲ್ಲಿ ಜಿಲ್ಲೆಯ 5 ಮಂದಿ ಯುಪಿಎಸ್‌ಸಿ ಸಾಧಕರಿಗೆ ವಿಶೇಷ ಸನ್ಮಾನ ಹಮ್ಮಿಕೊಳ್ಳಲಾಗಿದೆ.

20 ಸಾವಿರ ಜನರಿಗೆ ವ್ಯವಸ್ಥೆ: ಸುಮಾರು 20 ಸಾವಿರ ಜನರು ಕುಳಿತು ವೀಕ್ಷಿಸಲು ಆಸನ ವ್ಯವಸ್ಥೆ ಮಾಡಲಾಗಿದ್ದು, ಎಲ್ಲರಿಗೂ ಉಚಿತ ಪ್ರವೇಶ ಕಲ್ಪಿಸಲಾಗಿದೆ. ಯಾವುದೇ ಪಾಸ್ ವ್ಯವಸ್ಥೆ ಇರುವುದಿಲ್ಲ, ಮೊದಲು ಬಂದವರಿಗೆ ಆದ್ಯತೆ ಮೇರೆಗೆ ಆಸನಗಳು ದೊರೆಯಲಿವೆ. ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್ ಸೇರಿದಂತೆ ಹಲವು ಗಣ್ಯರು ಅತಿಥಿಗಳಾಗಿ ಆಗಮಿಸಲಿದ್ದಾರೆ.

ಪರಂಪರೆಯಾಗಿ ಮುಂದುವರಿದ ಉತ್ಸವ: ಎಪಿಎಂಸಿ ಪುಟ್ಟರಾಜು ಮಾತನಾಡಿ, "ಕೊರೊನಾ ನಂತರದ ದಿನಗಳಲ್ಲಿ ಜನರಿಗೆ ಮನರಂಜನೆ ನೀಡಲು ಅಂದಿನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೇವರಾಜ್ ಅವರು ಆರಂಭಿಸಿದ ಈ ಉತ್ಸವ ಇಂದು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಇಂದು ಅವರು ಬೆಂಗಳೂರಿನಲ್ಲಿ ಡಿಐಜಿಪಿ ಆಗಿದ್ದರೂ, ತಮ್ಮ ಹೆತ್ತವರ ಹೆಸರಿನ ಫೌಂಡೇಶನ್ ಮೂಲಕ ತವರಿನ ಜನರ ಮೇಲಿನ ಪ್ರೀತಿಯಿಂದ ಈ ಸೇವಾ ಕಾರ್ಯಕ್ರಮ ಮುಂದುವರಿಸುತ್ತಿರುವುದು ಶ್ಲಾಘನೀಯ," ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಕೆ. ಚಂದ್ರಶೇಖರ್, ಬೆಗ್ಲಿ ವೆಂಕಟೇಶ್, ಎ.ಜಿ. ಸುರೇಶ್‌ಕುಮಾರ್ ಹಾಗೂ ಬಿ.ಎಲ್. ರಾಜೇಂದ್ರ ಸಿಂಹ ಉಪಸ್ಥಿತರಿದ್ದರು.

# ವರದಕ್ಷಿಣೆ ಕಿರುಕುಳಕ್ಕೆ ನವವಿವಾಹಿತೆ ಬಲಿ

ಕನಕಪುರ

ಪತಿ ಹಾಗೂ ಅತ್ತೆ-ಮಾವನ ನಿರಂತರ ಕಿರುಕುಳಕ್ಕೆ ಬೇಸತ್ತು ವಿವಾಹಿತೆಯೊಬ್ಬಳು ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿರುವ ಘಟನೆ ಬೆಂಗಳೂರು ದಕ್ಷಿಣ ಜಿಲ್ಲೆಯ ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯ ಗೇರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗೇರಹಳ್ಳಿಯ ಶಿವಕುಮಾರ್ ಎಂಬುವವರ ಪತ್ನಿ ನವ್ಯ ಶ್ರೀ (26) ಅನುಮಾನಾಸ್ಪದವಾಗಿ ಸಾವನ್ನಪ್ಪಿದ ಮಹಿಳೆ. ಮೃತೆಯ ಪೋಷಕರು ಈ ಸಾವಿನ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಇದು ಆತ್ಮಹತ್ಯೆಯಲ್ಲ, ಬದಲಿಗೆ ಪತಿ ಮತ್ತು ಆತನ ಕುಟುಂಬದವರು ಸೇರಿ ಮಾಡಿದ ಕೊಲೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಸಾತನೂರು ಪೊಲೀಸ್ ಠಾಣೆಯ ಎಸ್‌ಐ ಸಮಂತ್ ಗೌಡ ಅವರು ಮೃತೆಯ ಪೋಷಕರ ದೂರಿನ ಮೇರೆಗೆ ಪತಿ, ಅತ್ತೆ ಮತ್ತು ಮಾವನ ವಿರುದ್ಧ ಕೊಲೆ ಹಾಗೂ ಕಿರುಕುಳದ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಶವವನ್ನು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗಾಗಿ ದಯಾನಂದ ಸಾಗರ್ ಆಸ್ಪತ್ರೆಗೆ ಕಳುಹಿಸಲಾಗಿದೆ. ಸದ್ಯ ತಲೆಮರೆಸಿಕೊಂಡಿರುವ ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

# ಮುಳಬಾಗಿಲು ಆಂಜನೇಯ ಸ್ವಾಮಿ ಸನ್ನಿಧಿಯಲ್ಲಿ ಭಕ್ತರ ಪರದಾಟ



ಮುಳಬಾಗಿಲು

ರಾಜ್ಯದ ಪ್ರಮುಖ ಧಾರ್ಮಿಕ ಕೇಂದ್ರಗಳಲ್ಲಿ ಒಂದಾದ ಮುಳಬಾಗಿಲು ನಗರದ ಪುರಾಣ ಪ್ರಸಿದ್ಧ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಬರುವ ಸಾವಿರಾರು ಭಕ್ತರು ಈಗ ಮೂಲಸೌಕರ್ಯ ಹಾಗೂ ಸಂಚಾರ ದಟ್ಟಣೆಯಿಂದಾಗಿ ಹೈರಾಣಾಗುತ್ತಿದ್ದಾರೆ. ದೇವಸ್ಥಾನದ ಮುಂಭಾಗದ ರಸ್ತೆಯು ಅತಿಕ್ರಮಣಕಾರರ ಪಾಲಾಗಿದ್ದು, ಭಕ್ತರ ಸುಗಮ ಸಂಚಾರಕ್ಕೆ ಕುತ್ತು ತಂದಿದೆ.

ರಸ್ತೆ ಬದಿಯೇ ವ್ಯಾಪಾರ ಕೇಂದ್ರ: ಜಿಲ್ಲಾಡಳಿತದ ನೇರ ಉಸ್ತುವಾರಿಯಲ್ಲಿರುವ ಈ ದೇವಾಲಯಕ್ಕೆ ರಜಾ ದಿನಗಳಲ್ಲಿ ರಾಜ್ಯ ಹಾಗೂ ನೆರೆಯ ರಾಜ್ಯಗಳಿಂದ ಸಾವಿರಾರು ಭಕ್ತರು ಮತ್ತು ವಿವಿಐಪಿಗಳು ಭೇಟಿ ನೀಡುತ್ತಾರೆ. ಆದರೆ, ದೇವಸ್ಥಾನದ ಮುಂಭಾಗದ ರಸ್ತೆ ಬದಿಯಲ್ಲಿ ತೆಂಗಿನಕಾಯಿ, ಕಡಲೆಪುರಿ ಹಾಗೂ ಇತರೆ ಮಳಿಗೆಗಳನ್ನು ಅನಧಿಕೃತವಾಗಿ ಇರಿಸಲಾಗಿದ್ದು, ಭಕ್ತರು ನಡೆದಾಡಲು ಜಾಗವಿಲ್ಲದಂತಾಗಿದೆ. ಇದರಿಂದ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೂ ಅಡ್ಡಿಯಾಗುತ್ತಿದ್ದು, ಹಲವು ವಾಹನಗಳು ಜಖಂಗೊಂಡಿರುವ ಉದಾಹರಣೆಗಳಿವೆ.

ಅಡ್ಡಾದಿಡ್ಡಿ ಪಾರ್ಕಿಂಗ್ ಕಿರಿಕಿರಿ: ದೇವಸ್ಥಾನದ ಸುತ್ತಮುತ್ತ ಸಾರ್ವಜನಿಕರು ಮನಬಂದಂತೆ ವಾಹನಗಳನ್ನು ನಿಲುಗಡೆ ಮಾಡುತ್ತಿದ್ದಾರೆ. ಇದರಿಂದ ದೇವಸ್ಥಾನಕ್ಕೆ ಬರುವ ಭಕ್ತರ ವಾಹನಗಳನ್ನು ಪಾರ್ಕಿಂಗ್ ಮಾಡಲು ಜಾಗವಿಲ್ಲದೆ ಪರದಾಡುವಂತಾಗಿದೆ. ಅಧಿಕಾರಿಗಳು ಈ ಸಮಸ್ಯೆಯನ್ನು ಕಣ್ಣಾರೆ ಕಂಡರೂ ಕಂಡು ಕಾಣದಂತೆ ಮೌನಕ್ಕೆ ಶರಣಾಗಿದ್ದಾರೆ ಎಂದು ಭಕ್ತರು ದೂರಿದ್ದಾರೆ.

ಅಧಿಕಾರಿಗಳ ಪತ್ರಕ್ಕೆ ಸಿಗದ ಬೆಲೆ: ಸಮಸ್ಯೆ ಗಂಭೀರವಾಗುತ್ತಿರುವುದನ್ನು ಮನಗಂಡ ಮುಳಬಾಗಿಲು ತಹಸೀಲ್ದಾರ್ ಹಾಗೂ ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ. ಸುಬ್ರಮಣ್ಯ ಅವರು ಕಳೆದ ಮಾರ್ಚ್ 2, 2026 ರಂದು ನಗರಸಭೆ ಆಯುಕ್ತರು ಹಾಗೂ ಪೊಲೀಸ್ ಉಪಾಧೀಕ್ಷಕರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಪತ್ರ ಬರೆದಿದ್ದರು. ಆದರೆ, ಪತ್ರ ಬರೆದು ಹಲವು ದಿನಗಳಾದರೂ ಸ್ಥಳೀಯ ಆಡಳಿತವಾಗಲಿ ಅಥವಾ ಪೊಲೀಸ್ ಇಲಾಖೆಯಾಗಲಿ ಯಾವುದೇ ಕ್ರಮಕ್ಕೆ ಮುಂದಾಗಿಲ್ಲ.

ಜಿಲ್ಲಾಧಿಕಾರಿಗಳು ಈ ವಿಚಾರದಲ್ಲಿ ಮಧ್ಯಪ್ರವೇಶಿಸಿ, ದೇವಸ್ಥಾನದ ಮುಂಭಾಗದ ರಸ್ತೆಯನ್ನು ಅತಿಕ್ರಮಣ ಮುಕ್ತಗೊಳಿಸಿ, ಭಕ್ತರಿಗೆ ನೆಮ್ಮದಿಯ ದರ್ಶನಕ್ಕೆ ಅವಕಾಶ ಮಾಡಿಕೊಡಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಸಹಕಾರ ಸಂಘಗಳನ್ನು ಸಿಎಸ್‌ಆರ್ ವ್ಯಾಪ್ತಿಗೆ ತನ್ನಿ: ವೈ.ಹೆಚ್. ಮಂಜು ಆಗ್ರಹ



ರಾಮನಗರ

ತಾಲ್ಲೂಕಿನ ಯರೇಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ (ಪ್ಯಾಕ್ಸ್) ನೂತನ ಅಧ್ಯಕ್ಷರಾಗಿ ಸಂತೋಷಕುಮಾರ್ (ತೇಜು) ಹಾಗೂ ಉಪಾಧ್ಯಕ್ಷರಾಗಿ ಮಾಯಣ್ಣ ಅವರು ಸೋಮವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಹಿಂದಿನ ಅಧ್ಯಕ್ಷ ನಾಗಣ್ಣ ಹಾಗೂ ಉಪಾಧ್ಯಕ್ಷೆ ಕವಿತಾ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಗಳಿಗೆ ಚುನಾವಣೆ ಆಯೋಜಿಸಲಾಗಿತ್ತು. ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಮಂಜುನಾಥ್ ಅವರು ಅವಿರೋಧ ಆಯ್ಕೆಯನ್ನು ಘೋಷಿಸಿದರು. ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ವೈ.ಹೆಚ್. ಮಂಜು ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದರು.


ಕೇಂದ್ರದ ಧೋರಣೆಗೆ ಆಕ್ರೋಶ: ಈ ಸಂದರ್ಭದಲ್ಲಿ ಮಾತನಾಡಿದ ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ವೈ.ಹೆಚ್. ಮಂಜು, "ಬಿಡಿಸಿಸಿ ಬ್ಯಾಂಕ್ ಮೂಲಕ ಶೂನ್ಯ ಬಡ್ಡಿ ದರದಲ್ಲಿ ಕೆಸಿಸಿ ಬೆಳೆ ಸಾಲ ನೀಡಲಾಗುತ್ತಿದೆ. ಆದರೆ, ಇತ್ತೀಚೆಗೆ ಕೇಂದ್ರ ಸರ್ಕಾರ ತನ್ನ ಪಾಲಿನ ರಿಯಾಯಿತಿ ಹಣ ಬಿಡುಗಡೆ ಮಾಡದೆ ಶೇ. 60ರಷ್ಟು ಸಾಲವನ್ನು ಸ್ಥಗಿತಗೊಳಿಸಿರುವುದು ಖಂಡನೀಯ. ತಾರತಮ್ಯ ಕೈಬಿಟ್ಟು ಕೂಡಲೇ ಹಣ ಬಿಡುಗಡೆ ಮಾಡಬೇಕು," ಎಂದು ಒತ್ತಾಯಿಸಿದರು.

ಸಿಎಸ್‌ಆರ್ ನಿಧಿಗೆ ಮನವಿ: ಜಿಲ್ಲೆಯ ಹಲವು ಸಹಕಾರ ಸಂಘಗಳ ಕಟ್ಟಡಗಳು ದುಸ್ಥಿತಿಯಲ್ಲಿವೆ. "ಕೈಗಾರಿಕೆಗಳ ಸಾಮಾಜಿಕ ಜವಾಬ್ದಾರಿ ನಿಧಿಯನ್ನು ಗ್ರಾಮೀಣ ಪ್ಯಾಕ್ಸ್ ಲೇಔಟ್ ಮತ್ತು ಕಟ್ಟಡ ನಿರ್ಮಾಣಕ್ಕೆ ಬಳಸಲು ಅವಕಾಶ ನೀಡಬೇಕು. ಈ ಮೂಲಕ ಕೇಂದ್ರ ಗೃಹ ಹಾಗೂ ಸಹಕಾರ ಸಚಿವ ಅಮಿತ್ ಷಾ ಅವರು ರೈತರ ನೆರವಿಗೆ ಬರಬೇಕು," ಎಂದು ಮನವಿ ಮಾಡಿದರು. ಈ ಬಗ್ಗೆ ಸ್ಥಳೀಯ ಶಾಸಕರು ಹಾಗೂ ಬಮೂಲ್ ಅಧ್ಯಕ್ಷರ ಗಮನ ಸೆಳೆಯುವುದಾಗಿ ಅವರು ತಿಳಿಸಿದರು.

ನೂತನ ಅಧ್ಯಕ್ಷ ಸಂತೋಷ್‌ಕುಮಾರ್ ಮಾತನಾಡಿ, "ಶಾಸಕ ಎಚ್.ಸಿ. ಬಾಲಕೃಷ್ಣ ಮತ್ತು ಮುಖಂಡರ ಮಾರ್ಗದರ್ಶನದಲ್ಲಿ ಸಂಘವನ್ನು ಲಾಭದತ್ತ ಕೊಂಡೊಯ್ಯಲಾಗುವುದು. ಈಗಾಗಲೇ ನಮ್ಮ ಸಂಘದಿಂದ 9 ಕೋಟಿ ರೂ. ಬೆಳೆ ಸಾಲ ವಿತರಿಸಲಾಗಿದ್ದು, ರೈತರ ಏಳಿಗೆಗಾಗಿ ಶ್ರಮಿಸುತ್ತೇವೆ," ಎಂದರು. ಈ ಕಾರ್ಯಕ್ರಮದಲ್ಲಿ ಸಂಘದ ನಿರ್ದೇಶಕರಾದ ಯೋಗರಾಜ್, ಜಯಪಾಲ್, ಮಂಗಮ್ಮ, ಕವಿತಾ ಆನಂದ್, ಟಿಎಪಿಸಿಎಂಎಸ್ ನಿರ್ದೇಶಕ ಮಹದೇವಯ್ಯ, ಸಿಇಓ ದಿನೇಶ್ ಹಾಗೂ ಹಲವು ಸಹಕಾರಿ ಧುರೀಣರು ಉಪಸ್ಥಿತರಿದ್ದರು.

# ನಾಳೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ; ನಕಲು ತಡೆಗೆ ಜಿಲ್ಲಾಡಳಿತದ ಕಟ್ಟುನಿಟ್ಟಿನ ಕ್ರಮ

ತುಮಕೂರು




ಜಿಲ್ಲೆಯಲ್ಲಿ ಇದೇ 18 ರಿಂದ ಏಪ್ರಿಲ್ 2ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ (ಪರೀಕ್ಷೆ-1) ಸುಸೂತ್ರವಾಗಿ ನಡೆಸಲು ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಈ ಬಾರಿ ಜಿಲ್ಲೆಯ ಒಟ್ಟು 131 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ವೆಬ್‌ಕಾಸ್ಟಿಂಗ್ ಮೂಲಕ ಹದ್ದಿನ ಕಣ್ಣು ಇಡಲಾಗಿದೆ.

ಪರೀಕ್ಷಾರ್ಥಿಗಳ ವಿವರ: ಈ ಬಾರಿ ತುಮಕೂರು ದಕ್ಷಿಣ ಜಿಲ್ಲೆಯಿಂದ 23,693 ಹಾಗೂ ಮಧುಗಿರಿ ಶೈಕ್ಷಣಿಕ ಜಿಲ್ಲೆಯಿಂದ 13,437 ಸೇರಿ ಒಟ್ಟು 37,130 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. ಜಿಲ್ಲೆಯ 10 ತಾಲ್ಲೂಕುಗಳಲ್ಲಿ ಒಟ್ಟು 131 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಪರೀಕ್ಷಾ ಕಾರ್ಯಕ್ಕಾಗಿ ಈಗಾಗಲೇ ಮುಖ್ಯ ಅಧೀಕ್ಷಕರು ಮತ್ತು ಪ್ರಶ್ನೆ ಪತ್ರಿಕೆ ಪಾಲಕರುಗಳನ್ನು ನೇಮಕ ಮಾಡಿ ತರಬೇತಿ ನೀಡಲಾಗಿದೆ.

ವೆಬ್‌ಕಾಸ್ಟಿಂಗ್ ಮತ್ತು ನಿಷೇಧಾಜ್ಞೆ: ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಪ್ರತಿ ಕೊಠಡಿ ಮತ್ತು ಕಾರಿಡಾರ್‌ಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಈ ಕೇಂದ್ರಗಳ ಚಲನವಲನಗಳನ್ನು ಜಿಲ್ಲಾ ಪಂಚಾಯತ್ ಕಚೇರಿಯಿಂದ ವೆಬ್‌ಕಾಸ್ಟಿಂಗ್ ಮೂಲಕ ನೇರವಾಗಿ ವೀಕ್ಷಣೆ ಮಾಡಲಾಗುತ್ತದೆ. ಪರೀಕ್ಷಾ ಕೇಂದ್ರದ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಕಲಂ 163ರಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಜೆರಾಕ್ಸ್ ಮತ್ತು ಸೈಬರ್ ಕೆಫೆಗಳನ್ನು ಮುಚ್ಚಿಸಲು ಆದೇಶಿಸಲಾಗಿದೆ.

ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣ ಮತ್ತು ಸೌಲಭ್ಯ: ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರವೇಶ ಪತ್ರ ತೋರಿಸಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. ಬೇಸಿಗೆಯ ತಾಪ ಹೆಚ್ಚಿರುವುದರಿಂದ ಪ್ರತಿ ಕೇಂದ್ರದಲ್ಲೂ ಕುಡಿಯುವ ನೀರು, ಓಆರ್‌ಎಸ್ (ORS) ಮತ್ತು ತುರ್ತು ಔಷಧಗಳೊಂದಿಗೆ ಆರೋಗ್ಯ ಇಲಾಖೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಪರೀಕ್ಷಾ ಅವಧಿಯಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ಬೆಸ್ಕಾಂ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಉತ್ತಮ ಗಾಳಿ, ಬೆಳಕು, ಡೆಸ್ಕ್ ಮತ್ತು ಶೌಚಾಲಯ ವ್ಯವಸ್ಥೆಯನ್ನು ಖಾತ್ರಿಪಡಿಸಲಾಗಿದೆ. ಪರೀಕ್ಷಾ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿಗೆ ಈಗಾಗಲೇ ವಿಸ್ತೃತ ತರಬೇತಿ ನೀಡಲಾಗಿದ್ದು, ಯಾವುದೇ ಲೋಪವಾಗದಂತೆ ಪರೀಕ್ಷೆ ನಡೆಸಲು ಇಲಾಖೆ ಸರ್ವಸನ್ನದ್ಧವಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ತಿಳಿಸಿದ್ದಾರೆ.

# ಬೋವಿ ಸಮುದಾಯ ಒಡೆಯುವ ಯತ್ನಕ್ಕೆ ಆಕ್ರೋಶ

ಬಂಗಾರಪೇಟೆ

"ತಾಲ್ಲೂಕಿನಲ್ಲಿ ಇತ್ತೀಚೆಗೆ ರಚನೆಯಾಗಿರುವ ಬೋವಿ ಕ್ಷೇಮಾಭಿವೃದ್ಧಿ ಸಂಘವು ಕೇವಲ 26 ಮಂದಿಗೆ ಸೀಮಿತವಾಗಿದ್ದು, ಅದು ಇನ್ನೂ ನೋಂದಣಿಯೂ ಆಗಿಲ್ಲ. ಇಂತಹ ಸಂಘಟನೆಗಳು ಸಮುದಾಯವನ್ನು ಇಬ್ಭಾಗ ಮಾಡುವ ಪ್ರಯತ್ನ ಮಾಡುತ್ತಿವೆ," ಎಂದು ರಾಜ್ಯ ಬೋವಿ ವಡ್ಡರ ಸಂಘದ ಜಂಟಿ ಕಾರ್ಯದರ್ಶಿ ರಾಮಚಂದ್ರಪ್ಪ ಕಿಡಿ ಕಾರಿದರು.

ತಾಲ್ಲೂಕಿನ ಕಾರಹಳ್ಳಿ ಸಮೀಪ ನಡೆದ ರಾಜ್ಯ ಬೋವಿ ವಡ್ಡರ ಸಂಘದ ಸಭೆಯಲ್ಲಿ ಮಾತನಾಡಿದ ಅವರು, ಸ್ವಯಂ ಘೋಷಿತ ಪದಾಧಿಕಾರಿಗಳನ್ನು ನೇಮಕ ಮಾಡಿಕೊಂಡು ಮೂಲ ಸಂಘಟನೆಗೆ ಧಕ್ಕೆ ತರುವ ಕೆಲಸ ಮಾಡಲಾಗುತ್ತಿದೆ ಎಂದು ದೂರಿದರು.

ರಾಜಕೀಯ ತೇಜೋವಧೆಯ ಸಂಚು: "ಬೋವಿ ಸಮುದಾಯದ ಏಕೈಕ ಸಂಸದರಾಗಿರುವ ಸ್ಥಳೀಯರಾದ ಮಲ್ಲೇಶ್ ಬಾಬು ಅವರನ್ನು ಕಡೆಗಣಿಸಲಾಗಿದೆ. ಮಾಜಿ ಜಿಪಂ ಅಧ್ಯಕ್ಷೆ ಹಾಗೂ ಹಾಲಿ ಸಂಘದ ಅಧ್ಯಕ್ಷರಾಗಿರುವ ಮಂಗಮ್ಮ ಮುನಿಸ್ವಾಮಿ ಅವರ ರಾಜಕೀಯ ತೇಜೋವಧೆ ಮಾಡುವ ಉದ್ದೇಶದಿಂದ ಈ ಹೊಸ ಗುಂಪು ಹುಟ್ಟಿಕೊಂಡಿದೆ. ಇದು ಸಮುದಾಯಕ್ಕೆ ಬಗೆದ ದ್ರೋಹ," ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ನೂತನ ಪದಾಧಿಕಾರಿಗಳ ಆಯ್ಕೆ: ಇದೇ ಸಂದರ್ಭದಲ್ಲಿ ಬೋವಿ ಸಮುದಾಯದ ವಿವಿಧ ಘಟಕಗಳಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಪೋಷಕರ ಸಂಘದ ಅಧ್ಯಕ್ಷ: ತಮ್ಮೇನಹಳ್ಳಿ ರಮೇಶ್

ಯುವ ವೇದಿಕೆ ಅಧ್ಯಕ್ಷ: ನಾಯಕರಹಳ್ಳಿ ಹನುಮಂತಯ್ಯ

ನಗರ ಘಟಕ ಅಧ್ಯಕ್ಷ: ವೆಂಕಟಾಚಲಪತಿ

ಸರ್ಕಾರಿ ನೌಕರರ ಸಂಘದ ಅಧ್ಯಕ್ಷ: ಆರ್. ಸಂಜೀವಪ್ಪ

ಈ ಸಭೆಯಲ್ಲಿ ಮಾಲೂರು ಲೋಕೇಶ್, ಕಳವಂಚಿ ವೆಂಕಟೇಶ್, ಬ್ಯಾಂಕ್ ನಾರಾಯಣಪ್ಪ, ಕಾವರನಹಳ್ಳಿ ಬ್ಯಾಟಪ್ಪ, ಬೋವಿನಗರ ಜಯರಾಮ್ ಸೇರಿದಂತೆ ಸಮುದಾಯದ ಪ್ರಮುಖರು ಉಪಸ್ಥಿತರಿದ್ದರು.



# ಸೋಲು ಗೆಲುವಿನ ಸೋಪಾನ; ಕ್ರೀಡಾಂಗಣದಲ್ಲಿ ಮಹಿಳೆಯರ ಕಲರವ!



ಚಿಕ್ಕಬಳ್ಳಾಪುರ

"ಜೀವನದಲ್ಲಿ ಸೋಲು ಗೆಲುವಿನ ಸೋಪಾನ ಎಂಬುದನ್ನು ಅರಿತು ಪ್ರತಿಯೊಬ್ಬ ಮಹಿಳೆಯು ಕ್ರೀಡೆಯಲ್ಲಿ ಉತ್ಸಾಹದಿಂದ ಪಾಲ್ಗೊಳ್ಳಬೇಕು. ನಿತ್ಯ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ," ಎಂದು ಜಿಲ್ಲಾಧಿಕಾರಿ ಜಿ. ಪ್ರಭು ತಿಳಿಸಿದರು.

ನಗರದ ಸರ್ ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಮಹಿಳಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಹಿಳೆಯರ ಸಬಲೀಕರಣಕ್ಕೆ ಒತ್ತು: ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಜಿಲ್ಲೆಯಲ್ಲಿ ಮೊದಲ ಬಾರಿಗೆ ಈ ರೀತಿಯ ಕ್ರೀಡಾಕೂಟ ಆಯೋಜಿಸಿರುವುದು ಸಂತಸ ತಂದಿದೆ ಎಂದ ಜಿಲ್ಲಾಧಿಕಾರಿಗಳು, "ಜನಸಂಖ್ಯೆಯ ಅರ್ಧದಷ್ಟಿರುವ ಮಹಿಳೆಯರು ಇಂದು ಆಡಳಿತ, ಉದ್ಯೋಗ ಸೇರಿದಂತೆ ಎಲ್ಲಾ ರಂಗಗಳಲ್ಲಿ ಪುರುಷರಿಗೆ ಸಮಾನವಾಗಿ ಸಾಧನೆ ಮಾಡುತ್ತಿದ್ದಾರೆ. ಇಂತಹ ಮಹಿಳಾ ವರ್ಗದ ಬಗ್ಗೆ ಪ್ರತಿಯೊಬ್ಬರಿಗೂ ಗೌರವ ಇರಬೇಕು," ಎಂದು ಮಾರ್ಮಿಕವಾಗಿ ನುಡಿದರು. ಮುಂದಿನ ವರ್ಷಗಳಲ್ಲಿ ಈ ಕ್ರೀಡಾಕೂಟವನ್ನು ಇನ್ನೂ ಹೆಚ್ಚಿನ ಮಟ್ಟದಲ್ಲಿ ಅರ್ಥಪೂರ್ಣವಾಗಿ ಆಯೋಜಿಸುವುದಾಗಿ ಅವರು ಭರವಸೆ ನೀಡಿದರು.

ಪ್ರತಿಜ್ಞಾ ವಿಧಿ ಬೋಧನೆ: ಕಾರ್ಯಕ್ರಮದ ಆರಂಭದಲ್ಲಿ ಮಹಿಳಾ ದಿನಾಚರಣೆಯ ಪ್ರಯುಕ್ತ ಕ್ರೀಡಾಪಟುಗಳಿಗೆ ಮತ್ತು ಅಧಿಕಾರಿಗಳಿಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು. ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಆಶಾ ಕಾರ್ಯಕರ್ತೆಯರು ಮತ್ತು ಮಹಿಳೆಯರು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಸಂಭ್ರಮದಿಂದ ಪಾಲ್ಗೊಂಡರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಆರ್. ವೆಂಕಟೇಶರೆಡ್ಡಿ, ಯುವ ಸಬಲೀಕರಣ ಇಲಾಖೆಯ ಕೆ.ಆರ್. ಜಯಲಕ್ಷ್ಮೀ ಬಾಯಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೌತಾಜ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಉಸ್ಮಾನ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy